ಸಂಪುಟ: 14 Volume ಸಂಚಿಕೆ: 90 Issue ಪುಟಗಳು 08 Pages ಭಾನುವಾರ 12 ಜುಲೈ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಸದ್ಗುಣ ಮತ್ತು ದುರ್ಗುಣಗಳ ವ್ಯತ್ಯಾಸ ತಿಳಿಯದಾದಾಗ ನಮ್ಮ ಬೆಳವಣಿಗೆ ನಿಲ್ಲುತ್ತದೆ.
–ಮಹಾತ್ಮಾ ಗಾಂಧಿ



ವಿಜಯನಗರ ಜಿಲ್ಲೆಯ ಹೂವಿನ ಹಡಗಲಿಯಲ್ಲಿ ಇಂದು ಸಿದ್ದರಾಮಯ್ಯ ಅವರು ಕನಕ ಭವನಕ್ಕೆ ಭೇಟಿ ನೀಡಿದಾಗ ಗೌರವಿಸಿದ ಸಂದರ್ಭ. ಸಂಸದ ತುಕಾರಾಂ, ಶಾಸಕರಾದ ಲತಾ ಮಲ್ಲಿಕಾರ್ಜುನ, ಕೃಷ್ಣಾ ನಾಯಕ, ರಾಘವೇಂದ್ರ ಹಿಟ್ನಾಳ್, ಗಣೇಶ ಪ್ರಸಾದ್, ಮಾಜಿ ಸಚಿವರಾದ ಪರಮೇಶ್ವರ ನಾಯಕ ಹಾಜರಿದ್ದರು.

## ಸಮಸ್ಯೆಗಳ ಆಲಿಸಿ ಪರಿಹಾರಕ್ಕೆ ಭರವಸೆ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಮಾಜಿ ಸಚಿವ ರಾಜಶೇಖರ ಪಾಟೀಲ ಅವರ ನಿವಾಸಕ್ಕೆ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ತಮ್ಮ ವೈಯಕ್ತಿಕ ಹಾಗೂ ಸಾರ್ವಜನಿಕ ಸಮಸ್ಯೆಗಳನ್ನು ಮನವಿ ಸಲ್ಲಿಸಿದರು.

ಕುಡಿಯುವ ನೀರು, ರಸ್ತೆ, ವಿದ್ಯುತ್, ಪಿಂಚಣಿ, ಕಂದಾಯ, ಕೃಷಿ ಹಾಗೂ ವಿವಿಧ ಸರ್ಕಾರಿ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಸಾರ್ವಜನಿಕರು ಮಾಜಿ ಸಚಿವರ ಗಮನಕ್ಕೆ ತಂದರು. ಪ್ರತಿಯೊಬ್ಬರ ಅಹವಾಲನ್ನು ತಾಳ್ಮೆಯಿಂದ ಆಲಿಸಿದ ರಾಜಶೇಖರ ಪಾಟೀಲ ಅವರು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗಳ ಶೀಘ್ರ ಪರಿಹಾರಕ್ಕೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವುದು



ಜನಪ್ರತಿನಿಧಿಗಳ ಕರ್ತವ್ಯವಾಗಿದೆ. ಜನರ ಸಂಕಷ್ಟಗಳಿಗೆ ಸಾಧ್ಯವಾದಷ್ಟು ಬೇಗ ಪರಿಹಾರ ದೊರಕುವಂತೆ ಸಂಬಂಧಿಸಿದ ಇಲಾಖೆಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಅಗತ್ಯ ಕ್ರಮ ಕೈಗೊಳ್ಳಲಾಗುವುದು," ಎಂದು ಹೇಳಿದರು.

ಈ ವೇಳೆ ವಿವಿಧ ಗ್ರಾಮಗಳ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಡಿ.ಕೆ.ಶಿವಕುಮಾರ್ ಮುಖವಾಡದ ಸಿಎಂ

• ಮಲ್ಲಮ್ಮ ನುಡಿ ವಾರ್ತೆ ಮೈಸೂರು

ಡಿ.ಕೆ.ಶಿವಕುಮಾರ್ ಅವರು ಮುಖವಾಡದ ಸಿಎಂ ಆಗಿದ್ದಾರೆ. ಊರಿಗೆಲ್ಲ, ರಾಜ್ಯಕ್ಕೆಲ್ಲ ನಾಮ ಹಾಕುತ್ತಾರೆ. ಅವರಿಗೆ ಬಾಂಗ್ಲಾದೇಶವರು ಓಟ್ ಬ್ಯಾಂಕ್ ಆಗಿದ್ದಾರೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ವ್ಯಂಗ್ಯವಾಡಿದರು.



ಮೈಸೂರಿನ ಜಿ.ಕೆ.ಗ್ರೌಂಡ್ಸ್‌ನಲ್ಲಿ ಮೈಸೂರಿನ ಕಾಯಕ ಸಮುದಾಯಗಳ ಒಕ್ಕೂಟದಿಂದ ಹಮ್ಮಿಕೊಂಡಿದ್ದ ವಿಧಾನ ಪರಿಷತ್ ನ ನೂತನ ಸದಸ್ಯ ರಘು ಆರ್ ಕೌಟಲ್ಯ ಅವರ ಅಭಿನಂದನೆ ಹಾಗೂ ಭಾರತೀಯ ಜನತಾ ಪಾರ್ಟಿಗೆ ಕೃತಜ್ಞತಾ ಸಮಾವೇಶದಲ್ಲಿ ಅವರು ಮಾತನಾಡಿದರು. ಶಾಸಕರು ಹಾಗೂ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ ವೈ ವಿಜಯೇಂದ್ರ ಮತ್ತು ಪಕ್ಷದ ಪ್ರಮುಖರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ನಡೆಯಿತು. ರಘು ಕೌಟಲ್ಯ ಅವರಿಗೆ ಬಿಜೆಪಿ ವಿಧಾನ ಪರಿಷತ್‌ಗೆ ಅವಕಾಶ ನೀಡಿದೆ. ಹಿಂದುಳಿದ ಸಮುದಾಯಗಳನ್ನು ಗುರುತಿಸಿ ಅವರಿಗೆ ಅವಕಾಶ ನೀಡಬೇಕು ಎಂಬುದು ಬಿಜೆಪಿ ಉದ್ದೇಶ ಎಂದು ಆರ್.ಅಶೋಕ್ ತಿಳಿಸಿದರು. ಎಸ್‌ಐಆರ್‌ನಲ್ಲಿ ಎಲ್ಲರೂ ಭಾಗವಹಿಸಬೇಕಿದೆ. ದೇಶದ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಯಬೇಕು. ನಮ್ಮ ದೇಶದಲ್ಲಿ ಲಕ್ಷಾಂತರ ಬಾಂಗ್ಲಾದೇಶ ಮತ್ತು ಪಾಕಿಸ್ತಾನಿಯರು ಇದ್ದಾರೆ. ಸರ್ಕಾರದ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ಎಂದು ಹೇಳಿದರು.

ಮಮತಾ ಬ್ಯಾನರ್ಜಿ ಅವರು ಮೂರು ಸಾವಿರಕ್ಕೆ ಬಾಂಗ್ಲಾದೇಶದವರಿಗೆ ಎಲ್ಲ ಸೌಲಭ್ಯ ನೀಡಿದ್ದರು. ಕರ್ನಾಟಕದಲ್ಲಿ ಬಾಂಗ್ಲಾದೇಶದವರನ್ನು ಮತಪಟ್ಟಿಗೆ ಸೇರಿಸಲು ಹುನ್ನಾರ ನಡೆಯುತ್ತಿದೆ. ಅದಕ್ಕೆಂದೇ ಶಾಶ್ವತ ನಿವಾಸಿ ಪತ್ರ ನೀಡಲು ಮುಂದಾಗಿದ್ದಾರೆ. ಇದನ್ನು ಕೂಡಲೇ ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿದರು.

## ಕೊಡಲಿಯಿಂದ ಕೊಚ್ಚಿ ಮಹಿಳೆಯ ಬರ್ಬರ ಹತ್ಯೆ

**ಭಾಲ್ಕಿ:** ತಾಲ್ಲೂಕಿನ ಹಾಲಗೋಟಾ9 ಗ್ರಾಮದಲ್ಲಿ ಶನಿವಾರ ಜಮೀನು ವಿವಾದಕ್ಕೆ ಸಂಬಂಧಿಸಿದಂತೆ ಮಹಿಳೆಯೊಬ್ಬಳನ್ನು ಸ್ನಾನದ ಮನೆಯಲ್ಲಿ ಕೊಡಲಿಯಿಂದ ಹಲ್ಲೆಗೈದು ಬರ್ಬರವಾಗಿ ಕೊಲೆ ಮಾಡಿರುವ ಘಟನೆ ನಡೆದಿದೆ. ಅನಿತಾ ಮಲ್ಲಿಕಾರ್ಜುನ ಬಿರಾದಾರ (35) ಮೃತ ಮಹಿಳೆ. ಕೊಲೆಗೆ ಸಂಬಂಧಿಸಿದಂತೆ ಆರೋಪಿತರಾದ ಕೈಲಾಸ ವೈಜಪ್ಪ ಬಿರಾದಾರ (40), ಸಂಗಪ್ಪ ವೈಜಪ್ಪ ಬಿರಾದಾರ (45), ಸಿದ್ದಪ್ಪ ವೈಜಪ್ಪ ಬಿರಾದಾರ (42), ವಿಮಲಾಬಾಯಿ ವೈಜಪ್ಪ ಬಿರಾದಾರ (60), ಅಂಬಿಕಾ ಸಂಗಪ್ಪ ಬಿರಾದಾರ (38), ರಾಧಿಕಾ ಸಿದ್ದಪ್ಪ ಬಿರಾದಾರ (35), ಅಂಜಲಿ ಕೈಲಾಸ ಬಿರಾದಾರ (35) ಮೇಲೆ ಮೃತಳ ಪತಿ ಮಲ್ಲಿಕಾರ್ಜುನ ಬಸವಣಪ್ಪ ಬಿರಾದಾರ ದೂರು ನೀಡಿದ್ದಾರೆ. ಜಮೀನು ವಿವಾದ ಸಂಬಂಧ ಮೃತ ಮಹಿಳೆ ಅನಿತಾರವರು ಕಳೆದ ವರ್ಷ ಆರೋಪಿತರ ಮೇಲೆ ದೂರು ದಾಖಲಿಸಿದ್ದರು. ಹಾಗಾಗಿ, ಈ ವಿಷಯ ಸಂಬಂಧ ಆರೋಪಿತರು ದ್ವೇಷ ಬೆಳೆಸಿಕೊಂಡು ಮಹಿಳೆಯ ಕೊಲೆಗೈದಿದ್ದಾರೆ ಎಂದು ತಿಳಿದು ಬಂದಿದೆ. ಈ ಸಂಬಂಧ ಖಟಕ ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



# ಸಂಪುಟ: ಆ ಮುಖ ಈ ಮುಖ

### ಸಿದ್ದು ಇದ್ದಾಗ ಒಂದು, ಡಿಕೆಶಿ ಇರುವಾಗ ಮತ್ತೊಂದು | ಸಂಪುಟ ಪುನಾರಚನೆಯ ವಿಷಯ ವಿಚಿತ್ರ ಮಜಲು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಂಪುಟ ಪುನಾರಚನೆಯ ವಿಷಯ ವಿಚಿತ್ರ ಮಜಲು ಪಡೆದಿದೆ. ಸಚಿವ ಪದವಿ ಆಕಾಂಕ್ಷಿಗಳ ದ್ವಿಮುಖ ನೀತಿ ಚರ್ಚೆಗೆ ಗ್ರಾಸವಾಗಿದೆ. ಸಿದ್ದರಾಮಯ್ಯ ಸಿಎಂ ಆಗಿದ್ದ ಅವಧಿಯಲ್ಲಿ ಸಂಪುಟ ಪುನಾರಚನೆಗೆ ತೀವ್ರ ಬೇಡಿಕೆ ಇತ್ತು. ಶಾಸಕರು, ಆಕಾಂಕ್ಷಿಗಳು ಬಹಿರಂಗವಾಗಿಯೇ ಸಂಪುಟ ಪುನಾರಚನೆಗೆ ಪಟ್ಟು ಹಿಡಿದಿದ್ದರು. ಆದರೆ..!

**ತೀವ್ರತೆ ಕಳೆದ ಬೇಡಿಕೆ:** ಸಿದ್ದರಾಮಯ್ಯನವರ ನಾಯಕತ್ವ ಬದಲಾವಣೆ ಮಾಡಿ ಅಥವಾ ಸಂಪುಟ ಪುನಾರಚನೆ ಮಾಡಿ ಎಂದು ಆಗ ಅನೇಕರು ಆಗ್ರಹಿಸಿದ್ದರು. ಇದೀಗ ನಾಯಕತ್ವ ಬದಲಾವಣೆ ಆಗಿದೆ. ಆದರೆ, ಸಂಪುಟ ವಿಸ್ತರಣೆಯ ಬೇಡಿಕೆ ತೀವ್ರತೆಯನ್ನು ಕಳೆದುಕೊಂಡಿರುವುದೇ ಜನರ ಅಚ್ಚರಿಗೆ ಕಾರಣವಾಗಿದೆ.

**ಹೊಸಬರಿಗೆ ಅವಕಾಶ:** ಡಿಕೆ ಶಿವಕುಮಾರ್ ಸಿಎಂ ಆಗಿ ಅಧಿಕಾರ ಸ್ವೀಕಾರ ಮಾಡಿದ ಸಂದರ್ಭದಲ್ಲಿ 13 ಮಂದಿಗೆ ಸಚಿವ ಸ್ಥಾನ ನೀಡಿದ್ದರು. ಈ ಪೈಕಿ ಇಬ್ಬರು ಮಾತ್ರ ಹೊಸ ಮುಖಗಳಿಗೆ ಅವಕಾಶ ನೀಡಲಾಗಿದೆ. ಯುಟಿ ಖಾದರ್, ಯತೀಂದ್ರ ಸಿದ್ದರಾಮಯ್ಯ ಅವರು ಸಚಿವರಾಗಿ ಅಧಿಕಾರ ಸ್ವೀಕರಿಸಿದ್ದು, ಪೂರ್ಣ ಪ್ರಮಾಣದ ಸಂಪುಟ ರಚನೆ ಆಗಿಲ್ಲ.

### ಆಗ ವಿಸ್ತರಣೆ ಕೂಗು

ಸಚಿವ ಸಂಪುಟ ರಚನೆಯ ಬೆನ್ನಲ್ಲೇ ವಿಸ್ತರಣೆಯ ಕೂಗು ತೀವ್ರಗೊಂಡಿತ್ತು. 50 ಆಕಾಂಕ್ಷಿಗಳು ನಮಗೆ ಸಚಿವ ಸ್ಥಾನ ಬೇಕು ಎಂದು ಬೇಡಿಕೆ ಇಟ್ಟಿದ್ದರು. ಕೆಲವರು ನೇರವಾಗಿ ಡಿಕೆ ಶಿವಕುಮಾರ್ ಅವರ ಬಳಿ ತೆರವು ಲಾಬಿ ನಡೆಸಿದರೆ, ಕೆಲವರು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಲಾಬಿ ನಡೆಸಿದ್ದರು. 50 ಆಕಾಂಕ್ಷಿಗಳು ಸಚಿವ ಸಂಪುಟ ರಚನೆಯ ಬೆನ್ನಲ್ಲೇ ವಿಸ್ತರಣೆಯ ಕೂಗು ತೀವ್ರಗೊಂಡಿದ್ದು ವಿಶೇಷ.

### ದಿಲ್ಲಿಯ ಹೈ ಎಚ್ಚರಿಕೆ?

ಈ ನಡುವೆ ಸಚಿವ ಸಂಪುಟ ವಿಸ್ತರಣೆಯ ಬಗ್ಗೆ ಹೈಕಮಾಂಡ್ ಆಕಾಂಕ್ಷಿಗಳಿಗೆ ಕಠಿಣ ಎಚ್ಚರಿಕೆ ನೀಡಿತ್ತು. ಸ್ವತಃ ಡಿಕೆ ಶಿವಕುಮಾರ್ ಅವರೇ ಈ ಬಗ್ಗೆ ಹೇಳಿದ್ದರು. ಶಾಸಕರು ಮಂತ್ರಿ ಗಿರಿಗಾಗಿ ಲಾಬಿ ನಡೆಸಬೇಡಿ ಎಂದು ಸೂಚಿಸಿದ್ದರು. ಸಿಎಂ ಹೇಳಿಕೆಯ ಬೆನ್ನಲ್ಲೇ ಶಾಸಕರು ಸೈಲೆಂಟಾಗಿದ್ದಾರೆ. ಬಹಿಂಗವಾಗಿ ಗಟ್ಟಿ ಧ್ವನಿಯಲ್ಲಿ ಯಾರೂ ಮಾತನಾಡುತ್ತಿಲ್ಲ. ಇದಕ್ಕೆ ಕಾರಣ ಏನಿರಬಹುದು..?









### ಯಾರೂ ಬಹಿರಂಗ ಇಲ್ಲ..!

ಸಿದ್ದರಾಮಯ್ಯ ಅವಧಿಯಲ್ಲಿ 50 ಆಕಾಂಕ್ಷಿಗಳು ನಮಗೆ ಸಚಿವ ಸ್ಥಾನ ಬೇಕು ಎಂದು ಬೇಡಿಕೆ ಇಟ್ಟಿದ್ದರು. ಕೆಲವರು ನೇರವಾಗಿ ಡಿಕೆ ಶಿವಕುಮಾರ್ ಅವರ ಬಳಿ ತೆರವು ಲಾಬಿ ನಡೆಸಿದರೆ, ಕೆಲವರು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಲಾಬಿ ನಡೆಸಿದ್ದರು. ಆದರೆ ದಿಢೀರ್ ಅಗಿ ಎಲ್ಲರೂ ಸೈಲೆಂಟಾಗಿದ್ದಾರೆ. ಸಂಪುಟ ವಿಸ್ತರಣೆ ಯ ಬಗ್ಗೆ ಯಾರೂ ಬಹಿರಂಗ ಹೇಳಿಕೆಯನ್ನು ನೀಡುತ್ತಿಲ್ಲ!

### ಯಾವಾಗ ವಿಸ್ತರಣೆ?

ಸಚಿವ ಸಂಪುಟ ವಿಸ್ತರಣೆ ಯಾವಾಗ ಎಂಬ ಪ್ರಶ್ನೆಗೆ ಉತ್ತರ ಸಿಗುತ್ತಿಲ್ಲ. ರಾಹುಲ್ ಗಾಂಧಿ ಅವರು ವಿದೇಶ ಪ್ರವಾಸದಲ್ಲಿದ್ದಾರೆ. ಅವರು ಆಗಮಿಸಿದ ಬಳಿಕ ಡಿಕೆ ಶಿವಕುಮಾರ್ ಹಾಗೂ ಸಿದ್ದರಾಮಯ್ಯ, ಬಿಕೆ ಹರಿಪ್ರಸಾದ್ ದೆಹಲಿಗೆ ತೆರಳುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ. ದೆಹಲಿಯಲ್ಲಿ ಆಕಾಂಕ್ಷಿಗಳ ಪಟ್ಟಿಯ ಬಗ್ಗೆ ಚರ್ಚೆ ನಡೆಯಲಿದೆ. ಜಾತಿ, ಪ್ರಾದೇಶಿಕವಾರು ನೆಲೆಯಲ್ಲಿ ಸಂಪುಟದಲ್ಲಿ ಸ್ಥಾನ ಹಂಚಿಕೆ ಆಗಲಿದೆ ಎನ್ನುತ್ತದೆ ಮೂಲ.



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ವತಿಯಿಂದ ಅರಮನೆ ಮೈದಾನದಲ್ಲಿ ಶನಿವಾರ ನಡೆದ "ನಮ್ಮಭಿಮಾನದ ಅಭಿನಂದನಾ ಸಮಾರಂಭ"ದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು. ಆದಿ ಚುಂಚನಗಿರಿ ಮಹಾಸಂಸ್ಥಾನದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ, ಡಿಸಿಎಂ ಪರಮೇಶ್ವರ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ ಎಸ್ ಷಡಾಕ್ಷರಿ, ಎಲ್ ಭೈರಪ್ಪ, ರಮೇಶ್ ಸಂಗಾ, ಅಮೃತ್ ರಾಜ್, ಬಸವರಾಜು ಮತ್ತಿತರರು ಉಪಸ್ಥಿತರಿದ್ದರು.

## ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕದ ಜನ ಗುಳೆ ಹೋಗುತ್ತಿದ್ದಾರೆ; ಹೆಚ್ಡಿಕೆ ವಾಗ್ದಾಳಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಪ್ರಗತಿ ಪರಿಶೀಲನೆ ನೆಪದಲ್ಲಿ ರಾಜ್ಯದ ಉದ್ದಗಲಕ್ಕೂ ಜಾಲಿ ಟ್ರಿಪ್ ಮಾಡುತ್ತಿರುವ ಮುಖ್ಯಮಂತ್ರಿಗಳು, ರಾಜ್ಯದ ನೀರಾವರಿ ಹಿತಾಸಕ್ತಿಯ ಬಗ್ಗೆ ಅತ್ಯಂತ ಬೇಜವಾಬ್ದಾರಿಯಿಂದ ವರ್ತಿಸುತ್ತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ತೀವ್ರ ಟೀಕಾಪ್ರಹಾರ ನಡೆಸಿದರು.

ಕಲಬುರ್ಗಿ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಅವರ ನಡೆಸಿದ ಪ್ರಗತಿ ಪರಿಶೀಲನೆ ಕೇವಲ ಜಾಲಿಟ್ರಿಪ್ ಮಾತ್ರ. ಹಾಗೆಯೇ ಕೃಷ್ಣಾ, ಗೋದಾವರಿ, ಕಾವೇರಿ ಜೋಡಣೆಗೆ ರಾಜ್ಯದ ಸಮ್ಮತಿ ಇದೆ ಎಂದು ಹೇಳಿರುವ ಮುಖ್ಯಮಂತ್ರಿ ವರ್ತನೆ ಅತ್ಯಂತ ಹೊಣೆಗೇಡಿತನದಿಂದ ಕೂಡಿದೆ. ರಾಜ್ಯದ ನೀರಾವರಿಯ ಸಂಕಷ್ಟಗಳ ಬಗ್ಗೆ ಅವರಿಗೆ ಕನಿಷ್ಠ ಪರಿಜ್ಞಾನವೂ ಇಲ್ಲ ಎಂದು ಸಚಿವರು ಕಿಡಿಕಾರಿದರು.



ನದಿ ಜೋಡಣೆ ಬಗ್ಗೆ ನನ್ನ ವಿರೋಧ ಇಲ್ಲ. ಯೋಜನೆ ಜಾರಿಗೆ ಬರಲೇಬೇಕು. ಆದರೆ ಗೋದಾವರಿ ಮತ್ತು ಕಾವೇರಿ ನದಿಗಳ ಜೋಡಣೆ ಯೋಜನೆಯಿಂದ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರು ಎಷ್ಟು? ಎಂಬುದನ್ನು ತಿಳಿದುಕೊಂಡು ಯೋಜನೆಯ ಬಗ್ಗೆ ಚರ್ಚಿಸಬೇಕು. ದೇವೇಗೌಡರು ಹೋರಾಟ ಮಾಡಿದ ನಂತರ ಹಂಚಿಕೆಯಾದ ನೀರಿನ ಪ್ರಮಾಣ ಎಷ್ಟು ಎಂಬುದರ ಬಗ್ಗೆ ಮುಖ್ಯಮಂತ್ರಿಗಳಿಗೆ ಕನಿಷ್ಠ ಮಾಹಿತಿ ಇಲ್ಲ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ದೂರಿದರು.

ನದಿ ಜೋಡಣೆ ಎಂದರೆ ಬೆಂಗಳೂರಿನಲ್ಲಿ ರಿಯಲ್ ಎಸ್ಟೇಟ್ ನಡೆಸುವ ಹಾಗೆ ಅಲ್ಲ ಎಂದು ಮುಖ್ಯಮಂತ್ರಿಗೆ ತೆಗೆದುಕೊಂಡ ಕೇಂದ್ರ ಸಚಿವರು, ನಿಮಗೆ ಮಾಹಿತಿ ಇಲ್ಲದಿದ್ದರೆ ನೀರಾವರಿ ತಜ್ಞರು ಅಥವಾ ಇಲಾಖೆಯ ಎಂಜಿನಿಯರ್‌ಗಳಿಂದ ಅಥವಾ ರಾಜ್ಯದ ಪರ ವಕಾಲತ್ತು ವಹಿಸುವ ವಕೀಲರ ಬಳಿ ಮಾಹಿತಿ ಪಡೆಯಬೇಕಿತ್ತು. ಅದನ್ನು ಬಿಟ್ಟು ಇಲ್ಲದೆ ಮಾಧ್ಯಮಗಳಿಗೆ ಹೇಳಿಕೆ ನೀಡಿ ನಗೆಪಾಟಲಿಗೆ ತುತ್ತಾಗಿದ್ದೀರಿ ಎಂದು ಬೆಳಗಾವಿಯಲ್ಲಿ ಮುಖ್ಯಮಂತ್ರಿ ಅವರು ಕೃಷ್ಣಾ, ಕಾವೇರಿ ಹಾಗೂ ಗೋದಾವರಿ ನದಿ ಜೋಡಣೆ ಬಗ್ಗೆ ತೀರ್ಮಾನ ಮಾಡಲಾಗಿದೆ ಹಾಗೂ ಅದಕ್ಕೆ ರಾಜ್ಯದ ಸಮ್ಮತಿ ಇದೆ ಎಂದು ಹೇಳಿರುವ ಬಗ್ಗೆ ಕೇಂದ್ರ ಸಚಿವರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

# ಬದಲಾವಣೆಯ ಬಿರುಗಾಳಿಯಲ್ಲಿ ನಿಗಮ–ಮಂಡಳಿಗಳು..?

## ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ಎಲ್. ಮಾರಣ್ಣ ಹೆಸರು ಮುನ್ನೆಲೆಗೆ..?

• ಎಂ.ಜಂಬುನಾಥ, ಜಿಲ್ಲಾ ವರದಿಗಾರ, ಬಳ್ಳಾರಿ

ರಾಜ್ಯ ಸರ್ಕಾರ ಎರಡನೇ ಹಂತದ ರಾಜಕೀಯ ನೇಮಕಾತಿಗಳಿಗೆ ಸಿದ್ಧತೆ ನಡೆಸಿದೆ ಎಂದು ತಿಳಿದು ಬಂದಿದೆ. ಇದರ ಬೆನ್ನಲ್ಲೇ ರಾಜಕೀಯ ಚರ್ಚೆಗಳು ಶುರುವಾಗಿವೆ. ಜೊತೆ ಜೊತೆಗೆ ನಿಗಮ–ಮಂಡಳಿಗಳ ಅಧ್ಯಕ್ಷ ಹಾಗೂ ಸದಸ್ಯರ ಮಟ್ಟದಲ್ಲಿ ವ್ಯಾಪಕ ಪುನಾರಚನೆ ನಡೆಯುವ ಸಾಧ್ಯತೆ ಇದೆ ಎಂಬ ಮಾತುಗಳು ಕಾಂಗ್ರೆಸ್ ವಲಯದಲ್ಲಿ ಜೋರಾಗಿವೆ.



**ಊಹಾಪೋಹಗಳು:** ಈ ಹಿನ್ನೆಲೆಯಲ್ಲಿ ಹಲವು ನಿಗಮಗಳ ಅಧ್ಯಕ್ಷ ಸ್ಥಾನಗಳಿಗೆ ಹೊಸ ಮುಖಗಳ ಹೆಸರುಗಳು ಕೇಳಿಬರುತ್ತಿದ್ದು, ಡಾ. ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನವೂ ಬದಲಾವಣೆಯ ಪಟ್ಟಿಯಲ್ಲಿರಬಹುದು ಎಂಬ ಊಹಾಪೋಹಗಳು ಹರಿದಾಡುತ್ತಿವೆ.

**ಹೊಸ ನೇಮಕಾತಿ ವಿಚಾರ:** ರಾಜಕೀಯ ವಲಯದಲ್ಲಿ ಕೇಳಿಬರುತ್ತಿರುವ ಮಾಹಿತಿಯ ಪ್ರಕಾರ, ಪ್ರಸ್ತುತ ಅಧ್ಯಕ್ಷರಾಗಿರುವ ಮುಂಡರಗಿ ನಾಗರಾಜು ಅವರ ಸ್ಥಾನದಲ್ಲಿ ಹೊಸ ನೇಮಕಾತಿ ನಡೆಯುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಆದರೆ ಈ ಕುರಿತು ರಾಜ್ಯ ಸರ್ಕಾರ ಯಾವುದೇ ಅಧಿಕೃತ ಆದೇಶ ಅಥವಾ ಪ್ರಕಟಣೆ ಹೊರಡಿಸಿಲ್ಲ.

**ಸತ್ಯ ಏನು ಮಿಥ್ಯ..?:** ಏತನ್ಮಧ್ಯೆ ಬಳ್ಳಾರಿಯ ಹಿರಿಯ ಕಾಂಗ್ರೆಸ್ ಮುಖಂಡ ಹಾಗೂ ದಲಿತ ಸಮುದಾಯದ ನಾಯಕ ಎಲ್. ಮಾರಣ್ಣ ಅವರ ಹೆಸರು ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ಪ್ರಮುಖವಾಗಿ ಕೇಳಿಬರುತ್ತಿದೆ. ಬಳ್ಳಾರಿ ಜಿಲ್ಲಾ ಕಾಂಗ್ರೆಸ್ಸ್‌ನಲ್ಲಿ ಈ ಬಗ್ಗೆ ವ್ಯಾಪಕ ಚರ್ಚೆ ನಡೆಯುತ್ತಿದ್ದು, ಜಿಲ್ಲೆಯ ಕಾಂಗ್ರೆಸ್ ಶಾಸಕರು ಹಾಗೂ ಸಂಸದರು ಎಲ್. ಮಾರಣ್ಣ ಅವರ ಹೆಸರನ್ನು ಪಕ್ಷದ ಹೈಕಮಾಂಡ್‌ಗೆ ಶಿಫಾರಸು ಮಾಡಿದ್ದಾರೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಹರಿದಾಡುತ್ತಿವೆ. ಎಲ್. ಮಾರಣ್ಣ ಅವರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ದುಡಿದ ಹಿರಿಯ ನಾಯಕರಾಗಿದ್ದು, ಬಳ್ಳಾರಿ ಜಿಲ್ಲೆಯ ಪಕ್ಷದ ಕಟ್ಟಾಳು ಎಂದೇ ಗುರುತಿಸಿಕೊಂಡಿದ್ದಾರೆ. ಪಕ್ಷ ಸಂಘಟನೆ ಬಲಪಡಿಸುವಲ್ಲಿ ಸಕ್ರಿಯ ಪಾತ್ರ ವಹಿಸಿರುವ ಅವರು, ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಸೋಲು ಕಂಡಿದ್ದರೂ, ಪಕ್ಷದೊಂದಿಗೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಅವರ ಸಂಘಟನಾ ಅನುಭವ, ದಲಿತ ಸಮುದಾಯದಲ್ಲಿ ಹೊಂದಿರುವ ಪ್ರಭಾವ ಹಾಗೂ ಪಕ್ಷದ ಮೇಲಿನ ನಿಷ್ಠೆಯನ್ನು ಪರಿಗಣಿಸಿ ಈ ಬಾರಿ ಅವರಿಗೆ ಪ್ರಮುಖ ಹೊಣೆಗಾರಿಕೆ ನೀಡಬಹುದು ಎಂಬ ನಿರೀಕ್ಷೆ ಕಾಂಗ್ರೆಸ್ ಕಾರ್ಯಕರ್ತರಲ್ಲಿ ವ್ಯಕ್ತವಾಗಿದೆ.

### ರಾಜಕೀಯ ಚರ್ಚೆಗಳು ತೀವ್ರ

ರಾಜ್ಯದ ನಿಗಮ–ಮಂಡಳಿಗಳಲ್ಲಿ ಶೀಘ್ರದಲ್ಲೇ ದೊಡ್ಡ ಮಟ್ಟದ ಬದಲಾವಣೆಗಳು ನಡೆಯುವ ಸಾಧ್ಯತೆ ಇದೆ ಎಂಬ ರಾಜಕೀಯ ಚರ್ಚೆಗಳು ತೀವ್ರಗೊಂಡಿವೆ. ಹೊಸ ಮುಖಗಳಿಗೆ ಅವಕಾಶ ಸಿಗುತ್ತದೆಯೇ, ಎಲ್. ಮಾರಣ್ಣ ಅವರಿಗೆ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನ ದೊರೆಯುತ್ತದೆಯೇ ಎಂಬ ಪ್ರಶ್ನೆಗಳಿಗೆ ಉತ್ತರ ಸದ್ಯದಲ್ಲೇ ಸರ್ಕಾರದ ಅಧಿಕೃತ ಪ್ರಕಟಣೆಯೊಂದಿಗೆ ದೊರೆಯುವ ನಿರೀಕ್ಷೆ ರಾಜಕೀಯ ವಲಯದಲ್ಲಿ ವ್ಯಕ್ತವಾಗಿದೆ.

### ಅಂತಿಮ ಅವಕಾಶ ಯಾರಿಗೆ?

ಬಳ್ಳಾರಿ ಜಿಲ್ಲೆಯಲ್ಲೂ ಈ ಬೆಳವಣಿಗೆ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಹಲವು ಹಿರಿಯ ಕಾಂಗ್ರೆಸ್ ಮುಖಂಡರ ಹೆಸರುಗಳು ವಿವಿಧ ನಿಗಮ–ಮಂಡಳಿಗಳ ಅಧ್ಯಕ್ಷ ಹಾಗೂ ಸದಸ್ಯ ಸ್ಥಾನಗಳಿಗೆ ಕೇಳಿಬರುತ್ತಿದ್ದು, ಅಂತಿಮವಾಗಿ ಯಾರಿಗೆ ಅವಕಾಶ ಸಿಗಲಿದೆ ಎಂಬುದನ್ನು ಸರ್ಕಾರದ ಅಧಿಕೃತ ಆದೇಶವೇ ಸ್ಪಷ್ಟಪಡಿಸಬೇಕಿದೆ. ಇದೀಗ ಎಲ್. ಮಾರಣ್ಣ ಅವರ ಹೆಸರು ಪ್ರಮುಖವಾಗಿ ಚರ್ಚೆಯಲ್ಲಿದ್ದರೂ, ಅವರ ನೇಮಕಾತಿ ಕುರಿತು ಸರ್ಕಾರ ಅಥವಾ ಕಾಂಗ್ರೆಸ್ ಹೈಕಮಾಂಡ್ ಯಾವುದೇ ಅಧಿಕೃತ ಘೋಷಣೆ ಮಾಡಿಲ್ಲ.

ಕೆಪಿಸಿಸಿ ಸದಸ್ಯನಾಗಿ ಹಾಗೂ ಒಂದು ಬಾರಿ ಸೋಲು ಮತ್ತು ಸುಧೀರ್ಘಕಾಲ ಕಾಂಗ್ರೆಸ್ ಪಕ್ಷಕ್ಕೆ ದುಡಿದಿದ್ದೇನೆ. ಹೈಕಮಾಂಡ್ ನಮ್ಮಂಥವರನ್ನು ಗುರ್ತಿಸಲಿದೆ ಎಂಬ ಆಶಾ ಭಾವ ನನ್ನದಾಗಿದೆ. ಪಕ್ಷ ಯಾವ ಸ್ಥಾನವು ಕೊಟ್ಟರೂ ಕಾಂಗ್ರೆಸ್ ಪಕ್ಷಕ್ಕೆ ಕಾರ್ಯಕರ್ತನಾಗಿ ತ್ರಿಕರಣ ಶುದ್ಧಿಯಿಂದ ಕೆಲಸ ಮಾಡುತ್ತೇನೆ.
–ಎಲ್. ಮಾರಣ್ಣ, ಕಾಂಗ್ರೆಸ್ ಹಿರಿಯ ಮುಖಂಡ

## ಚೆಕ್ ಮೂಲಕ ಲಂಚ ಪಡೆದು ಜೈಲಿಗೆ ಹೋದ ದೇಶದ ಮೊದಲ ಸಿಎಂ ಪುತ್ರ ಕಾಂಗ್ರೆಸ್‌ಗೆ ನೈತಿಕ ಪಾಠ ಮಾಡಲು ಹೊರಟಿದ್ದಾರೆ: ಬಿ.ಕೆ ಹರಿಪ್ರಸಾದ್

## ಬಾರದ ಮಳೆ: ಆತಂಕದಲ್ಲಿ ರೈತರು ಸರ್ಕಾರ ನೆರವಿಗೆ ಧಾವಿಸಲಿ

ಈ ಬಾರಿ ಮುಂಗಾರು ಮಳೆ ನಿರೀಕ್ಷೆಯಂತೆ ಸುರಿಯದ ಕಾರಣ ರಾಜ್ಯದ ಹಲವೆಡೆ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಿತ್ತನೆ ಮಾಡಿದ ಬೆಳೆಗಳು ನೀರಿಲ್ಲದೆ ಒಣಗುತ್ತಿದ್ದು, ಇನ್ನೂ ಬಿತ್ತನೆ ಮಾಡದ ರೈತರು ಮಳೆಯ ನಿರೀಕ್ಷೆಯಲ್ಲೇ ದಿನ ಕಳೆಯುತ್ತಿದ್ದಾರೆ. ಕೃಷಿಯನ್ನೇ ಬದುಕಿನ ಆಧಾರವಾಗಿಸಿಕೊಂಡಿರುವ ರೈತರಲ್ಲಿ ಆತಂಕ ಮನೆಮಾಡಿದೆ.

## ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349



ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ಸಂಪೂರ್ಣ ಹಿನ್ನಡೆ ಅನುಭವಿಸುತ್ತಿವೆ. ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೂಲಿ ವೆಚ್ಚಕ್ಕಾಗಿ ಸಾಲ ಪಡೆದ ರೈತರು ಬೆಳೆ ಹಾಳಾಗುವ ಭೀತಿಯಿಂದ ಮಾನಸಿಕ ಒತ್ತಡದಲ್ಲಿದ್ದಾರೆ. ಪಶುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಕೊರತೆಯೂ ಹೆಚ್ಚಾಗುತ್ತಿದೆ.

ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ನೆರವಿಗೆ ತಕ್ಷಣ ಧಾವಿಸಬೇಕು. ಬೆಳೆ ಹಾನಿಯ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ಘೋಷಿಸಬೇಕು. ಬೆಳೆ ಸಾಲ ಮರುಪಾವತಿಗೆ ಕಾಲಾವಕಾಶ ನೀಡುವುದು, ಬಡ್ಡಿ ವಿನಾಯಿತಿ ಕಲ್ಪಿಸುವುದು, ಅಗತ್ಯವಿರುವ ಪ್ರದೇಶಗಳಲ್ಲಿ ಕುಡಿಯುವ ನೀರು ಹಾಗೂ ಮೇವು ಒದಗಿಸುವುದು ಸೇರಿದಂತೆ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು.

ರೈತ ಉಳಿದರೆ ದೇಶ ಉಳಿಯುತ್ತದೆ ಎಂಬುದು ಕೇವಲ ಘೋಷಣೆಯಾಗಬಾರದು. ರೈತರ ಸಂಕಷ್ಟದ ಸಮಯದಲ್ಲಿ ಸರ್ಕಾರ ಅವರೊಂದಿಗೆ ನಿಲ್ಲುವುದು ತನ್ನ ಕರ್ತವ್ಯವಾಗಿದೆ. ಬಾರದ ಮಳೆಯಿಂದ ಕಂಗೆಟ್ಟಿರುವ ರೈತರ ಬದುಕಿಗೆ ಆಸರೆಯಾಗುವಂತಹ ಪರಿಣಾಮಕಾರಿ ಕ್ರಮಗಳನ್ನು ಸರ್ಕಾರ ತಕ್ಷಣ ಕೈಗೊಳ್ಳಬೇಕಾಗಿದೆ.

## ಜುಲೈ 17ರಂದು ಕೊಪ್ಪಳ ರೈಲು ನಿಲ್ದಾಣ ಉದ್ಘಾಟನೆ




**ಕೊಪ್ಪಳ:** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಅಮೃತ್ ಭಾರತ್ ಸ್ಟೇಷನ್ ಯೋಜನೆ ಅಡಿಯಲ್ಲಿ ನವೀಕೃತಗೊಂಡ ದೇಶದ 75 ರೈಲು ನಿಲ್ದಾಣಗಳು ಹಾಗೂ ಕರ್ನಾಟಕದ ನಾಲ್ಕು ರೈಲು ನಿಲ್ದಾಣಗಳನ್ನು ಜುಲೈ 17ರಂದು ಪ್ರಧಾನಿ ನರೇಂದ್ರ ಮೋದಿ ಅವರು ವರ್ಚುವಲ್ ಮೂಲಕ ಏಕಕಾಲದಲ್ಲಿ ಉದ್ಘಾಟಿಸಲಿದ್ದಾರೆ.

ಕರ್ನಾಟಕದ ಆಯ್ಕೆಯಾದ ನಾಲ್ಕು ರೈಲು ನಿಲ್ದಾಣಗಳಲ್ಲಿ ಕೊಪ್ಪಳ ರೈಲು ನಿಲ್ದಾಣವೂ ಪ್ರಮುಖ ಸ್ಥಾನ ಪಡೆದಿದ್ದು, ಪ್ರಯಾಣಿಕರಿಗೆ ಆಧುನಿಕ ಹಾಗೂ ಸುಸಜ್ಜಿತ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

ನವೀಕರಣ ಕಾಮಗಾರಿಗಳ ಭಾಗವಾಗಿ ರೈಲು ನಿಲ್ದಾಣದ ಕಟ್ಟಡದ ಸೌಂದರ್ಯೀಕರಣ, ವಿಶಾಲ ನಿರೀಕ್ಷಣಾ ಕೊಠಡಿಗಳು, ಸುಧಾರಿತ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯಗಳ ಅಭಿವೃದ್ಧಿ, ಡಿಜಿಟಲ್ ಮಾಹಿತಿ ಫಲಕಗಳು, ಸುಗಮ ಸಂಚಾರಕ್ಕೆ ಅನುಕೂಲವಾಗುವ ಪ್ರವೇಶ ವ್ಯವಸ್ಥೆ, ಬೆಳಕು ಹಾಗೂ ಭದ್ರತಾ ವ್ಯವಸ್ಥೆ ಸೇರಿದಂತೆ ಹಲವು ಮೂಲಸೌಕರ್ಯಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ.

ಜುಲೈ 17ರಂದು ನಡೆಯುವ ಉದ್ಘಾಟನಾ ಕಾರ್ಯಕ್ರಮದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ರೈಲ್ವೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ವರ್ಚುವಲ್ ಮೂಲಕ ದೇಶದಾದ್ಯಂತ ನವೀಕೃತ ರೈಲು ನಿಲ್ದಾಣಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ರೈಲು ನಿಲ್ದಾಣಗಳನ್ನು ಆಧುನಿಕ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಮೂಲಕ ಪ್ರಯಾಣಿಕರಿಗೆ ಗುಣಮಟ್ಟದ ಸೇವೆ ಹಾಗೂ ಉತ್ತಮ ಪ್ರಯಾಣ ಅನುಭವ ಕಲ್ಪಿಸುವುದು ಕೇಂದ್ರ ಸರ್ಕಾರದ ಪ್ರಮುಖ ಉದ್ದೇಶವಾಗಿದೆ.

# ಸದಸ್ಯರ ಹಿತಾಸಕ್ತಿ ಕಾಪಾಡುವ ದಿಸೆಯಲ್ಲಿ ಸಹಕಾರ ಸಂಘಗಳು ಕಾರ್ಯನಿರ್ವಹಿಸಬೇಕು: ಗುರುನಾಥ ಜ್ಯಾಂತೀಕರ್

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಸಹಕಾರ ಸಂಘಗಳು ಸದಸ್ಯರ ಹಿತಾಸಕ್ತಿ ಹಾಗೂ ಆರ್ಥಿಕ ಅಭಿವೃದ್ಧಿಯನ್ನು ಪ್ರಮುಖ ಗುರಿಯಾಗಿಟ್ಟು-ಕೊಂಡು ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ರಾಜ್ಯ ನಿರ್ದೇಶಕ ಗುರುನಾಥ ಜ್ಯಾಂತೀಕರ್ ಹೇಳಿದರು.

ನಗರದ ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತದ ಸಾಮರ್ಥ್ಯ ಸೌಧ ಸಭಾಂಗಣದಲ್ಲಿ ಶನಿವಾರ ನಡೆದ ಧರಿನಾಡು ಸೌಹಾರ್ದ ಸಹಕಾರಿ ಸಂಘ ನಿಯಮಿತ, ಬೀದರದ 3ನೇ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಯುವಜನತೆ ಸಹಕಾರ ಕ್ಷೇತ್ರದತ್ತ ಆಸಕ್ತಿ ತೋರದೆ ಷೇರು ಮಾರುಕಟ್ಟೆಯತ್ತ ಹೆಚ್ಚು ಒಲವು ತೋರುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಹೆಚ್ಚಿನ ಲಾಭದ ಆಸೆಯಿಂದ ಅನೇಕರು ತಮ್ಮ ಹಣವನ್ನು ಕಳೆದುಕೊಳ್ಳುತ್ತಿರುವುದು ದುಃಖಕರ ಸಂಗತಿಯಾಗಿದೆ. ಸಹಕಾರ ಸಂಸ್ಥೆಗಳು ಜನರಲ್ಲಿ ವಿಶ್ವಾಸ ಮೂಡಿಸಿ ಸುರಕ್ಷಿತ ಉಳಿತಾಯ ಹಾಗೂ ಆರ್ಥಿಕ ಸ್ವಾವಲಂಬನೆಗೆ ಮಾರ್ಗದರ್ಶನ ನೀಡುವ ಜವಾಬ್ದಾರಿಯನ್ನು ಹೊಂದಿವೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ರಾಜ್ಯ ಮಹಿಳಾ ಮಹಾಮಂಡಳದ ಅಧ್ಯಕ್ಷೆ ಶಕುಂತಲಾ ಬೆಲ್ದಾಳೆ ಮಾತನಾಡಿ, ಸಹಕಾರ ಕ್ಷೇತ್ರವು ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸುವ ಪವಿತ್ರ ವೇದಿಕೆಯಾಗಿದೆ. ಈ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಅವಕಾಶ ದೊರೆಯುವುದು ಪುಣ್ಯದ ಫಲವಾಗಿದೆ. ವಿಶೇಷವಾಗಿ ಬಡವರು, ಶೋಷಿತರು ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರ ಆರ್ಥಿಕ ಸಬಲೀಕರಣದಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಹಿರಿಯ ಪತ್ರಕರ್ತ ಸದಾನಂದ ಜೋಷಿ ಮಾತನಾಡಿ, ಬೀದರ ಜಿಲ್ಲೆಗೆ ಸಹಕಾರ ಕ್ಷೇತ್ರದಲ್ಲಿ ವಿಶಿಷ್ಟ ಇತಿಹಾಸವಿದೆ. ಜಿಲ್ಲೆಯ ಸ್ವಸಹಾಯ ಸಂಘಗಳ ಕಾರ್ಯವೈಖರಿ ರಾಷ್ಟ್ರಮಟ್ಟದಲ್ಲಿ ಮಾದರಿಯಾಗಿದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಜಿಲ್ಲೆಯ ಕೆಲವು ಸಹಕಾರ ಸಕ್ಕರೆ ಕಾರ್ಖಾನೆಗಳು ನಷ್ಟಕ್ಕೆ ಒಳಗಾಗಿರುವುದು ಸಹಕಾರ ಚಳವಳಿಗೆ ಕಪ್ಪುಚುಕ್ಕೆಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ನಿವೃತ್ತ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಿ.ಎಸ್. ರಗಟೆ, ನಿವೃತ್ತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ವಿ.ಜಿ. ರೆಡ್ಡಿ ಹಾಗೂ ಹಿರಿಯ ಸಹಕಾರಿ ಮಹಾಲಿಂಗ ಸ್ವಾಮಿ ಉಪಸ್ಥಿತರಿದ್ದರು.

ಸಭೆಯ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಶಿವಶಂಕರ ಬೆಮಳಗಿ ವಹಿಸಿದ್ದರು. ವೀರಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಗೀತಾ ಮತ್ತು ಗೀತಾ ಪ್ರಾರ್ಥನೆ ಸಲ್ಲಿಸಿದರು. ರವಿಕುಮಾರ ಅರಗಲಿ ಸ್ವಾಗತಿಸಿದರು. ಪ್ರವೀಣ ಮಠ ಕಾರ್ಯಕ್ರಮ ನಿರೂಪಿಸಿದರೆ, ಅಮರ ಬಿರಾದರ ವಂದಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಕಲ್ಲಪ್ಪ ಸೋಲಪೂರೆ, ನಿರ್ದೇಶಕರಾದ ನಾಗರಾಜ ಮಠ, ಲೋಕೇಶ್ ಸಲಗರ, ಮಾಧವ ಲಾಡೆ, ಸತೀಶ ಧರಣೆ, ನಾಗಭೂಷಣ ರೆಡ್ಡಿ ಪ್ರಭುದೇವ, ಅಮೃತ ಹೊಸಮನಿ, ಷೇರು ಸದಸ್ಯರು, ಸಿಬ್ಬಂದಿ ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಬೀದರ್ ಜಿಲ್ಲಾ ಕಾರಾಗೃಹದಲ್ಲಿ 'ಜೈಲಲ್ಲಿ ಜಾನಪದ' ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ಜಾನಪದ ಕಲಾವಿದರ ಬಳಗ (ರಿ), ಬೀದರ ಹಾಗೂ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ "ಜೈಲಲ್ಲಿ ಜಾನಪದ" ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವನ್ನು ಜುಲೈ 13ರಂದು (ಸೋಮವಾರ) ಬೆಳಿಗ್ಗೆ 11.30ಕ್ಕೆ ಬೀದರ ಜಿಲ್ಲಾ ಕಾರಾಗೃಹ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಬೀದರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ (ಭಾ.ಪೊ.ಸೇ.) ಉದ್ಘಾಟಿಸಲಿದ್ದು, ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷರಾದ ಡಾ.ಗೊಲ್ಲಹಳ್ಳಿ ಶಿವಪ್ರಸಾದ್ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಬಸವರಾಜ ಹೂಗಾರ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ, ಜಿಲ್ಲಾ ಕಾರಾಗೃಹ ಕೇಂದ್ರದ ಅಧೀಕ್ಷಕ ದತ್ತಾತ್ರಿ ಮೇಧಾ, ಲೋಕೋಪಯೋಗಿ ಉಪ ವಿಭಾಗದ ಸಹಾಯಕ ಅಭಿಯಂತರ ಸುನೀಲ ಆರ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರನ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಯನ್ನು ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ವಿಜಯಕುಮಾರ ಸೋನಾರೆ ಅವರು ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಖ್ಯಾತ ಜಾನಪದ ಹಾಗೂ ತತ್ವಪದ ಕಲಾವಿದರು ಜಾನಪದ ಗಾಯನ, ತತ್ವಪದ ಗಾಯನ, ಗೀಗಿ ಪದ ಹಾಗೂ ಜಾನಪದ ನೃತ್ಯಗಳ ಮೂಲಕ ಸಾಂಸ್ಕೃತಿಕ ವೈವಿಧ್ಯವನ್ನು ಅನಾವರಣಗೊಳಿಸಲಿದ್ದಾರೆ.

ಶಂಭುಲಿಂಗ ವಾಲ್ದೊಡ್ಡಿ, ನಿರುಪಾದಪ್ಪ ನಂಜಲದಿನ್ನಿ, ಮಾರುತಿ ಕೋಳಿ, ದೇವದಾಸ ಚಿಮಕೋಡ, ಹಣಮಂತ ಹಸಮಕಲ್, ಶಾಂತಮ್ಮಾ ವಾಡೆ, ದಿಲೀಪ ಕಾಡವಾದ, ಮಲ್ಲಿಕಾರ್ಜುನ ಸ್ವಾಮಿ, ಮಧುಕರ್ ಘೋಡ್ಕೆ, ಶಂಕರ ಚೊಂಡಿ ಮತ್ತು ತಂಡ, ಸಂಜುಕುಮಾರ ಸ್ವಾಮಿ ಹಾಗೂ ಸಂಗಮೇಶ ಬೆಲ್ದಾಳ ಸೇರಿದಂತೆ ಹಲವಾರು ಕಲಾವಿದರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಅಲ್ಲದೆ ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಜಾನಪದ ಕಲೆ ಮತ್ತು ಪರಂಪರೆಯ ಮಹತ್ವವನ್ನು ಕೈದಿಗಳಿಗೆ ಪರಿಚಯಿಸುವ ಉದ್ದೇಶದಿಂದ ಈ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಜಾನಪದ ಕಲಾ ಪ್ರೇಮಿಗಳು ಹಾಗೂ ಆಹ್ವಾನಿತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಜಾನಪದ ಕಲಾವಿದರ ಬಳಗ ಅಧ್ಯಕ್ಷರು ಹಾಗೂ ಕರ್ನಾಟಕ ಜಾನಪದ ಆಕಾಡೆಮಿ ಸದಸ್ಯ ಸಂಚಾಲಕರಾದ ವಿಜಯಕುಮಾರ ಸೋನಾರೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮಕ್ಕಳ ಅಸ್ವಸ್ಥ ಪ್ರಕರಣ: ಪ್ರಾಂಶುಪಾಲ,ವಾರ್ಡನ್ ಅಮಾನತು





• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜಿಲ್ಲೆಯ ಚಿತ್ತಾಪುರ ತಾಲೂಕಿನ ದಂಡೋತಿ ಗ್ರಾಮದ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ನಿಲಯದ ವಿದ್ಯಾರ್ಥಿಗಳು ಆಹಾರ ಸೇವಿಸಿ ಅಸ್ವಸ್ಥಗೊಂಡ ಪ್ರಕರಣದ ಹಿನ್ನೆಲೆಯಲ್ಲಿ ಶಾಲೆಯ ಪ್ರಭಾರಿ ಪ್ರಾಂಶುಪರಾದ ನಜೀಮಾ ಬೇಗಂ ಮತ್ತು ಪ್ರಭಾರಿ ವಾರ್ಡನ್ ಭೀಮಬಾಯಿ ಅವರನ್ನು ಅಮಾನತ್ತುಗೊಳಿಸಿಲಾಗಿದೆ.

ಗುರುವಾರ ರಾತ್ರಿ ಶಾಲೆಯ 50 ಮಕ್ಕಳು ರಾತ್ರಿ ಊಟ ಸೇವಿಸಿದ ನಂತರ ಅದರಲ್ಲಿ ಸುಮಾರು 39 ಮಕ್ಕಳು ಅಸ್ವಸ್ಥಗೊಂಡ ಹಿನ್ನೆಲೆಯಲ್ಲಿ ಅವರನ್ನು ಚಿತ್ತಾಪುರ ತಾಲೂಕಾ ಆಸ್ಪತ್ರೆ, ಕಲಬುರಗಿಯ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಕರ್ತವ್ಯ ಲೋಪದ ಆಧಾರದ ಮೇಲೆ ನಜೀಮಾ ಬೇಗಂ ಮತ್ತು ಭೀಮಬಾಯಿ ಅವರನ್ನು ಅಮಾನತ್ತುಗೊಳಿಸಿದೆ. ಅಲ್ಲದೆ ಹೊರಗುತ್ತಿಗೆ ಸಿಬ್ಬಂದಿಯನ್ನು ಸಹ ಬದಲಾಯಿಸಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣಾಧಿಕಾರಿ ಸಂಗಮೇಶ ತಿಳಿಸಿದ್ದಾರೆ.

ಇನ್ನು ಗುರುವಾರ ರಾತ್ರಿ ಆಸ್ಪತ್ರೆಗೆ ಎಲ್ಲಾ 50 ವಿದ್ಯಾರ್ಥಿಗಳನ್ನು ಆರೋಗ್ಯ ತಪಾಸಣೆ ಮಾಡಿಸಿದ ನಂತರ ವೈದ್ಯರ ನಿರ್ದೇಶನದಂತೆ ದಾಖಲಾದ 39 ಮಕ್ಕಳಿಗೆ ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡಲಾಗಿದ್ದು, ಅದರಂತೆ ಗುಣಮುಖರಾದ ಎಲ್ಲಾ 39 ವಿದ್ಯಾರ್ಥಿಗಳನ್ನು ಶುಕ್ರವಾರ ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ. ಮಕ್ಕಳು ಆರೋಗ್ಯವಂತರಾಗಿದ್ದು, ಪಾಲಕರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಇನ್ನು ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡಬಾರದು ಎಂದು ಅವರು ಮನವಿ ಮಾಡಿಕೊಂಡಿದ್ದಾರೆ.

**ಜಿಲ್ಲಾಧಿಕಾರಿಗಳಿಂದ ಮಕ್ಕಳ ಆರೋಗ್ಯ ವಿಚಾರಣೆ**

ಗುರುವಾರ ರಾತ್ರಿ ಶಾಲೆಯ ಮಕ್ಕಳು ರಾತ್ರಿ ಊಟ ಸೇವಿಸಿದ ನಂತರ ಅಸ್ವಸ್ಥಗೊಂಡ ಚಿತ್ತಾಪುರ ಆಸ್ಪತ್ರೆ, ಜಿಮ್ಸ್ ಅಸ್ಪತ್ರೆಗೆ ದಾಖಲಾಗಿರುವ ಮಾಹಿತಿ ತಿಳಿದು ಕೂಡಲೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಗುರುವಾರ ರಾತ್ರಿಯೆ ಕಲಬುರಗಿ ಜಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯುತ್ತಿರುವ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿದರು.

ಆಸ್ಪತ್ರೆಯ ವಾರ್ಡ್‌ಗೆ ಭೇಟಿ ನೀಡಿದ ಜಿಲ್ಲಾಧಿಕಾರಿ, ವಿದ್ಯಾರ್ಥಿಗಳ ಆರೋಗ್ಯ ಸ್ಥಿತಿಯ ಕುರಿತು ವೈದ್ಯರಿಂದ ಮಾಹಿತಿ ಪಡೆದು, ಎಲ್ಲ ವಿದ್ಯಾರ್ಥಿಗಳಿಗೆ ಅಗತ್ಯ ಚಿಕಿತ್ಸೆ ಹಾಗೂ ಔಷಧೋಪಚಾರವನ್ನು ಯಾವುದೇ ಕೊರತೆಯಾಗದಂತೆ ಸಮರ್ಪಕವಾಗಿ ಒದಗಿಸುವಂತೆ ಸೂಚಿಸಿದರು. ಅಲ್ಲದೆ, ವಿದ್ಯಾರ್ಥಿಗಳ ಆರೋಗ್ಯದ ಮೇಲೆ ನಿರಂತರ ನಿಗಾ ವಹಿಸಿ, ವೈದ್ಯಕೀಯ ಸೇವೆಯಲ್ಲಿ ಯಾವುದೇ ನಿರ್ಲಕ್ಷ್ಯವಾಗದಂತೆ ಎಚ್ಚರಿಕೆ ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಐ.ಜಿ.ಪಿ. ಶಾಂತನು ಸಿನ್ಹಾ, ಎಸ್.ಪಿ. ಅಡ್ಡೂರು ಶ್ರೀನಿವಾಸುಲು, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನೂರ್, ಡಿ.ಎಚ್.ಓ ಡಾ. ಶರಣಬಸಪ್ಪ ಕ್ಯಾತನಾಳ, ಚಿತ್ತಾಪುರ ತಹಶೀಲ್ದಾರ ನಾಗಯ್ಯ ಹಿರೇಮಠ ಸೇರಿದಂತೆ ಜಿಮ್ಸ್ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ, ಅಧಿಕಾರಿಗಳು ಉಪಸ್ಥಿತರಿದ್ದರು.

# ಸರ್ಕಾರದ ಅಧಿಸೂಚನೆ ಕೈಬಿಡಲು ಶಾಸಕ ಬೆಲ್ದಾಳೆ, ಸೋಮನಾಥ ಪಾಟೀಲ್ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ರಾಜ್ಯ ಸರ್ಕಾರ ನಡೆಸುತ್ತಿರುವ ಶಾಶ್ವತ ವಾಸಸ್ಥಳ ಪ್ರಮಾಣಪತ್ರ (ಪರ್ಮನೆಂಟ್ ರೆಸಿಡೆನ್ಸಿ ಸರ್ಟಿಫಿಕೇಟ್-ಪಿಆರ್‌ಸಿ) ವಿತರಣೆ ಪ್ರಕ್ರಿಯೆ ದೇಶದ ಆಂತರಿಕ ಭದ್ರತೆಗೆ ಅಪಾಯಕಾರಿಯಾಗಿದ್ದು, ಕೂಡಲೇ ಇದನ್ನು ಕೈಬಿಡಬೇಕೆಂದು ಬಿಜೆಪಿ ರಾಜ್ಯ ಕಾರ್ಯದರ್ಶಿಯೂ ಆದ ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ್ ಒತ್ತಾಯಿಸಿದ್ದಾರೆ.

ರಾಜ್ಯ ಸರ್ಕಾರ ಪಿಆರ್‌ಸಿ ಸಂಬಂಧ ಹೊರಡಿಸಿರುವ ಅಧಿಸೂಚನೆ ಗಂಭೀರವಾದಂಥ ಸಾಂವಿಧಾನಿಕ, ಕಾನೂನಾತ್ಮಕ ಹಾಗೂ ರಾಷ್ಟ್ರೀಯ ಭದ್ರತಾ ಆತಂಕಗಳನ್ನು ಸೃಷ್ಟಿಸುವಂತಿದೆ. ರಾಜ್ಯ ಸರ್ಕಾರ ಈ ಅಧಿಸೂಚನೆ ಹಿಂಪಡೆಬೇಕು. ಕೇಂದ್ರ ಗೃಹ ಇಲಾಖೆ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಹಸ್ತಕ್ಷೇಪ ಮಾಡಿ ಈ ಪ್ರಕ್ರಿಯೆಗೆ ಬ್ರೇಕ್ ಹಾಕಬೇಕೆಂದು ಇಲ್ಲಿ ಹೊರಡಿಸಿದ ಜಂಟಿ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

ಭಾರತದ ಸಂವಿಧಾನವು ದೇಶದ ಎಲ್ಲ ನಾಗರಿಕರಿಗೂ ಒಂದೇ ಪೌರತ್ವವನ್ನು ಕಲ್ಪಿಸುತ್ತದೆ. ಇಂತಹ ಸಂದರ್ಭದಲ್ಲಿ ಕರ್ನಾಟಕ ಸರ್ಕಾರವು "ಶಾಶ್ವತ ವಾಸಸ್ಥಳ ಪ್ರಮಾಣಪತ್ರ" ನೀಡುತ್ತಿರುವುದು ಸಂವಿಧಾನಾತ್ಮಕ ವ್ಯವಸ್ಥೆಗೆ ವಿರುದ್ಧವಾಗಿದೆ. ರಾಜ್ಯ ಸರ್ಕಾರವು ಈ ಪ್ರಕ್ರಿಯೆ ಮುಖಾಂತರ ಯಾವುದೇ ಸಂವಿಧಾನಾತ್ಮಕ ಅಥವಾ ಕಾನೂನುಬದ್ಧ ಅಧಿಕಾರವಿಲ್ಲದೆ "ಶಾಶ್ವತ ನಿವಾಸಿಗಳು" ಎಂಬ ಪ್ರತ್ಯೇಕ ವರ್ಗ ಸೃಷ್ಟಿಸಲು ಯತ್ನಿಸುತ್ತಿದೆ. ಯಾವುದೇ ವಿವೇಚನೆಯಿಲ್ಲದ ಇಂಥ ವರ್ಗೀಕರಣವು ಸಂವಿಧಾನದ ಕಲಂ 14ಕ್ಕೆ ವಿರುದ್ಧವಾಗಿದೆ. "ಶಾಶ್ವತ ನಿವಾಸಿಗಳು" ಎಂಬ ಪ್ರತ್ಯೇಕ ವರ್ಗ ರಚಿಸಿ, ಆ ಮೂಲಕ ರಾಜ್ಯ ಸರ್ಕಾರ ಸಂವಿಧಾನದಲ್ಲಿ ಮಾನ್ಯತೆ ಇಲ್ಲದ ಒಂದು ವಿಭಿನ್ನ ಕಾನೂನು ಮಾನ್ಯತೆ ನೀಡಲು ಹೊರಟಿರುವುದು ದೇಶದ ಭದ್ರತೆ, ಸುರಕ್ಷತೆಗೆ ಅಪಾಯ ತರುವಂಥದ್ದು ಎಂದು ಕಿಡಿಕಾರಿದ್ದಾರೆ.

ಪಿಆರ್‌ಸಿಯಲ್ಲಿ ನೀಡಿದ ವಾಸಸ್ಥಳದ ಅರ್ಹತಾ ಮಾನದಂಡಗಳು ಸ್ಥಳೀಯ ಕಂದಾಯ ಅಧಿಕಾರಿಗಳ ಪರಿಶೀಲನೆ ಆಧರಿಸಿವೆ. ಇಲ್ಲಿ ಭಾರತೀಯ ಪೌರತ್ವವನ್ನು ಸಂಬಂಧಿಸಿದ ಕೇಂದ್ರ ಸಂಸ್ಥೆಗಳ ಮೂಲಕ ಪರಿಶೀಲಿಸುವ ಯಾವುದೇ ಕಡ್ಡಾಯ ವಿಧಾನವೇ ಇಲ್ಲದಿರುವುದು ಗಂಭೀರ ವಿಷಯವಾಗಿದೆ. ಇದರಿಂದ ಅನಧಿಕೃತವಾಗಿ ಭಾರತಕ್ಕೆ ಪ್ರವೇಶಿಸಿದವರು ಅಥವಾ ಕಾನೂನುಬಾಹಿರ ವಾಸಿಸುತ್ತಿರುವ ವಿದೇಶಿಗರು ಸ್ಥಳೀಯ ದಾಖಲೆಗಳನ್ನು ಬಳಸಿಕೊಂಡು ಅಥವಾ ವಂಚನೆ ಮೂಲಕ ಶಾಶ್ವತ ನಿವಾಸ ಪ್ರಮಾಣಪತ್ರ ಪಡೆಯುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

> **ರಾಜ್ಯ ಸರ್ಕಾರ ಹೊರಡಿಸಿರುವ ಪಿಆರ್‌ಸಿ ಅಧಿಸೂಚನೆಯ ಉದ್ದೇಶವೇ ಸರಿಯಿಲ್ಲ ಎಂಬುದು ಮೇಲ್ನೋಟಕ್ಕೆ ಸ್ಪಷ್ಟವಾಗುತ್ತಿದೆ. ರಾಜ್ಯದಲ್ಲಿ ಎಸ್‌ಆರ್‌ಐ ಪ್ರಕ್ರಿಯೆ ನಡೆಯುತ್ತಿರುವ ಹೊತ್ತಿನಲ್ಲೇ ನಡೆದ ಈ ಬೆಳವಣಿಗೆ ಹಿಂದೆ ಅಕ್ರಮ ಮತದಾರರನ್ನು ರಕ್ಷಿಸುವ ಪಿತೂರಿಯಾಗಿದೆ. ಈಗಾಗಲೇ ಈ ಸಂಬಂಧ ಪಕ್ಷದಿಂದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ದೂರು ಸಲ್ಲಿಸಲಾಗಿದೆ. ಕೇಂದ್ರ ತಕ್ಷಣ ಮಧ್ಯೆ ಪ್ರವೇಶಿಸಿ, ಇದಕ್ಕೆ ಬ್ರೇಕ್ ಹಾಕಬೇಕು.**
> **-ಡಾ.ಶೈಲೇಂದ್ರ ಬೆಲ್ದಾಳೆ, ಶಾಸಕ, ಬಿಜೆಪಿ ರಾಜ್ಯ ಕಾರ್ಯದರ್ಶಿ**

> **ರಾಷ್ಟ್ರೀಯ ಆಂತರಿಕ ಭದ್ರತೆ ದೃಷ್ಟಿಕೋನದಿಂದ ಪಿಆರ್‌ಸಿ ಅಧಿಸೂಚನೆ ಅತ್ಯಂತ ಆತಂಕಕಾರಿಯಾಗಿದೆ. ಅಕ್ರಮ ವಲಸಿಗರಿಗೆ ಅಧಿಕೃತ ಮನ್ನಣೆ ನೀಡಲು ಮಾಡುತ್ತಿರುವ ದೊಡ್ಡ ಕುತಂತ್ರವೆನಿಸಿದೆ. ಯಾವುದೇ ಕಾರಣಕ್ಕೂ ಇದಕ್ಕೆ ಅವಕಾಶ ಸಿಗಬಾರದು. ರಾಜ್ಯ ಸರ್ಕಾರ ಕೂಡಲೇ ಇದನ್ನು ಕೈಬಿಡದಿದ್ದರೆ ಪಕ್ಷದಿಂದ ಹೋರಾಟ ನಡೆಸಲಾಗುತ್ತದೆ.**
> **-ಸೋಮನಾಥ ಪಾಟೀಲ್, ಬಿಜೆಪಿ ಜಿಲ್ಲಾ ಅಧ್ಯಕ್ಷ**

ಪೌರತ್ವ, ವಿದೇಶಿಗರು, ವಲಸೆ ಹಾಗೂ ಆಂತರಿಕ ಭದ್ರತೆ ವಿಷಯಗಳು ಸಂವಿಧಾನದ ಪ್ರಕಾರ ಕೇಂದ್ರ ಸರ್ಕಾರದ ಅಧಿಕಾರದ ವ್ಯಾಪ್ತಿಗೆ ಒಳಪಟ್ಟಿವೆ. ಹೀಗಿರುವಾಗ ರಾಜ್ಯದಲ್ಲಿ ಶಾಶ್ವತ ನಿವಾಸದಂತೆ ಕಾಣುವ ಯಾವುದೇ ದಾಖಲಾತಿ ವ್ಯವಸ್ಥೆ ರೂಪಿಸುವುದು ನಿಯಮಬಾಹಿರ. ಸಮರ್ಪಕ ಪೌರತ್ವ ಪರಿಶೀಲನೆ ಇಲ್ಲದೆ ಇಂತಹ ಪ್ರಮಾಣಪತ್ರಗಳನ್ನು ನೀಡುವುದು ಅನಧಿಕೃತ ವಲಸಿಗರಿಗೆ ರಾಜ್ಯದ ಆಡಳಿತ ವ್ಯವಸ್ಥೆಯಲ್ಲಿ ಒಳಗೊಳ್ಳಲು ಸಹಕಾರಿಯಾಗಿ, ರಾಷ್ಟ್ರೀಯ ಭದ್ರತೆ, ಕಾನೂನು ಸುವ್ಯವಸ್ಥೆಗೆ ಗಂಭೀರ ಅಪಾಯ ಎದುರಾಗಬಹುದು. ವಲಸಿಗರು ಇಲ್ಲಿ ಅಕ್ರಮ ಚಟುವಟಿಕೆ ತೀವ್ರಗೊಳಿಸಬಹುದು. ಹೀಗಾಗಿ ಇಲ್ಲಿ ಕೇಂದ್ರದ ಹಸ್ತಕ್ಷೇಪ ತುರ್ತು ಅಗತ್ಯವಿದೆ ಎಂದಿದ್ದಾರೆ.

**ಕೇಂದ್ರ ಸರ್ಕಾರ ತುರ್ತು ಮಧ್ಯೆ ಪ್ರವೇಶ ಮಾಡಲಿ**

ಒಮ್ಮೆ ಇಲ್ಲಿ ಪಿಆರ್‌ಸಿ ಪ್ರಮಾಣಪತ್ರ ಪಡೆದ ನಂತರ, ಅದನ್ನು ವಿವಿಧ ರಾಜ್ಯ ಸೌಲಭ್ಯಗಳು, ಸರ್ಕಾರಿ ದಾಖಲೆಗಳು, ಶಿಕ್ಷಣ ಪ್ರವೇಶ, ಉದ್ಯೋಗಾವಕಾಶಗಳು ಮತ್ತು ಇತರೆ ಹಕ್ಕುಗಳನ್ನು ಪಡೆಯಲು ಬಳಸುವ ಸಾಧ್ಯತೆ ಇದೆ. ಈ ಮೂಲಕ ಅನಧಿಕೃತ ವಾಸವನ್ನು ಮಾನ್ಯಗೊಳಿಸುವ ಅಪಾಯ ಉಂಟಾಗಿ, ಅನಧಿಕೃತ ವಲಸಿಗರನ್ನು ಗುರುತಿಸಿ ಹೊರಹಾಕುವ ಕೇಂದ್ರ ಸರ್ಕಾರದ ಪ್ರಯತ್ನಗಳಿಗೆ ಅಡ್ಡಿಯಾಗುತ್ತದೆ. ಹೀಗಾಗಿ ಕೇಂದ್ರದ ತುರ್ತು ಮಧ್ಯೆ ಪ್ರವೇಶ ಅಗತ್ಯವಾಗಿದೆ ಎಂದು ಡಾ.ಶೈಲೇಂದ್ರ ಬೆಲ್ದಾಳೆ, ಸೋಮನಾಥ ಪಾಟೀಲ್ ಹೇಳಿದ್ದಾರೆ. ಪಿಆರ್‌ಸಿಯ ಸಾಂವಿಧಾನಿಕ ಸಿಂಧುತ್ವ ಪರಿಶೀಲಿಸಲು ಕೇಂದ್ರ ಗೃಹ ಸಚಿವಾಲಯ ಸಮರ್ಥ ಅಧಿಕಾರಿಗೆ ನೇಮಿಸಬೇಕು. ಈ ಪರಿಶೀಲನೆ ಆಗುವವರೆಗೆ ಅಧಿಸೂಚನೆಯ ಅನುಷ್ಠಾನ ನಿಲ್ಲಿಸುವಂತೆ ಕರ್ನಾಟಕ ಸರ್ಕಾರಕ್ಕೆ ನಿರ್ದೇಶನ ನೀಡಬೇಕು. ಅಧಿಸೂಚನೆ ಹೊರಡಿಸಿದ ಸಾಂವಿಧಾನಿಕ ಮತ್ತು ಶಾಸನಬದ್ಧ ಪ್ರಾಧಿಕಾರದ ಬಗ್ಗೆ ರಾಜ್ಯ ಸರ್ಕಾರದಿಂದ ವಿವರವಾದ ವರದಿ ಪಡೆಯಬೇಕು. ಕೇಂದ್ರ ಸಂಸ್ಥೆಗಳ ಮೂಲಕ ಭಾರತೀಯ ಪೌರತ್ವದ ಸಮಗ್ರ ಪರಿಶೀಲನೆಯಿಲ್ಲದೆ ಯಾವುದೇ ಪಿಆರ್‌ಸಿಗಳನ್ನು ನೀಡಕೂಡದು, ನೀಡಿದರೂ ಅದಕ್ಕೆ ಅಮಾನ್ಯ ಮಾಡಲು ಆಗ್ರಹಿಸಿದ್ದಾರೆ.

# ಮಹಿಳೆಯರಿಂದ ಮಳೆಗಾಗಿ ಪ್ರಾರ್ಥನೆ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ತಾಲೂಕಿನ ಜೂಲಕಟ್ಟಿ ಗ್ರಾಮದಲ್ಲಿ ರೈತ ಮಹಿಳೆಯರು , ಶ್ರೀ ದುರ್ಗಾದೇವಿಯ ಕಟ್ಟೆಯ ಹತ್ತಿರ ಮುತ್ತೈದೆಯರು ಸೇಕೊಂಡು ಹಿಂದಿನ ಸಂಪ್ರದಾಯದಂತೆ ಈ ವರ್ಷ ಹಿತ್ತಾಳೆ ನೀರಿನ ಕೊಡವನ್ನು ತುಂಬಿಸಿ, ಅದಕ್ಕೆ ಹೂವು ಮಾಲೆಗಳನ್ನು ಅರ್ಪಿಸಿ ಪೂಜಾ ವಿಧಾನಗಳಿಂದ ಭಕ್ತಿ ಭಾವದಿಂದ ಪೂಜೆ ಸಲ್ಲಿಸಿದ ಬಳಿಕ ಬಾಲ ಮಕ್ಕಳು ಹಾಗೂ ಮುತ್ತೈದೆಯರು ಗ್ರಾಮದದೇವಸ್ಥಾನದ ದೇವರುಗಳಲ್ಲಿ ಪ್ರಾರ್ಥಿಸಿದರು. ಮತ್ತು ಹಳೆಯ ಊರಿನ ಮಹಿಳೆಯರು ಲಕ್ಷ್ಮಿ ದೇವಿಗೆ ಉಡಿಯನ್ನು ತುಂಬಿ ವಿಶೇಷ ಪೂಜೆ ಸಲ್ಲಿಸಿದರು ನಂತರ ಮಳೆದೇವ ಹಾಗೂ ದೇವರುಗಳನ್ನು ಕುರಿತು ಹಾಡುಗಳನ್ನು ಹಾಡಿ ಮಳೆಗಾಗಿ ಪ್ರಾರ್ಥಿಸಿದರು.ನಂತರ ಪ್ರಸಾದ ಸೇವೆ ಜರುಗಿತು.

## ಅಶ್ಲೀಲ ಕಮೆಂಟ್ ಹಾಕಿದವನ ಶೀಘ್ರ ಬಂಧನ: ಗೃಹ ಸಚಿವ ಭರವಸೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲೂಕಿನ ಶಾಸಕ ಜಿ.ಡಿ.ಹರೀಶ್‌ಗೌಡ ಅವರ ಪತ್ನಿ ವರ್ಷಾ ಹರೀಶ್‌ಗೌಡ ಅವರಿಗೆ ಸಾಮಾಜಿಕ ಜಾಲತಾಣದಲ್ಲಿ ಅಶ್ಲೀಲ ಕಮೆಟ್ ಹಾಕಿದ ವ್ಯಕ್ತಿಯನ್ನು ಶೀರ್ಘದಲ್ಲೇ ಬಂಧಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಸಕರ ಪತ್ನಿಯವರು ನೀಡಿದ್ದ ಹೇಳಿಕೆಯನ್ನು ಗಮನಿಸಿದ್ದೇನೆ. ಅವರ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಾಗಿದೆ. ಪ್ರಕರಣ ಭೇದಿಸಲು ಸಮಯ ತೆಗೆದುಕೊಳ್ಳುತ್ತದೆ. ಆದರೆ ಇದರ ಹಿಂದೆ ನಮ್ಮ ಪಕ್ಷದವರೂ ಸೇರಿದಂತೆ ಯಾರೇ ಪ್ರಭಾವಿಗಳು ಇದ್ದರೂ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದರು.ಸಾಮಾಜಿಕ ಜಾಲತಾಣಗಳಲ್ಲಿ ಇದೆಲ್ಲ ಆಗುತ್ತಲೇ ಇರುತ್ತದೆ. ಇತ್ತೀಚೆಗೆ ನಟಿಯೊಬ್ಬರ ಎಐ ವಿಡಿಯೋ ಹರಿಬಿಡಲಾಗಿತ್ತು. ಸೆಲೆಬ್ರಿಟಿಗಳ ವಿಚಾರದಲ್ಲಿ ತೆಗೆದುಕೊಂಡ ರೀತಿಯಲ್ಲೇ ನನ್ನ ಪ್ರಕರಣದಲ್ಲೂ ಕ್ರಮ ಕೈಗೊಳ್ಳಬೇಕೆಂದು ವರ್ಷಾ ಹರೀಶ್‌ಗೌಡ ಅವರು ಕೇಳಿರುವುದನ್ನು ಗಮನಿಸಿದ್ದೇನೆ. ಎಲ್ಲರಿಗೂ ಒಂದೇ ನ್ಯಾಯ. ಸ್ವಲ್ಪ ಸಮಯ ಬೇಕಾಗಬಹುದು. ನಾವು ಪ್ರಕರಣವನ್ನು ಭೇದಿಸುತ್ತೇವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ಬಣಜಿಗ ಸಮಾಜದ ಅವಹೇಳನ ಆರೋಪಕ್ಕೆ ಶಿಕ್ಷಕನ ವಿರುದ್ಧ ಎಫ್‌ಐಆರ್

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಜು.11: ಬಣಜಿಗ ಸಮಾಜದ ಕುರಿತು ಅವಹೇಳನಕಾರಿ ಹಾಗೂ ನಿಂದನಾತ್ಮಕ ಪದಗಳನ್ನು ಬಳಸಿ ಸಮಾಜಗಳ ನಡುವೆ ದ್ವೇಷ ಮತ್ತು ವೈಮನಸ್ಸು ಉಂಟುಮಾಡುವ ರೀತಿಯಲ್ಲಿ ಮಾತನಾಡಿದ್ದಾರೆ ಎಂಬ ಆರೋಪದಡಿ ರಾಜನಕೊಳೂರ ಗ್ರಾಮದ ದೈಹಿಕ ಶಿಕ್ಷಣ ಶಿಕ್ಷಕ ಬಸನಗೌಡ ತಂದೆ ನಾನಾಗೌಡ ವಠಾರ ವಿರುದ್ಧ ಹುಣಸಗಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ಸುರಪುರ ತಾಲೂಕು ಯುವ ಘಟಕದ ಅಧ್ಯಕ್ಷ ಶಿವರಾಜ ತಂದೆ ಶರಣಪ್ಪ ಕಲಕೇರಿ, ರಂಗಮಪೇಠ (ಸುರಪುರ) ಅವರು ನೀಡಿದ ದೂರಿನ ಮೇರೆಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ದೂರಿನ ಪ್ರಕಾರ, ಜುಲೈ 11ರಂದು ಮಧ್ಯಾಹ್ನ ಸುಮಾರು 12.30ರ ವೇಳೆಗೆ ಹುಣಸಗಿ ಪಟ್ಟಣದ ಬಸವೇಶ್ವರ ವೃತ್ತದ ಬಳಿ ಇದ್ದಾಗ, ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ವಾಟ್ಸಪ್ ಗುಂಪಿನಲ್ಲಿ ಹರಿದಾಡಿದ ಆಡಿಯೋವನ್ನು ದೂರುದಾರರು ಆಲಿಸಿದ್ದಾರೆ. ಆ ಆಡಿಯೋದಲ್ಲಿ ಬಸನಗೌಡ ವಠಾರ ಅವರು ಗುಳಬಾಳ ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿಯೊಂದಿಗೆ ದೂರವಾಣಿ ಮೂಲಕ ಮಾತನಾಡುವ ವೇಳೆ ಬಣಜಿಗ ಸಮಾಜದ ಕುರಿತು ಅವಹೇಳನಕಾರಿ ಹಾಗೂ ನಿಂದನಾತ್ಮಕ ಪದಗಳನ್ನು ಬಳಸಿರುವುದು ಕೇಳಿಬಂದಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಒಬ್ಬ ಜವಾಬ್ದಾರಿಯುತ ಶಿಕ್ಷಕರಾಗಿ ಎಲ್ಲ ಸಮಾಜಗಳ ನಡುವೆ ಸೌಹಾರ್ದತೆ ಮತ್ತು ಸಾಮರಸ್ಯ ಬೆಳೆಸಬೇಕಾದ ಸ್ಥಾನದಲ್ಲಿದ್ದರೂ, ಸಮಾಜಗಳ ನಡುವೆ ದ್ವೇಷ ಹಾಗೂ ವೈಮನಸ್ಸು ಉಂಟುಮಾಡುವ ಉದ್ದೇಶದಿಂದ ಈ ರೀತಿಯ ಹೇಳಿಕೆ ನೀಡಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಈ ಹೇಳಿಕೆಯಿಂದ ಬಣಜಿಗ ಸಮಾಜದ ಭಾವನೆಗಳಿಗೆ ಧಕ್ಕೆಯಾಗಿದ್ದು, ಆರೋಪಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ದೂರುದಾರರು ಮನವಿ ಮಾಡಿದ್ದಾರೆ.

ಈ ದೂರಿನ ಆಧಾರದ ಮೇಲೆ ಹುಣಸಗಿ ಪೊಲೀಸ್ ಠಾಣೆಯಲ್ಲಿ ಕ್ರೈಂ ನಂ. 159/2026 ದಾಖಲಿಸಿ, ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಕಲಂ 78(3)ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಲಾಗಿದೆ.ಈ ಕುರಿತು ಹುಣಸಗಿ ಪೊಲೀಸ್ ಠಾಣೆಯ ಕ್ರೈಂ ಪಿಎಸ್‌ಐ ಬಾಗಣ್ಣ ಅವರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿರುವುದಾಗಿ ತಿಳಿಸಿದ್ದಾರೆ.



ಪಿರಿಯಾಪಟ್ಟಣ : ಸರ್ಕಾರಿ ಶಾಲೆಗೆ ಖ್ಯಾತ ಉದ್ಯಮಿ ಡಿ ರಾಜಶೇಖರ ದೊಡ್ಡಣ್ಣ ಮೌರ್ಯ ಪ್ರಿಂಟಿಂಗ್ ಮಿಷನ್ ಕೊಡುಗೆಯಾಗಿ ನೀಡುವ ಮೂಲಕ ಪ್ರೇರಣೆಯಾಗಿದ್ದಾರೆ. ತಾಲೂಕಿನ ಸಾಲುಕೊಪ್ಪಲು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಕೊಡುಗೆಯಾಗಿ ನೀಡಿ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಸಣ್ಣದೊಂದು ಕೊಡುಗೆಯ ಪ್ರಯತ್ನ ಇದಾಗಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಎಸ್ ಟಿ ಎಂ ಸಿ ಪದಾಧಿಕಾರಿಗಳು ಹಾಗೂ ಪೋಷಕರು ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ದೊಡ್ಡಣ್ಣ ಮೌರ್ಯ ರವರನ್ನು ಅಭಿನಂದಿಸಿದರು.

# ಗೆಳೆಯರ ಬಳಗದಿಂದ ರಾಜ್ಯ ಸಂಚಾಲಕರಾಗಿ ಆಯ್ಕೆಯಾದ ಬಸವರಾಜ ರಾಮನಗೌಡರಿಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಜು. 11: ತಾಲೂಕಿನ ಕೊಡೇಕಲ್ ಗ್ರಾಮದಲ್ಲಿರುವ ಶ್ರೀ ಪ್ಯಾಟಿ ಬಸವೇಶ್ವರ ಆವರಣದಲ್ಲಿ, ನಮ್ಮ ಕರ್ನಾಟಕ ಸೇನೆಯ ರಾಜ್ಯ ಸಂಚಾಲಕರಾಗಿ ಆಯ್ಕೆಯಾದ ಬಸವರಾಜ ರಾಮನಗೌಡ ಅವರಿಗೆ ಗೆಳೆಯರ ಬಳಗದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು.ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಬಸವರಾಜ ಅಂಗಡಿ ಮಾತನಾಡಿ, ಬಸವರಾಜ ರಾಮನಗೌಡ ಅವರು ಕನ್ನಡ ನಾಡು–ನುಡಿ, ಸಂಸ್ಕೃತಿ ಹಾಗೂ ಕನ್ನಡಿಗರ ಹಕ್ಕುಗಳ ಪರವಾಗಿ ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿ ಸಂಘಟನೆಯನ್ನು ಬಲಪಡಿಸಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಹಣಮಂತ ಗಡ್ಡದ, ಶಾಂತಕುಮಾರ ಅಡ್ಡಿ, ರವಿಶಂಕರ ಅಡ್ಡಿ, ಸೋಮಶೇಖರ ಪಂಜಗಲ್, ಬಸವರಾಜ ಜಾಲಿಗಿಡದ, ಸಂಗನಬಸ್ಸು ಪಂಜಗಲ್, ರವಿಕುಮಾರ ಬಂಟನೂರ, ಮೌನೇಶ ಬಾವೂರ, ಸಂಗಯ್ಯ ಬಾಚಿಹಾಳ, ಬಸವರಾಜ ಸಲೆಗಾರ, ಕುಮಾರ ರಾಮನಗೌಡರ್, ಹನುಮೇಶ್ ಹಾವೇರಿ ಸೇರಿದಂತೆ ಗೆಳೆಯರ ಬಳಗದ ಸದಸ್ಯರು, ಕನ್ನಡಾಭಿಮಾನಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದು, ನೂತನ ರಾಜ್ಯ ಸಂಚಾಲಕರಿಗೆ ಶುಭಾಶಯ ಕೋರಿದರು.ಸನ್ಮಾನ ಸ್ವೀಕರಿಸಿದ ಬಸವರಾಜ ರಾಮನಗೌಡ ಅವರು ಮಾತನಾಡಿ, ತಮ್ಮ ಮೇಲೆ ಇಟ್ಟಿರುವ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿ, ಕನ್ನಡ ನಾಡು–ನುಡಿ, ಸಂಸ್ಕೃತಿ ಮತ್ತು ಸಮಾಜಮುಖಿ ಕಾರ್ಯಗಳಿಗೆ ಇನ್ನಷ್ಟು ಶ್ರಮಿಸುವುದಾಗಿ ತಿಳಿಸಿದರು. ಕಾರ್ಯಕ್ರಮವು ಸ್ನೇಹಪೂರ್ವಕ ಹಾಗೂ ಆತ್ಮೀಯ ವಾತಾವರಣದಲ್ಲಿ ನಡೆಯಿತು.



# ಹುಣಸೂರಲ್ಲಿ 108 ಅಂಬುಲೆನ್ಸ್ ಸೇವೆ ಒದಗಿಸಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

2008ರಲ್ಲಿ ಆರಂಭವಾದ 108 ಆರೋಗ್ಯ ರಕ್ಷಕವಚ ಆಂಬುಲೆನ್ಸ್ ಸೇವೆಯನ್ನು ಗ್ರೀನ್ ಹೆಲ್ತ್ ಸರ್ವಿಸಸ್ ಎಂಬ ಖಾಸಗಿ ಕಂಪನಿಯವರು ನಿರ್ವಹಿಸುತ್ತಿದ್ದರು. ಪ್ರಾರಂಭದಲ್ಲಿ ಉತ್ತಮವಾಗಿ ಕಾರ್ಯವನ್ನು ನಿರ್ವಹಿಸಿದ ಖಾಸಗಿ ಕಂಪನಿಯು ನಂತರದಲ್ಲಿ 108 ವಾಹನಗಳು ರಿಪೇರಿ ಎಂದು ಹೋದರೆ ಸರಿಯಾದ ನಿರ್ವಹಣೆಯನ್ನು ಮಾಡದೆ ರಾಜ್ಯದ್ಯಂತ ಬಡ ಜನರು ಪರದಾಡುವ ಸ್ಥಿತಿ ಬಂದೊದಗಿತ್ತು. ಎಂದು ಬೇಸರ ವ್ಯಕ್ತಪಡಿಸಿರುವ ಸತ್ಯ ಎಂ ಎ ಎಸ್ ಫೌಂಡೇಶನ್ ಅಧ್ಯಕ್ಷ ಸತ್ಯಪ್ಪ ರವರು ಮಾತನಾಡಿ ಹುಣಸೂರಿನಲ್ಲಿ 108 ಆಂಬುಲೆನ್ಸ್ ಇಲ್ಲದೆ ಬಡ ರೋಗಿಗಳು ಹಾಗೂ ಸಾರ್ವಜನಿಕರ ಪರದಾಟ, ಕೂಡಲೆ ಆರೋಗ್ಯ ಸಚಿವರು ಕ್ರಮ ಕೈಗೊಂಡು ಆಂಬುಲೆನ್ಸ್ ನೀಡಬೇಕಾಗಿ ಮನವಿ ಮುಖಾಂತರ ಒತ್ತಾಯಿಸಿದ್ದಾರೆ.ಆದರೆ ಇದೀಗ 2025– 26ರ ಬಜೆಟ್ ಘೋಷಣೆಯಂತೆ ಸರ್ಕಾರವೇ 108 ಆಂಬುಲೆನ್ಸ್ ಸೇವೆಯನ್ನು ಸೂಪರ್ ದಿಗೆ ತೆಗೆದುಕೊಂಡಿರುವುದು ದೇಶದಲ್ಲಿ ಮೊದಲ ಬಾರಿಗೆ ಕರ್ನಾಟಕ ಅರಗಿ ಇಲಾಖೆ ಕ್ರಮ ಜಾರಿಗೆ ತಂದಿರುವುದು ಶ್ಲಾಘನೀಯ. 108 ಆಂಬುಲೆನ್ಸ್ ಸೇವೆಯನ್ನು ಕಮಾಂಡ್ ಕಂಟ್ರೋಲ್ 24/7 ಕಾರ್ಯನಿರ್ವಹಿಸಲಿದ್ದು ಈ ಹೊಸ ವ್ಯವಸ್ಥೆಯಲ್ಲಿ ಆಂಬುಲೆನ್ಸ್ ಟ್ರ್ಯಾಕಿಂಗ್ ವೈದ್ಯರಿಂದ ತುರ್ತು ಸಂಪರ್ಕ, ಆಸ್ಪತ್ರೆಗಳಿಗೆ ಮುನ್ನೆಚ್ಚರಿಕೆ ಮಾಹಿತಿ ಹಾಗೂ ರೋಗಿಗೆ ಸೂಕ್ತ ಆಸ್ಪತ್ರೆ ಸಾಗಿಸುವ ವ್ಯವಸ್ಥೆ ಕಲ್ಪಿಸಲಾಗಿರುವುದು ಒಂದು ಉತ್ತಮ ಕಾರ್ಯವೇ ಸರಿ.ಆದರೆ ಮಾನ್ಯ ಆರೋಗ್ಯ ಮಂತ್ರಿಗಳಾದ ಅವರಲ್ಲಿ ನನ್ನ ಮನವಿ ಏನೆಂದರೆ ರಾಜ್ಯದ ತಾಲೂಕು ಆಸ್ಪತ್ರೆಗಳಲ್ಲಿ ಹೋಬಳಿ ಮಟ್ಟದ ಕೇಂದ್ರಗಳ ಆಸ್ಪತ್ರೆಗಳಲ್ಲಿ ಇದೇ 108 ಆಂಬುಲೆನ್ಸ್ ಗಳ ಸೇವೆಯನ್ನು ಆದಷ್ಟು ಶೀಘ್ರವಾಗಿ ಮಂಜೂರು ಮಾಡಿ ಬಡ ಜನರಿಗೆ ಸೂಕ್ತ ಸಮಯದಲ್ಲಿ ಸೇವೆ ಕಲ್ಪಿಸುವಂತೆ ಆಗಬೇಕೆಂದು ಹಾಗೂ 108 ಆಂಬುಲೆಸ್ಗಳ ಸೇವೆಯ ಜೊತೆಯಲ್ಲಿಯೇ 108 ವಾಹನಗಳ ವೈದ್ಯರು,ಸಿಬ್ಬಂದಿಗಳು , ವಾಹನ ಚಾಲಕರ ವೇತನ ಹಾಗೂ ಇತರೆ ಸವಲತ್ತುಗಳ ಬಗ್ಗೆಯೂ ಸರ್ಕಾರ ಚಿಂತನೆ ನಡೆಸಿ 108 ಆಂಬುಲೆನ್ಸ್ ವಾಹನಗಳ ಸೇವೆ ಜನತೆಗೆ ಸಿಗುವಂತಾಗಬೇಕೆಂದು ರಾಜ್ಯದ ಜನತೆಯ ಪರವಾಗಿ ಅತ್ಯಂತ ಕಳವಿ ಕಳಕಳಿಯಿಂದ ಮನವಿ ಮಾಡಿಕೊಳ್ಳುತ್ತೇನೆ.* ಈ ಎಲ್ಲಾ ಉದ್ದೇಶಗಳನ್ನು ಗಮನದಲ್ಲಿಟ್ಟುಕೊಂಡು ಆಂಬುಲೆನ್ಸ್ ಸೇವೆಯನ್ನು ಕಲ್ಪಿಸಿದರೆ ಈ ಯೋಜನೆ ಯಶಸ್ವಿಯಾಗುವುದರಲ್ಲಿ ಸಂದೇಹವಿಲ್ಲ. ಎಂದರು ಇದರೊಂದಿಗೆ 108 ಆಂಬುಲೆನ್ಸ್ ವಾಹನಗಳ ಸೇವೆಯನ್ನು ಕೋರಿ ರೋಗಿಗಳಿಂದ ತುರ್ತು ಕರೆ ಬಂದಲ್ಲಿ 15 ನಿಮಿಷಗಳ ಒಳಗಾಗಿ ಆಂಬುಲೆನ್ಸ್ ಬಾರದಿದ್ದಲ್ಲಿ 5000 ಗಳ ದಂಡ ವಿಧಿಸಿರುವುದು ಸಹ ಅಂಬುಲೆನ್ಸ್ ಸೇವೆಗಳ ಬಗ್ಗೆ ಖಡಕ್ಕಾಗಿ ಕ್ರಮ ಕೈಗೊಂಡಿದ್ದು, ಇದು ಜಾರಿಗೆ ಬಂದಲ್ಲಿ 108 ಆಂಬುಲೆನ್ಸ್ ಗಳ ಸಮರ್ಪಕ ಸೇವೆ ಸಿಗುವುದರಲ್ಲಿ ಸಂದೇಹವಿಲ್ಲ.ಸಾಮಾಜಿಕ ನ್ಯಾಯದ ಹರಿಕಾರ ಮಾಜಿ ಮುಖ್ಯಮಂತ್ರಿ ದಿವಂಗತ ಡಿ ದೇವರಾಜು ಅರಸುರವರ ಕರ್ಮಭೂಮಿಯಾದ ಮೈಸೂರು ಜಿಲ್ಲೆ ಹುಣಸೂರು ತಾಲೂಕಿನ 108 ಆಂಬುಲೆನ್ಸ್‌ಗಳ ಇಲ್ಲದೆ ಬಡ ಜನರು ಬಹಳ ಪರದಾಡುತ್ತಿದ್ದಾರೆ.ಇತ್ತೀಚಿನ ದಿನಗಳಲ್ಲಿ 108 ಆಂಬುಲೆನ್ಸ್ ವಾಹನವು ರಿಪೇರಿಗೆ ಹೋದರೆ ವಾಪಸು ಬರುವುದೇ ಇಲ್ಲ. ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷತನದಿಂದ ಸಾರ್ವಜನಿಕರ ಸೇವೆಗೆ ತೊಡಕು ಮಾಡಿರುತ್ತಿದ್ದಾರೆ.*ಮೈಸೂರು ನಗರದಲ್ಲಿ ರಾಷ್ಟ್ರೀಯ ಹೆದ್ದಾರಿ 275 ಹಾದು ಹೋಗಿರುವುದರಿಂದ ಪ್ರತಿನಿತ್ಯ 30 ರಿಂದ 40 ಸಾವಿರ ವಾಹನಗಳು ಸಂಚರಿಸುತ್ತಿದ್ದು ಪದೇ ಪದೇ ಅಪಘಾತಗಳು ಸಂಭವಿಸುತ್ತಿದ್ದು 108 ವಾಹನಕ್ಕೆ ಕರೆ ಮಾಡಿದರೆ ರಿಪೇರಿ ಹೋಗಿದೆ ಎಂದು ಅಥವಾ ಇಲ್ಲವೆಂದು ಉತ್ತರಗಳು ದೊರೆಯುತ್ತಿದೆ. ಹುಣಸೂರಿನಲ್ಲಿ ಅತಿ ಹೆಚ್ಚುಆದಿವಾಸಿಗಳು ವಾಸ ಮಾಡುತ್ತಿರುವುದರಿಂದ ಬಡ ಜನರು ತಮ್ಮ ಅನಾರೋಗ್ಯ ಸಂದರ್ಭದಲ್ಲಿ ಆಯಾಯ ಹೋಬಳಿ ಕೇಂದ್ರಗಳ ಹಾಗೂ ಹುಣಸೂರಿನ ಸರ್ಕಾರಿ ಆಸ್ಪತ್ರೆಗೆ ಆಂಬುಲೆನ್ಸ್ ಗಾಗಿ ಕರೆ ಮಾಡಿದರೆ 108 ವಾಹನ ಲಭ್ಯವಿಲ್ಲ ಎಂದು ಹೇಳುತ್ತಾರೆ. ಇದರಿಂದಾಗಿ ಸಕಾಲದಲ್ಲಿ ಎಷ್ಟೋ ಜನರಿಗೆ ಚಿಕಿತ್ಸೆ ದೊರೆಯದೆ ಪ್ರಾಣ ಬಿಟ್ಟಿರುವ ಪ್ರಸಂಗಗಳು ನಡೆದಿದೆ.ಕೆಲವು ಬಾರಿ ದುಬಾರಿ ಹಣ ಕೊಟ್ಟು ಖಾಸಗಿ ವಾಹನದ ಮೊರೆ ಹೋಗುವಂತ ಪರಿಸ್ಥಿತಿ ಬಂದಿದೆ. ಹುಣಸೂರು ತಾಲೂಕು ಆಸ್ಪತ್ರೆಯ 108 ಆಂಬುಲೆನ್ಸ್ ಮತ್ತು ರತ್ನಪುರಿ 108 ಆಂಬುಲೆನ್ಸ್ ಮತ್ತು ಹನಗೂಡು 108 ಆಂಬುಲೆನ್ಸ್ ವರ್ಷವಾದರೂ ಇದುವರೆಗೂ ಸೇವೆಗೆ ಸಿಗುತ್ತಿಲ್ಲ. ಹನುಗೂಡು ಭಾಗದ ಕಾಡಂಚಿನ ಪ್ರದೇಶದ ಜನರಿಗೆ ತುಂಬಾ ತೊಂದರೆಯಾಗಿದ್ದು ತುರ್ತು ಪರಿಸ್ಥಿತಿಗೆ ಸಿಗದಂತಹ ವ್ಯವಸ್ಥೆಯಾಗಿದೆ.ಸರ್ಕಾರದಿಂದ 108 ವಾಹನಗಳ ಅಪ್ರೂವಲ್ ಸಿಕ್ಕಿದರು ಸಹ ನಿರ್ಲಕ್ಷತನದಿಂದ ರಿಪೇರಿ ಮಾಡಿಸದೆ ಜನರ ಹಿತದೃಷ್ಟಿಗೆ ಧಕ್ಕೆ ತರುವಂತ ಕೆಲಸ ಆಗುತ್ತಿದೆ.ಆದ್ದರಿಂದ ಸರ್ಕಾರವು 108 ವಾಹನಗಳ ಸಮರ್ಪಕ ಸೇವೆಗೆ ಕ್ರಮ ಕೈಗೊಂಡಿರುವ ಹಿನ್ನೆಲೆಯಲ್ಲಿ ಹುಣಸೂರು ತಾಲೂಕಿನ ಎಲ್ಲಾ ಆಸ್ಪತ್ರೆಗಳಿಗೆ 108 ಆಂಬುಲೆನ್ಸ್ ವಾಹನಗಳನ್ನು ಆದಷ್ಟು ಶೀಘ್ರವಾಗಿ ಮಾನ್ಯ ಆರೋಗ್ಯ ಸಚಿವರು ಮಂಜೂರು ಮಾಡಬೇಕೆಂದು ಮನವಿ ಮಾಡಿಕೊಳ್ಳುತ್ತೇನೆ ಎಂದರು.



# ಸೇವಾನಿರತ ಶಿಕ್ಷಕರ ಹಕ್ಕುಗಳ ರಕ್ಷಣೆಗೆ ಸಂಸತ್ತಿನಲ್ಲಿ ಧ್ವನಿಯಾಗುವಂತೆ ಸಂಸದರಿಗೆ ಶಿಕ್ಷಕರ ಸಂಘದ ಮನವಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸೇವಾನಿರತ ಶಿಕ್ಷಕರ ಉದ್ಯೋಗ ಭದ್ರತೆ ಹಾಗೂ ಸೇವಾ ಹಕ್ಕುಗಳಿಗೆ ಯಾವುದೇ ಧಕ್ಕೆಯಾಗದಂತೆ ರಕ್ಷಣೆ ಒದಗಿಸಲು ಸಂಸತ್ತಿನಲ್ಲಿ ವಿಷಯ ಪ್ರಸ್ತಾಪಿಸಿ ಕೇಂದ್ರ ಸರ್ಕಾರದ ಗಮನ ಸೆಳೆಯುವಂತೆ ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ.), ಜಿಲ್ಲಾ ಘಟಕ ವತಿಯಿಂದ ಬೀದರ ಲೋಕಸಭಾ ಕ್ಷೇತ್ರದ ಸಂಸದ ಸಾಗರ ಈಶ್ವರ ಖಂಡ್ರೆ ಅವರಿಗೆ ಮನವಿ ಸಲ್ಲಿಸಲಾಯಿತು.

ಶಿಕ್ಷಕರ ಅರ್ಹತಾ ಪರೀಕ್ಷೆ ಕಡ್ಡಾಯಗೊಳಿಸುವ ಸಂಬಂಧ ಉಂಟಾಗಿರುವ ಗೊಂದಲವನ್ನು ನಿವಾರಿಸಿ, ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ ಹಾಗೂ ಟಿಇಟಿ ಮಾರ್ಗಸೂಚಿಗಳು ಜಾರಿಗೆ ಬರುವುದಕ್ಕೂ ಮುನ್ನ ಕಾನೂನುಬದ್ಧವಾಗಿ ನೇಮಕಗೊಂಡಿರುವ ಶಿಕ್ಷಕರಿಗೆ ನಂತರದ ಅರ್ಹತಾ ಷರತ್ತುಗಳನ್ನು ಹಿಂದಿನ ದಿನಾಂಕದಿಂದ ಅನ್ವಯಿಸಬಾರದು ಎಂದು ಸಂಘವು ಮನವಿಯಲ್ಲಿ ಒತ್ತಾಯಿಸಿದೆ.

ಸೇವಾನಿರತ ಶಿಕ್ಷಕರ ಸೇವಾ ಹಕ್ಕುಗಳು, ಉದ್ಯೋಗ ಭದ್ರತೆ, ವೇತನ, ಪಿಂಚಣಿ, ಬಡ್ತಿ ಸೇರಿದಂತೆ ಯಾವುದೇ ಸೌಲಭ್ಯಗಳಿಗೆ ಧಕ್ಕೆಯಾಗದಂತೆ ಕೇಂದ್ರ ಸರ್ಕಾರ ಸೂಕ್ತ ಕಾನೂನು ಹಾಗೂ ಆಡಳಿತಾತ್ಮಕ ಕ್ರಮಗಳನ್ನು ಕೈಗೊಳ್ಳಬೇಕು. ಈ ವಿಷಯವಾಗಿ ಸಂಸತ್ತಿನಲ್ಲಿ ಚರ್ಚೆ ನಡೆಸಿ, ರಾಜ್ಯ ಸರ್ಕಾರಗಳು, ಶಿಕ್ಷಕರ ಸಂಘಟನೆಗಳು ಹಾಗೂ ಶಿಕ್ಷಣ ತಜ್ಞರೊಂದಿಗೆ ಸಮಾಲೋಚನೆ ನಡೆಸುವ ಮೂಲಕ ನ್ಯಾಯಸಮ್ಮತ ಮತ್ತು ಮಾನವೀಯ ಪರಿಹಾರ ಕಲ್ಪಿಸಬೇಕೆಂದು ಮನವಿಯಲ್ಲಿ ಆಗ್ರಹಿಸಲಾಗಿದೆ.ಇದೇ ಸಂದರ್ಭದಲ್ಲಿ ಬೀದರ ನಗರದ ಶಿಕ್ಷಕರ ಗುರುಭವನವನ್ನು ತೆರವುಗೊಳಿಸಿ ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ.), ಜಿಲ್ಲಾ ಘಟಕ ಬೀದರಕ್ಕೆ ಹಸ್ತಾಂತರಿಸುವಂತೆ ಮತ್ತೊಂದು ಮನವಿಯನ್ನೂ ಸಲ್ಲಿಸಲಾಯಿತು. ಮನವಿಯನ್ನು ಸ್ವೀಕರಿಸಿದ ಸಂಸದ ಸಾಗರ ಈಶ್ವರ ಖಂಡ್ರೆ, ಸೇವಾನಿರತ ಶಿಕ್ಷಕರ ನ್ಯಾಯಸಮ್ಮತ ಬೇಡಿಕೆಗಳ ಕುರಿತು ಅಗತ್ಯ ಮಟ್ಟದಲ್ಲಿ ಗಮನಹರಿಸಿ, ಸಂಬಂಧಿತ ಸಚಿವಾಲಯ ಮತ್ತು ಸಂಸತ್ತಿನ ಸೂಕ್ತ ವೇದಿಕೆಗಳಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿ ನ್ಯಾಯ ದೊರಕಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ರವೀಂದ್ರ ರಡ್ಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಂಡರಿ ಆಡೆ, ಜಿಲ್ಲಾ ಉಪಾಧ್ಯಕ್ಷ ಅಲ್ಲಾವುದ್ದೀನ್ ಪಟೇಲ್ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಘಟಕಗಳ ಪದಾಧಿಕಾರಿಗಳು, ನಿರ್ದೇಶಕರು, ಶಿಕ್ಷಕರು ಮತ್ತು ಸಂಘದ ಮುಖಂಡರು ಉಪಸ್ಥಿತರಿದ್ದರು.



# ವ್ಯಸನಮುಕ್ತ ಸಮಾಜದಿಂದ ಮಾತ್ರ ಸುಖೀ ಕುಟುಂಬ ಸಾಧ್ಯ:ಮುರುಳಿಧರ್ ಎಮ್. ಎಲ್

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಮದ್ಯಪಾನ ಹಾಗೂ ಇತರೆ ಕೆಟ್ಟ ವ್ಯಸನಗಳು ಕೇವಲ ಒಬ್ಬ ವ್ಯಕ್ತಿಯನ್ನು ಮಾತ್ರವಲ್ಲದೆ, ಇಡೀ ಕುಟುಂಬವನ್ನು ಆರ್ಥಿಕ ಹಾಗೂ ಸಾಮಾಜಿಕವಾಗಿ ವಿನಾಶದತ್ತ ಕೊಂಡೊಯ್ಯುತ್ತವೆ. ಹೀಗಾಗಿ ಪ್ರತಿಯೊಬ್ಬರೂ ವ್ಯಸನಮುಕ್ತ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಸಂಕಲ್ಪ ತೊಡಬೇಕು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್‌ನ ಜಿಲ್ಲಾ ನಿರ್ದೇಶಕ ಮುರುಳಿಧರ್ ಎಮ್. ಎಲ್. ಕರೆ ನೀಡಿದರು.

ಪಟ್ಟಣದ ಬಸವ ಕಲ್ಯಾಣ ಮಂಟಪದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿರುವ 2085ನೇ ಮದ್ಯವರ್ಜನ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.ಯೋಜನೆಯ ಜನಪರ ಕಾರ್ಯಕ್ರಮಗಳನ್ನು ಶ್ಲಾಘಿಸಿದ ಅವರು, ವ್ಯಸನಗಳಿಂದ ಮುಕ್ತಿ ಹೊಂದಲು ಇಂತಹ ಶಿಬಿರಗಳು ದಾರಿದೀಪ ಎಂದರು.ಇದೇ ವೇಳೆ ಮಾತನಾಡಿದ ಜಿಲ್ಲಾ ಜನಜಾಗೃತಿ ಸಮಿತಿಯ ಗೌರವ ಸಲಹೆಗಾರ ಮಡಿವಾಳಪ್ಪ ಮುರ್ಕೆ, ವ್ಯಸನಗಳ ದುಷ್ಪರಿಣಾಮಗಳ ಕುರಿತು ಎಚ್ಚರಿಸುತ್ತಾ, ಸಮಾಜವನ್ನು ಸುಸ್ಥಿತಿಗೆ ತರಲು ಎಲ್ಲರೂ ಒಟ್ಟಾಗಿ ಶ್ರಮಿಸಬೇಕಿದೆ ಎಂದು ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮದ್ಯವರ್ಜನ ಶಿಬಿರ ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷ ಸುರೇಶ್ ಸೋಲಾಪುರೆ ಅವರು ಮಾತನಾಡಿ, "ಶಿಬಿರದ ಯಶಸ್ಸಿಗೆ ತಾಲೂಕಿನ ಎಲ್ಲಾ ಸಂಘ–ಸಂಸ್ಥೆಗಳು ಮತ್ತು ಸಾರ್ವಜನಿಕರು ಕೈಜೋಡಿಸಬೇಕು. ವ್ಯಸನಿಗಳನ್ನು ಗುರುತಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವುದೇ ನಮ್ಮ ಮುಖ್ಯ ಕರ್ತವ್ಯ" ಎಂದು ತಿಳಿಸಿದರು.ಸಮಾರಂಭದಲ್ಲಿ ಭೀಮರಾವ, ರಾಮೇಶ್ವರ, ಸುಶೀಲ ಮಹೇಶ, ಹಾಗೂ ನವಜೀವನ ಸಮಿತಿಯ ಸದಸ್ಯರು, ಔರಾದ ಯೋಜನೆ ಅಧಿಕಾರಿ ಶಿವಕುಮಾರ, ಕಮಲನಗರ ವಲಯ ಅಧಿಕಾರಿ ಶರಣಪ್ಪ, ವಿಲಾಸ,ಜನಜಾಗೃತಿ ವೇದಿಕೆಯ ಪದಾಧಿಕಾರಿಗಳು, ಸ್ವಸಹಾಯ ಸಂಘಗಳ ಒಕ್ಕೂಟದ ಸದಸ್ಯರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಉಪಸ್ಥಿತರಿದ್ದರು.



**ವಿಶೇಷ ಮಾಹಿತಿ: ಈ ಉಚಿತ ಮದ್ಯವರ್ಜನ ಶಿಬಿರವು ಜುಲೈ 11ರಿಂದ ಜುಲೈ 18ರವರೆಗೆ ಸತತ ಎಂಟು ದಿನಗಳ ಕಾಲ ಕಮಲನಗರದ ಹೀರಾ ಕಲ್ಯಾಣ ಮಂಟಪದಲ್ಲಿ ನಡೆಯಲಿದ್ದು, ಸಾರ್ವಜನಿಕರು ಹಾಗೂ ಅಗತ್ಯವಿರುವವರು ಇದರ ಸದುಪಯೋಗ ಪಡೆದುಕೊಳ್ಳಲು ಕೋರಲಾಗಿದೆ.**

# ಕಮಲನಗರ ರೈತರಿಗೆ ಶೀಘ್ರ ಬೆಳೆ ವಿಮೆ ಪರಿಹಾರ ಕಲ್ಪಿಸಿ: ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಕಮಲನಗರ ತಾಲೂಕಿನ ರೈತರಿಗೆ ಬೆಳೆ ವಿಮೆ ಪರಿಹಾರ ಧನ ಇನ್ನೂ ಬಿಡುಗಡೆಯಾಗದ ಹಿನ್ನೆಲೆಯಲ್ಲಿ ಶಾಸಕ ಪ್ರಭು ಬಿ. ಚವ್ಹಾಣ ಅವರು ಕೃಷಿ ಇಲಾಖೆಯ ಆಯುಕ್ತರು, ನಿರ್ದೇಶಕರು ಹಾಗೂ ಬೀದರ ಜಿಲ್ಲಾ ಜಂಟಿ ನಿರ್ದೇಶಕರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು.ಬೆಳೆ ವಿಮೆ ಪರಿಹಾರ ಬಿಡುಗಡೆ ವಿಳಂಬವಾಗಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ರಾಜ್ಯದ ಇತರೆ ಭಾಗಗಳ ರೈತರಿಗೆ ಪರಿಹಾರ ಧನ ಬಿಡುಗೆಯಾಗಿದೆ. ಔರಾದ (ಬಿ) ತಾಲ್ಲೂಕಿಗೆ ಬಂದರೂ ಕಮಲನಗರ ತಾಲ್ಲೂಕಿನ ರೈತರನ್ನು ನಿರ್ಲಕ್ಷ್ಯ ಮಾಡುತ್ತಿರುವುದು ಸರಿಯಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಅರ್ಹ ರೈತರ ಬ್ಯಾಂಕ್ ಖಾತೆಗಳಿಗೆ ಯಾವುದೇ ವಿಳಂಬವಿಲ್ಲದೆ ಬೆಳೆ ವಿಮೆ ಪರಿಹಾರ ಧನ ಜಮೆಯಾಗುವಂತೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.ಕಳೆದ ವರ್ಷದ ಅತಿವೃಷ್ಟಿ ಮತ್ತು ಭಾರೀ ಮಳೆಯಿಂದಾಗಿ ಕಮಲನಗರ ತಾಲ್ಲೂಕಿನ ಅನೇಕ ರೈತರ ಬೆಳೆಗಳು ಹಾನಿಗೊಳಗಾಗಿ ಭಾರೀ ನಷ್ಟ ಉಂಟಾಗಿದೆ. ಬೆಳೆ ಹಾನಿಯಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಸಾಲದ ಹೊರೆ, ಕುಟುಂಬ ನಿರ್ವಹಣೆ ಹಾಗೂ ಕೃಷಿ ಚಟುವಟಿಕೆಗಳಿಗೆ ಸಾಕಷ್ಟು ತೊಂದರೆ ಎದುರಿಸುತ್ತಿದ್ದಾರೆ. ಬೆಳೆ ವಿಮೆ ಪರಿಹಾರ ಧನ ಸಿಗದ ಕಾರಣ ಮುಂಗಾರು ಹಂಗಾಮಿನ ಬಿತ್ತನೆ, ಬೀಜ, ರಸಗೊಬ್ಬರ ಹಾಗೂ ಕೃಷಿ ಕಾರ್ಮಿಕರ ವೆಚ್ಚ ಭರಿಸಲು ಸಹ ಅನೇಕ ರೈತರಿಗೆ ಸಂಕಷ್ಟಪಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಪರಿಹಾರ ಧನ ಬಿಡುಗಡೆ ವಿಳಂಬವಾಗುವುದು ರೈತರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸುತ್ತಿದೆ ಎಂದು ಹೇಳಿದ್ದಾರೆ.ಇದಕ್ಕೆ ಪ್ರತಿಕ್ರಿಯಿಸಿದ ಕೃಷಿ ಇಲಾಖೆಯ ಅಧಿಕಾರಿಗಳು, ಎಲ್ಲ ಕಡೆ ಹಂತ ಹಂತವಾಗಿ ಬಿಡುಗಡೆ ಮಾಡಲಾಗುತ್ತಿದೆ. ಕಮಲನಗರ ತಾಲ್ಲೂಕಿನ ಅರ್ಹ ರೈತರ ಖಾತೆಗಳಿಗೆ ಜುಲೈ ಅಂತ್ಯದೊಳಗೆ ಬೆಳೆ ವಿಮೆ ಪರಿಹಾರ ಧನ ಜಮೆಯಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.ನಮ್ಮ ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗಬಾರದು. ಬೆಳೆ ಹಾನಿಗೊಳಗಾದ ಎಲ್ಲ ಅರ್ಹ ರೈತರಿಗೆ ಬೆಳೆ ವಿಮೆ ಪರಿಹಾರ ಧನ ತಲುಪಬೇಕು. ಜುಲೈ ಅಂತ್ಯದೊಳಗೆ ಹಣ ಜಮೆಯಾಗದಿದ್ದರೆ ವಿಷಯವನ್ನು ಮತ್ತೊಮ್ಮೆ ಸರ್ಕಾರ ಮತ್ತು ಇಲಾಖೆಯ ಉನ್ನತ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ತಿಳಿಸಿದ್ದಾರೆ.



# 13ಕ್ಕೆ ಕಲಬುರಗಿಯಲ್ಲಿ ಪ್ರಜ್ಞಾಅಕಾಡೆಮಿ ಉದ್ಘಾಟನೆ



• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಕರ್ನಾಟಕದ ಸ್ಪರ್ಧಾತ್ಮಕ ಪರೀಕ್ಷಾ, ಸ್ಟಡಿ ಸೆಂಟರ್ ಕ್ಷೇತ್ರಕ್ಕೆ ಕಲಬುರಗಿ ಜಿಲ್ಲೆಯಿಂದ ಪ್ರಜ್ಞಾ ಅಕಾಡೆಮಿ ಹೆಜ್ಜೆಯಿಡುತ್ತಿದೆ. ಈ ಪ್ರಜ್ಞಾ ಅಕಾಡೆಮಿಯು ದಿನಾಂಕ: 13-07-2026 ರಂದು ಸೋಮುವಾರ ಬೆಳಗ್ಗೆ 11:00 ಕ್ಕೆ ಕಲಬುರಗಿ ಜಿಲ್ಲೆಯಲ್ಲಿ ನಗರದ ನ್ಯೂ ಜೇವರ್ಗಿ ರಸ್ತೆಯಲ್ಲಿರುವ ಪ್ರಜ್ಞಾಅಕಾಡೆಮಿಯಲ್ಲಿ ಉದ್ಘಾಟನೆಯಾಗಲಿದೆ.ಈ ಕಾರ್ಯಕ್ರಮದ ಉದ್ಘಾಟನೆಯನ್ನು ಬೆಂಗಳೂರಿನ ಅಕ್ಕಾ ಐ.ಎ.ಎಸ್. ಅಕಾಡೆಮಿ ಸಂಸ್ಥಾಪಕರ ನಿರ್ದೇಶಕರಾದಡಾ.ಶಿವಕುಮಾರ್ ನೆರವೇರಿಸಲಿದ್ದಾರೆ. ನಿವೃತ್ತ ಐ.ಪಿ.ಎಸ್. ಅಧಿಕಾರಿ ಶಂಕರ್ ಬಿದರಿ ವೇದಿಕೆಯ ಜ್ಯೋತಿ ಬೆಳಗಿಸಲಿದ್ದಾರೆ. ಗ್ರಂಥಾಲಯ ಉದ್ಘಾಟನೆಯನ್ನು ಶಾಹಾಪೂರನ ಶಾಸಕರು ಹಿರಿಯರಾದ ಶರಣಬಸಪ್ಪ ದರ್ಶನಾಪೂರ ನೆರವೇರಿಸಲಿದ್ದಾರೆ.ಕಲಬುರಗಿ ಜಿಲ್ಲೆಯ ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಂಪ್ರಭು ಪಾಟೀಲ್, ಗ್ರಾಮೀಣ ಮತಕ್ಷೇತ್ರದ ಶಾಸಕರಾದ ಬಸವರಾಜ್ ಮತ್ತಿಮುಡ, ದಕ್ಷಿಣ ಮತಕ್ಷೇತ್ರದ ಮಾಜಿ ಶಾಸಕರಾದ ದತ್ತಾತ್ರೇಯ ಪಾಟೀಲ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆಕಲುಬುರಗಿ ಜಿಲ್ಲೆಯ ಜಿಲ್ಲಾಧಿಕಾರಿ ಇಕ್ರಮ್ ಶರೀಫ್,-ಐ.ಎ.ಎಸ್. ಜಿಲ್ಲಾ ಪಂಚಾಯತ್ ಸಿ.ಇ.ಓ.ರಾಹುಲ್ ಶರಣಪ್ಪ ಸಂಕನೂರ್-ಐ.ಎ.ಎಸ್. ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿ ನಲಿನ್ ಅತುಲ್-ಐ.ಎ.ಎಸ್. ಪೋಲಿಸ್ ಅಧೀಕ್ಷಕರಾದ ಅಡ್ಡೂರು ಶ್ರೀನಿವಾಸಲು-ಐ.ಪಿ.ಎಸ್. ಕಲಬುರಗಿ ನಗರ ಪೊಲೀಸ್ ಕಮಿಷನರ್ ಶರಣಪ್ಪ ಎಸ್.ಡಿ.-ಐ.ಪಿ.ಎಸ್. ಅಧಿಕಾರಿಗಳು ಅಥಿತಿಗಳಾಗಿ ಭಾಗವಹಿಸಲಿದ್ದಾರೆ. ಉದಯಕಾಲ ಸ್ಥಾನಿಕ ಸಂಪಾದಕರಾದ ಚಂದ್ರಶೇಖರ ಕೌಲಗಾ, ಸಂಯುಕ್ತ ಕರ್ನಾಟಕ ಸ್ಥಾನಿಕ ಸಂಪಾದಕರಾದ ಪ್ರಭಾಕರ್ ಜೋಶಿ, ವಿಜಯ ಕರ್ನಾಟಕ ಸ್ಥಾನಿಕ ಸಂಪಾದಕರಾದ ದೇವಯ್ಯ ಗುತ್ತೇದಾರ್, ನಾಡಿನ ಹಿರಿಯರಾದ ಬಸವರಾಜ್ ಡೋಣೂರು, ನಾಗರಾಜ್ ಹೆಬ್ಬಾಳ, ಶಿವಾನಂದ ಖಜೂರಿ, ಕೃಷ್ಣಾಜಿ ಕುಲಕರ್ಣಿ, ರಮೇಶ ಜೆತ್ತಿ ಕಾರ್ಯಕ್ರಮದಲ್ಲಿ ಗೌರವ ಅಥಿತಿಗಳಾಗಿ ಭಾಗವಹಿಸಲಿದ್ದಾರೆ.ಕಾರ್ಯಕ್ರಮವು ಬೆಳಗ್ಗೆ 11:00 ಕ್ಕೆ ನಗರದ ನ್ಯೂ ಜೇವರ್ಗಿ ರಸ್ತೆಯಲ್ಲಿರುವ ಪ್ರಜ್ಞಾಅಕಾಡೆಮಿಯಲ್ಲಿ ನಡೆಯಲಿದೆ. ಕಲಬುರಗಿ ಜಿಲ್ಲೆಯ ಸ್ಪಾರ್ಧಾರ್ಥಿಗಳು ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವೀಗೊಳಿಸಲು ಪ್ರಜ್ಞಾಅಕಾಡೆಮಿಯ ಸಂಸ್ಥಾಪಕ ನಿರ್ದೇಶಕರಾದ ಕೆ.ಎಂ.ವಿಶ್ವನಾಥ ಮರತೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮತದಾರರ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ: ರಾಹುಲ್ ಪಾಂಡ್ವೆ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**



ಜಿಲ್ಲೆಯಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಯಶಸ್ವಿಯಾಗಿ ಸಾಗುತ್ತಿದ್ದು, ಮತದಾರರಿಗೆ ಎಣಿಕೆ ನಮೂನೆ (Enu-meration Form-EF) ವಿತರಿಸುವ ಕಾರ್ಯವನ್ನು ಶೇ.100ರಷ್ಟು ಪೂರ್ಣಗೊಳಿಸಲಾಗಿದೆ. ಮನೆ-ಮನೆಗೆ ಭೇಟಿ ನೀಡುತ್ತಿರುವ ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಸಾರ್ವಜನಿಕರು ಅಗತ್ಯ ದಾಖಲೆಗಳು ಹಾಗೂ ಮಾಹಿತಿಯನ್ನು ನೀಡಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ರಾಹುಲ್ ತುಕಾರಾಮ ಪಾಂಡ್ವೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಜೂನ್ 16, 2026ರ ಅಂತ್ಯದ ವೇಳೆಗೆ ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 10,53,236 ಮತದಾರರು ನೋಂದಣಿಯಾಗಿದ್ದು, ಜೂನ್ 30ರಿಂದ ಬಿಎಲ್‌ಒಗಳ ಮೂಲಕ ಮನೆ-ಮನೆಗೆ ತೆರಳಿ ಎಣಿಕೆ ನಮೂನೆಗಳನ್ನು ವಿತರಿಸುವ ಕಾರ್ಯ ಕೈಗೊಳ್ಳಲಾಗಿದೆ. ಈ ಅಭಿಯಾನ ಜುಲೈ 29ರವರೆಗೆ ಮುಂದುವರಿಯಲಿದ್ದು, ಮತದಾರರ ಪಟ್ಟಿಯನ್ನು ನಿಖರ ಹಾಗೂ ದೋಷರಹಿತಗೊಳಿಸುವ ಉದ್ದೇಶದಿಂದ ಪರಿಷ್ಕರಣೆ ನಡೆಯುತ್ತಿದೆ.

ಜಿಲ್ಲೆಯಲ್ಲಿ ಮುದ್ರಿಸಲಾದ 10,53,236 ಎಣಿಕೆ ನಮೂನೆಗಳನ್ನೂ (ಶೇ.100) ಮತದಾರರಿಗೆ ಯಶಸ್ವಿಯಾಗಿ ವಿತರಿಸಲಾಗಿದೆ. ಇದುವರೆಗೆ 1,86,796 (ಶೇ.17.74) ಎಣಿಕೆ ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದ್ದು, 1,645 (ಶೇ.0.16) ನಮೂನೆಗಳು ಆನ್‌ಲೈನ್ ಮೂಲಕ ಸ್ವೀಕರಿಸಲಾಗಿದೆ.

ಪರಿಶೀಲನಾ ಪ್ರಕ್ರಿಯೆಯಲ್ಲಿ ಒಟ್ಟು 2,598 ಮತದಾರರನ್ನು ವಿವಿಧ ಕಾರಣಗಳಿಂದ ಗುರುತಿಸಲಾಗಿದೆ. ಇವರಲ್ಲಿ 1,213 ಮಂದಿ ಮೃತಪಟ್ಟವರು, 875 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರು, 440 ಮಂದಿ ಈಗಾಗಲೇ ಬೇರೆಡೆ ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಂಡವರು, 53 ಮಂದಿ ಗೈರುಹಾಜರಾಗಿರುವವರು ಹಾಗೂ 17 ಪ್ರಕರಣಗಳು ಇತರೆ ಕಾರಣಗಳಿಗೆ ಸಂಬಂಧಿಸಿದವು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ತಾಲ್ಲೂಕುವಾರು ಪ್ರಗತಿಯನ್ನು ಗಮನಿಸಿದರೆ, ಶೋರಾಪುರ ತಾಲ್ಲೂಕಿನಲ್ಲಿ ಶೇ.100ರಷ್ಟು ಎಣಿಕೆ ನಮೂನೆಗಳ ವಿತರಣೆ ಪೂರ್ಣಗೊಂಡಿದ್ದು, ಶೇ.14.78ರಷ್ಟು ಡಿಜಿಟಲೀಕರಣ ಕಾರ್ಯ ನಡೆದಿದೆ. ಶಹಾಪುರ ತಾಲ್ಲೂಕಿನಲ್ಲಿ ಶೇ.100ರಷ್ಟು ವಿತರಣೆ ಪೂರ್ಣಗೊಂಡಿದ್ದು, ಶೇ.24.17ರಷ್ಟು ಡಿಜಿಟಲೀಕರಣದೊಂದಿಗೆ ಜಿಲ್ಲೆಯಲ್ಲಿ ಅತಿ ಹೆಚ್ಚು ಪ್ರಗತಿ ದಾಖಲಾಗಿದೆ. ಯಾದಗಿರಿ ತಾಲ್ಲೂಕಿನಲ್ಲಿ ಶೇ.100ರಷ್ಟು ವಿತರಣೆ ಪೂರ್ಣಗೊಂಡು ಶೇ.12.14ರಷ್ಟು ಡಿಜಿಟಲೀಕರಣವಾಗಿದೆ. ಗುರುಮಿಠಕಲ್ ತಾಲ್ಲೂಕಿನಲ್ಲಿ ಶೇ.100ರಷ್ಟು ವಿತರಣೆ ಪೂರ್ಣಗೊಂಡಿದ್ದು, ಶೇ.20.76ರಷ್ಟು ಡಿಜಿಟಲೀಕರಣವಾಗಿದೆ. ವಡಗೇರಾ ತಾಲ್ಲೂಕಿನಲ್ಲಿ ಶೇ.100ರಷ್ಟು ವಿತರಣೆ ಪೂರ್ಣಗೊಂಡು ಶೇ.13.53ರಷ್ಟು ಡಿಜಿಟಲೀಕರಣವಾಗಿದೆ. ಹುಣಸಗಿ ತಾಲ್ಲೂಕಿನಲ್ಲಿ ಶೇ.100ರಷ್ಟು ಎಣಿಕೆ ನಮೂನೆಗಳ ವಿತರಣೆ ಪೂರ್ಣಗೊಂಡಿದ್ದು, ಶೇ.20.93ರಷ್ಟು ಡಿಜಿಟಲೀಕರಣ ಕಾರ್ಯ ನಡೆದಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಗೊಳಿಸಲು ಸಾರ್ವಜನಿಕರು ಬಿಎಲ್‌ಒಗಳಿಗೆ ಅಗತ್ಯ ದಾಖಲೆಗಳನ್ನು ಒದಗಿಸಿ ಸಹಕರಿಸುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಮನವಿ ಮಾಡಿದ್ದಾರೆ.

# ನರಸಿಂಗ ರಡ್ಡಿ , ಅನಿಲ ಕಾಂಬಳೆಗೆ ಸನ್ಮಾನ



• **ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ**

ಇಲ್ಲಿನ ನಿಲಾಂಬಿಕಾ ಸರಕಾರಿ ಪ .ಪೂ. ಕಾಲೇಜಿನ ಹಿಂಧಿ ಉಪನ್ಯಾಸಕರಾದ ನರಸಿಂಗರೆಡ್ಡಿ ಗದಲೇಗಾಂವ ಸರ್ಕಾರಿ ನೌಕರರ ಸಂಘದ ಗೌರವ ಅಧ್ಯಕ್ಷರಾಗಿದಕ್ಕೆ ಸಂಘದ ಸಂಸ್ಕಾರ್ತಿಕ ಕಾರ್ಯದರ್ಶಿ ಅನೀಲ ಕಾಂಬಳೆ ಅವರನ್ನು ಹಿಂಧಿ ಪ್ರೌಢ ಶಾಲಾ ಶಿಕ್ಷಕರ ಸಂಘದಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನರಸಿಂಗ ರಡ್ಡಿ ಗದಲೇಗಾಂವ ಸನ್ಮಾನ ಸ್ವೀಕರಿಸಿ ಮಾತನಾಡಿ ಹಿಂಧಿ ಶಿಕ್ಷಕರ ಸಂಘದಿಂದ ಮಾಡಿದ ಸನ್ಮಾನ ತವರು ಮನೆಯಿಂದ ಆದ ಸನ್ಮಾನವೆಂದು ಬಹಳ ಸಂತೋಷಪಟ್ಟಿದ್ದೆನೆ ಎಂದು ತಿಳಿಸಿದರು. ಹಿಂದಿ ವಿಷಯದ ಮಹತ್ವ ಕುರಿತು ಮಾರ್ಮಿಕವಾಗಿ ಮಾತನಾಡಿ ಹಿಂಧಿ ವಿಷಯಕ್ಕೆ ಅನ್ಯಾಯ ಆಗಲರದಂತೆ ಸರ್ಕಾರ ಗಮನ ಹರಿಸಿ ದ್ವೀಭಾಷ ನೀತಿ ಜಾರಿಗೆ ತಂದ್ದರೆ ಅದರಲ್ಲಿ ಹಿಂಧಿ ಅಥವಾ ಇಂಗ್ಲಿಷ್ ಅಯ್ಕೆಮಾಡುವ ಅವಕಾಶ ನೀಡಬೇಕು ಎಂದರು. ಸಂಘದ ಅಧ್ಯಕ್ಷರಾದ ನಾಗಪ್ಪಾ ನಿಣ್ಣೆ. ಮಾಜಿ ಅಧ್ಯಕ್ಷರಾದ ಜಗದೀಶ ಶುಕ್ಲಾ. ಸಂಘದ ಕಾರ್ಯದರ್ಶಿ.ರಾಮ ಮೂಳೆ. ಖಜಾಂಚಿ ಪರಶು ರಾಮ ಕುಂಬಾರೆ. ಹಿರಿಯರಾದ ಚಂದ್ರಕಾಂತ ಕಿವಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಭೂತಾಪಮಾನ ಕಡಿಮೆ ಮಾಡಲು ಮರ-ಗಿಡ ಬೆಳೆಸಿ :ಶೈಲೇಂದ್ರ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಭೂತಾಪಮಾನ ವರ್ಷ ವರ್ಷ ಹೆಚ್ಚಳವಾಗಿ ಹಲವಾರು ಪ್ರಕೃತಿ ವಿಕೋಪಗಳು ಸಂಭವಿಸಲಾರಂಭಿಸಿವೆಎಂದು ಬೀದರ ಪರಿಸರವಾನಿ ಅಧ್ಯಕ್ಷ ಖ್ಯಾತ ಪರಿಸರವಾದಿ ಶೈಲೇಂದ್ರ ಕಾವಡಿ ತಾಲೂಕಿನ ಕರ್ನಾಟಕ ಪಬ್ಲಿಕ್ ಸ್ಕೂಲ್ ಅವರಾದ್ (ಬಿ) ಸರ್ಕಾರಿಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದಪರಿಸರಸಂರಕ್ಷಣೆಜನಜಾಗೃತಿ ಹಾಗೂ ವನಮೋತ್ಸವ ಸಮಾರೋಪ ಕಾರ್ಯಕ್ರಮದಲ್ಲಿಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ ಮಾತನಾಡುತ್ತಾ ಕಳವಳ ವ್ಯಕ್ತಪಡಿಸಿದರು. ಭೂತಾಪಮಾನ ಹೆಚ್ಚಳದಿಂದಾಗಿ ಜೀವ ವೈವಿಧ್ಯತೆಗಳ ಮೇಲೆ ಭಾರಿ ಪರಿಣಾಮ ಬೀರುತ್ತಿದೆ. ಹಲವಾರು ಪ್ರಾಣಿ ಪಕ್ಷಿಗಳು ಕೂಡ ಭೂತಾಪನ ಹೆಚ್ಚಳದಿಂದ ಕಣ್ಮರೆಯಾಗಲಿವೆ ಎಂದರು. ಉದಾಹರಣೆಗೆ ಪರಗಸ್ಪರ್ಶೆಯಲ್ಲಿ ಸಹಾಯ ಮಾಡುವ ಒಂದು ಚಿಕ್ಕಚಿಟ್ಟೆ ಕಣ್ಮರೆಯಾದರೆ ಮುಂದಿನ್ ದಿನಗಳಲ್ಲಿ ಜೇನುತುಪ್ಪ ಸಿಗಲಾರದು. ಹಾಗೂ ಕಾಫಿ ತೋಟದ ಮೇಲೆ ಭಾರಿ ಪರಿಣಾಮ ಬೀರಲಿದೆ ಎಂದು ಎಚ್ಚರಿಕೆ ನೀಡಿದರು ಅತ್ಯಧಿಕ ಪ್ರಮಾಣದಲ್ಲಿ ಮರ-ಗಿಡ ಬೆಳೆಸಿ ಭೂತಾಪಮಾನ ಕಡಿಮೆಮಾಡಲು ಭೂತಪಮಾನ ಕಡಿಮೆ ಮಾಡಲು ಪ್ರತಿಯೊಬ್ಬರು ಕಡ್ಡಾಯವಾಗಿ .ಈ ವರ್ಷ ಏಪ್ರಿಲ್ ಮೇ ತಿಂಗಳಲ್ಲಿ ತಾಲೂಕಿನ ಅವರಾದ್ (ಬಿ) ಗ್ರಾಮದಲ್ಲಿ 44. ರಿಂದ 45 ಡಿಗ್ರಿ ಸೆಲ್ಸಿಯಸ್ ತಾಪಮಾನ ವರದಿಯಾಗಿತ್ತು ಅದೇ ತರ ಚಿಂಚೋಳಿ ತಾಲೂಕಿನ ಐನಾಪುರದಲ್ಲಿ 45.5 ಡಿಗ್ರಿ ಸೆಲ್ಸಿಯಸ್ ವರದಿಯಾಗಿತ್ತು ಎಂದು ಶೈಲೇಂದ್ರ ಕವಡಿ ಸ್ಮರಿಸಿದರು. ಚಿಂಚೋಳಿ ತಾಲೂಕ ಹಾಗೂ ಕಲಬುರ್ಗಿ ಆಯುಧ ಗ್ರಾಮಗಳಲ್ಲಿ ಅತ್ಯಧಿಕ ತಾಪಮಾನ ಹೆಚ್ಚಳವಾದಗ್ರಾಮಗಳಲ್ಲಿಭೂತಾಪಮಾನ ಇಳಿಸಲು ಅತ್ಯಧಿಕ ಪ್ರಮಾಣದಲ್ಲಿ ಮರ ಮರಗಿಡಬೆಳೆಸಿ ಪರಿಸರ ಸಂರಕ್ಷಣೆಗೆ ವಿಶೇಷ ಕಾರ್ಯವಹಿಸಬೇಕೆಂದು ಆಗ್ರಹಿಸಿದರು.ಶಾಲೆಯ ಎಲ್ಲಾ ವಿದಾರ್ಥಿಗಳಿಗೆ "ಕಾಡು ಬೆಳೆಸಿ ನಾಡು ಉಳಿಸಿ " ಏಕ್ ಪೇಡ ಮಾಕೆ ನಾಮ್ ಅಡಿಯಲ್ಲಿ ಸಸಿ ನೆಟ್ಟು ಪೋಷಿಸಿ ಎಂದು ಕರೆ ನೀಡಿದರು.ಪ್ರೌಢ ಶಾಲೆಯ ಮುಗು ಮಾತನಾಡಿ "ಶಿಸ್ತು ಜೀವನದ ತಳಹದಿ " ಎಲ್ಲ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತನೂ ಅಳವಡಿಸಿಕೊಳ್ಳಬೇಕು ಹಾಗೂ ಪರಿಸರದಲ್ಲಿ ಆಗುವ ಎಲ್ಲ ಬದಲಾವಣೆಗೆ ಮಾನವನ ಹಸ್ತ ಕ್ಷೇಪವೇ ಕಾರಣ ಎಂದು ತಿಳಿಸಿ ಎಲ್ಲ ವಿದ್ಯಾರ್ಥಿಗಳು ಒಂದೊಂದು ಸಸಿಯನ್ನು ತಮ್ಮ ವ್ಯಾಪ್ತಿಯಲ್ಲಿ ನೆಟ್ಟು ಅವರಾದ್ (ಬಿ) ಗ್ರಾಮ ಹಸಿರುಮಯವಾಗಲಿ ಎಂದರು ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಶ್ರೀ ಶಿವಶಂಕರ್, ಪ್ರಭಾರಿ ಪ್ರಾಂಶುಲರಾದ ಶ್ರೀ ಸಂತೋಷ ಚಿಕ್ಕಬಸ್ತಿ, ಶಾಲೆಯ ಶಿಕ್ಷಕ ಸಿಬ್ಬಂದಿಗಳಾದ ಜಿಲ್ಲಾ ಮಾಧ್ಯಮಿಕ ಶಿಕ್ಷಕರ ಸಂಘದ ಅಧಕ್ಷರಾದ ಶ್ರೀ ಸಂಜೀವಕುಮಾರ್ ಪಾಟೀಲ್ , ಜಿಲ್ಲಾ ಮಹಿಳಾ ಶಿಕ್ಷಕರ ಉಪಾಧ್ಯಕ್ಷರಾದ ಶ್ರೀಮತಿ ರಾಜೇಶ್ವರಿ ತಪಲಿ ಹಾಗೂ ಹಿರಿಯ ಶಿಕ್ಷಕರಾದ ದತ್ತಾತ್ರೇಯ ಕುಲಕರ್ಣಿ ಹಾಗೂ ಶ್ರೀಮತಿ ವಿಜಯಲಕ್ಷ್ಮಿ,ಶ್ರೀಮತಿ ಮಧುಮತಿ, ಶ್ರೀ ಬಾಲಗಂಗಾಧರ, ಶ್ರೀ ಬಂದೇನವಾಜ್ ,ಅಕ್ಕಮಹಾದೇವಿ ಹಾಜರಿದ್ದರು ಕು.ಭಾಗ್ಯಶ್ರೀ ಪ್ರಾರ್ಥನಾ ಗೀತೆಯನ್ನು ಹಾಡಿದರು ಹಾಗೂ ಶಿಕ್ಷಕರಾದ ಶ್ರೀ ಪ್ರದೀಪಕುಮಾರ ಸ್ವಾಗತಿಸಿದರು , ಶ್ರೀ ರಾಜೇಶ ನಾಗೂರೆ ನಿರೂಪಿಸಿ ವಂದಿಸಿದರು

# ವಿಶೇಷಚೇತನರ ಸ್ವಾವಲಂಬನೆಗೆ ಕೃಷಿ ಉದ್ಯಮಿ ತರಬೇತಿ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಏನೇಬಲ್ ಇಂಡಿಯಾ ಹಾಗೂ ಯಂಗ್ ಇಂಡಿಯಾ ಸಂಸ್ಥೆಗಳ ಸಹಯೋಗದಲ್ಲಿ ಎಸ್‌ಬಿಐ ಆರ್‌ಸೆಟಿ, ಕೊಪ್ಪಳ ವತಿಯಿಂದ ಬಹಾದ್ದೂರ್ ಬಂಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 35 ವಿಶೇಷಚೇತನರಿಗೆ 13 ದಿನಗಳ ಕೃಷಿ ಉದ್ಯಮಿ ತರಬೇತಿ ಶಿಬಿರಕ್ಕೆ ಶನಿವಾರ ಚಾಲನೆ ನೀಡಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಎಸ್‌ಬಿಐ ಆರ್‌ಸೆಟಿ, ಕೊಪ್ಪಳದ ನಿರ್ದೇಶಕರಾದ ರಾಯೇಶ್ವರ ಪೈ ಅವರು, ಸಂಸ್ಥೆಯು ನಿರುದ್ಯೋಗಿ ಯುವಕರು ಹಾಗೂ ವಿಶೇಷಚೇತನರನ್ನು ಸ್ವ-ಯಂ ಉದ್ಯೋಗದ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸುವ ಉದ್ದೇಶದಿಂದ ವಿವಿಧ ಕೌಶಲ್ಯಾಭಿವೃದ್ಧಿ ತರಬೇತಿಗಳನ್ನು ನಡೆಸುತ್ತಿದೆ ಎಂದು ತಿಳಿಸಿದರು. ಕೃಷಿ ಆಧಾರಿತ ಉದ್ಯಮಗಳಲ್ಲಿ ಸಾಕಷ್ಟು ಅವಕಾಶಗಳಿದ್ದು, ತರಬೇತಿಯ ಸದುಪಯೋಗ ಪಡೆದು ಯಶಸ್ವಿ ಉದ್ಯಮಿಗಳಾಗುವಂತೆ ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಯಂಗ್ ಇಂಡಿಯಾ ಸಂಸ್ಥೆಯ ಕಾರ್ಯದರ್ಶಿ ರಾಚಪ್ಪ (ಬೆಂಗಳೂರು) ಅವರು, ವಿಶೇಷಚೇತನರಿಗಾಗಿ ಸರ್ಕಾರ ಜಾರಿಗೊಳಿಸಿರುವ ವಿವಿಧ ಕಲ್ಯಾಣ ಯೋಜನೆಗಳ ಕುರಿತು ಮಾಹಿತಿ ನೀಡಿದರು. "ಅಂಗವೈಕಲ್ಯ ಶಾಪವಲ್ಲ, ಅದು ವರದಾನ. ಆತ್ಮವಿಶ್ವಾಸ, ಕೌಶಲ್ಯ ಮತ್ತು ದೃಢಸಂಕಲ್ಪ ಇದ್ದರೆ ವಿಶೇಷಚೇತನರು ಸಮಾಜದಲ್ಲಿ ಮಾದರಿಯಾಗಿ ಬೆಳೆಯಬಹುದು" ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿ ಕಳಕಪ್ಪ ವಿವೇಕಿ ಅವರು ಹೈನುಗಾರಿಕೆ ಹಾಗೂ ಕುರಿ ಸಾಕಾಣಿಕೆ ಉದ್ಯಮದ ಕುರಿತು ಪ್ರಾಯೋಗಿಕ ಮಾಹಿತಿ ನೀಡಿ, ಕಡಿಮೆ ಬಂಡವಾಳದಲ್ಲಿ ಕೃಷಿ ಪೂರಕ ಚಟುವಟಿಕೆಗಳ ಮೂಲಕ ಉತ್ತಮ ಆದಾಯ ಗಳಿಸುವ ವಿಧಾನಗಳನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಎಸ್‌ಬಿಐ ಆರ್‌ಸೆಟಿ ಸಿಬ್ಬಂದಿಗಳಾದ ಪ್ರಸಾದ್ ಪಾಟೀಲ್, ದೀಪಾ, ಬಹಾದ್ದೂರ್ ಬಂಡಿ ಗ್ರಾಮ ಪಂಚಾಯಿತಿ ಸಿಬ್ಬಂದಿ ಖಜಾಸಾಬ್, ಅಡುಗೆ ಸಿಬ್ಬಂದಿ ಹಾಗೂ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.ತರಬೇತಿ ಶಿಬಿರವು 13 ದಿನಗಳ ಕಾಲ ನಡೆಯಲಿದ್ದು, ಕೃಷಿ, ಹೈನುಗಾರಿಕೆ, ಕುರಿ ಸಾಕಾಣಿಕೆ, ಸ್ವಯಂ ಉದ್ಯೋಗ, ಉದ್ಯಮ ನಿರ್ವಹಣೆ ಹಾಗೂ ಸರ್ಕಾರಿ ಯೋಜನೆಗಳ ಕುರಿತು ಸಮಗ್ರ ತರಬೇತಿ ನೀಡಲಾಗುತ್ತದೆ ಎಂದು ಸಂಸ್ಥೆ ತಿಳಿಸಿದೆ.ಕಾರ್ಯಕ್ರಮದ ನಿರೂಪಣೆಯನ್ನು ಉಪನ್ಯಾಸಕಿ ಗೀತಾ ಅವರು ನಿರ್ವಹಿಸಿದರು.

# ಭಾರತದಲ್ಲಿ ಜನಸಂಖ್ಯೆಯ ಸಮರ್ಥ ನಿರ್ವಹಣೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಭಾರತದ ಜನಸಂಖ್ಯೆಯು ಸದ್ಯ ಸುಮಾರು 147 ಕೋಟಿಯಾಗಿದ್ದು, ವಿಶ್ವದಲ್ಲಿ ಪ್ರಥಮ ಸ್ಥಾನದಲ್ಲಿದೆ. ಆದರೂ ಕೂಡಾ ನಮ್ಮ ದೇಶವು ಜನಸಂಖ್ಯೆಯ ಸಮರ್ಥ ನಿರ್ವಹಣೆ ಮಾಡುತ್ತಿದೆ ಎಂದು ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು.

ನರೋಣಾ ಗ್ರಾಮದಲ್ಲಿನ 'ಜಗಜ್ಯೋತಿ ಟ್ಯುಟೋರಿಯಲ್ಸ್'ನಲ್ಲಿ ಕಲಬುರಗಿಯ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶನಿವಾರ ಸಾಯಂಕಾಲ ಜರುಗಿದ "ವಿಶ್ವಜನಸಂಖ್ಯೆ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಪ್ರತಿ ವರ್ಷ ಜುಲೈ-11ರಂದು 'ವಿಶ್ವ ಜನಸಂಖ್ಯಾ ದಿನ'ವನ್ನು ಆಚರಿಸಲಾಗುತ್ತದೆ. ಜಾಗತಿಕ ಜನಸಂಖ್ಯೆಯ ಸಮಸ್ಯೆಗಳು, ಲಿಂಗ ಸಮಾನತೆ, ಕುಟುಂಬ ಯೋಜನೆ ಮತ್ತು ಮಾನವ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಪ್ರಸ್ತುತವಾಗಿ ವಿಶ್ವದ ಜನಸಂಖ್ಯೆಯು ಸರಿ ಸುಮಾರು 8.2 ಶತಕೋಟಿಯನ್ನು ತಲುಪಿದೆ ಎಂದು ಅಂದಾಜಿಸಲಾಗಿದೆ. "ಯುವಕರ ಭರವಸೆಗಳು ಮತ್ತು ಆಕಾಂಕ್ಷೆಗಳನ್ನು ನನಸಾಗಿಸುವುದು - ಇಂದು ಮತ್ತು ಭವಿಷ್ಯಕ್ಕಾಗಿ" ಇದು ಈ ವರ್ಷದ ಜನಸಂಖ್ಯೆ ದಿನಾಚರಣೆಯ ಘೋಷವಾಕ್ಯವಾಗಿದೆ. ಆದರ್ಶ ಜನಸಂಖ್ಯೆ ನಿರ್ವಹಿಸುವುದು ಅಗತ್ಯವಾಗಿದೆ.ಜನಸಂಖ್ಯೆಯು ಯಾವುದೇ ರಾಷ್ಟ್ರದ ಅಭಿವೃದ್ಧಿ, ಆರ್ಥಿಕ ಪ್ರಗತಿ ಮತ್ತು ಸಂಪನ್ಮೂಲ ನಿರ್ವಹಣೆಯ ಪ್ರಮುಖ ಮಾನದಂಡವಾಗಿದೆ. ಮಾನವ ಸಂಪನ್ಮೂಲದ ಸರಿಯಾದ ಬಳಕೆ, ಚಿಕ್ಕ ಕುಟುಂಬಗಳ ಮಹತ್ವ, ಲಿಂಗ ಸಮಾನತೆ ಮತ್ತು ಸುಸ್ಥಿರ ಅಭಿವೃದ್ಧಿಯ ಗುರಿಗಳನ್ನು ಸಾಧಿಸಲು ಜನಸಂಖ್ಯೆಯ ಸರಿಯಾದ ತಿಳುವಳಿಕೆ ಅತ್ಯಗತ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಟ್ಯುಟೋರಿಯಲ್ಸ್ ಮುಖ್ಯಸ್ಥ ಜಗದೀಶ್ ಭಾಸಗಿ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್. ಬಿರಾದಾರ ಹಾಗೂ ವಿದ್ಯಾರ್ಥಿಗಳು ಇದ್ದರು.

# ಸಾಲ ಬಾಧೆ ರೈತನ ಆತ್ಮಹತ್ಯೆ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**



ರೈತ ಜಮೀನು ಕಡೆ ಹೋಗಿ ಬರುತ್ತೇನೆ ಎಂದು ಹೇಳಿ ಇವರದೇ ಕೋಳಿ ಸಾಕಾಣಿಕೆ ಫಾರ್ಮ್ ರೂಮ್ ಒಂದರಲ್ಲಿ ಸಾಲಬಾಧೆಯಿಂದ ನೇಣು ಬೀಗಿದುಕೊಂಡು ಮೋಹನ್ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಳಕಿಗೆ ಬಂದಿದೆ ಮಾಡಿಕೊಂಡಿರುತ್ತಾರೆ.ತಾಲ್ಲೂಕು ಕಸಬಾ ಹೋಬಳಿ, ರಾಯನಹಳ್ಳಿ ಗ್ರಾಮದಲ್ಲಿ ವಾಸವಾಗಿರುವ ಮೋಹನ್ ರವರಿಗೆ 51 ವರ್ಷ ವಯಸ್ಸಾಗಿದ್ದು ಇವರಿಗೆ ಪತ್ನಿ ಹಾಗೂ ಒಂದು ಗಂಡು ಒಂದು ಹೆಣ್ಣು ಇಬ್ಬರು ಮಕ್ಕಳು ಹಾಗೂ ಅಪಾರ ಬಂದು ವರ್ಗದವರನ್ನು ಅಗಲಿದ್ದಾರೆ.

ಮೋಹನ್ ರವರು ಬೆಳೆ ಸಾಲವೆಂದು ಯೂನಿಯನ್ ಬ್ಯಾಂಕ್ ನಿಂದ 10 ಲಕ್ಷ, ಕೈ ಸಾಲ ಹತ್ತು ಲಕ್ಷ ಹಾಗೂ ಮುತ್ತೂಟ್ ಫೈನಾನ್ಸ್ ನಲ್ಲಿ ಒಡವೆಗಳನ್ನು ಇಟ್ಟು ಸಾಲ ಪಡೆದಿದ್ದರು. ಬರಗಾಲದಿಂದಾಗಿ ಇವರಿಗೆ ನಷ್ಟ ಉಂಟಾಗಿದ್ದು, ನೊಂದಾಯಿತ ತಂಬಾಕು ಬೆಳೆಗಾರರಾಗಿದ್ದ ಇವರು ಈ ಬಾರಿಯ ತಂಬಾಕು ಬೆಲೆಕುಸಿತದಿಂದಾಗಿ ತೀವ್ರ ಆರ್ಥಿಕ ಸಂಕಷ್ಟಕ್ಕೆ ಈಡಾಗಿದ್ದರು.ರಾಯನಹಳ್ಳಿ ಗ್ರಾಮದ ಸರ್ವೆ ನಂಬರ್ 24 / 1ರಲ್ಲಿ 2 ಎಕರೆ 02 ಗುಂಟೆ, 44/9ರಲ್ಲಿ 1-00 ಎಕರೆ, 350 / 1ರಲ್ಲಿ 0-19 ಗುಂಟೆ, 350 ರಲ್ಲಿ 0-18 ಗುಂಟೆ ಜಮೀನುಗಳಿದ್ದು ಆರ್ಥಿಕ ಸಂಕಷ್ಟದಿಂದಾಗಿ ಸಾಲ ತೀರಿಸಲಾಗದೆ ತೀವ್ರವಾಗಿ ನೊಂದಿದ್ದರು.ಬಿಳಿಕೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಮರಣೋತ್ತರ ಪರೀ-ಕ್ಷೆಯ ನಂತರ ರಾಯನ ಹಳ್ಳಿ ಗ್ರಾಮದ ಅವರ ಜಮೀನಿನಲ್ಲಿ ಅಂತ್ಯಕ್ರಿಯೆ ನಡೆಯಲಿದೆ.

ರೈತಾ ಪಿಮೋಹನ್ ರವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಸತ್ಯ ಫೌಂಡೇಶನ್ ಅಧ್ಯಕ್ಷರು ಸತ್ಯಪ್ಪ ರವರು ಸಂತಪ್ಪ ಸೂಚಿಸಿದ್ದಾರೆ

## ರಾಜ್ಯದ ನಗರಾಭಿವೃದ್ಧಿ ಸಚಿವರ ಪ್ರವಾಸ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜು.11-ರಾಜ್ಯದ ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಜುಲೈ 12 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿಗೆ ಆಗಮಿಸಿ ಕಲಬುರಗಿ ನಗರದ ರಾಮಮಂದಿರ ವೃತ್ತದದಲ್ಲಿರುವ ಕಲಬುರಗಿ ವಿಕಾಸ ಕನ್‌ಸ್ಟ್ರಕ್ಷನ್ ಆಂಡ್ ಲೇಔಟ್ ಡೆವಲಪರ್ ಕಚೇರಿಯನ್ನು ಉದ್ಘಾಟಿಸುವರು. ನಂತರ ಸಚಿವರು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ.ಪಂಡಿತ ರಂಗಮಂದಿರದಲ್ಲಿ ಕಲಬುರಗಿ ಕರ್ನಾಟಕ ಪ್ರದೇಶ ಕುರುಬಗೊಂಡ ಸಂಘ ಹಾಗೂ ಜಿಲ್ಲಾ ಕುರುಬಗೊಂಡ ನೌಕರರ ಸಂಘದ ಇವುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ ನೂತನ ಸಚಿವರುಗಳಿಗೆ ಸನ್ಮಾನ ಕಾರ್ಯಕ್ರಮ ಹಾಗೂ 2025-26ನೇ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಯಲ್ಲಿ ಅಧಿಕ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಅಂದು ಮಧ್ಯಾಹ್ನ 2 ಗಂಟೆಗೆ ಕಲಬುರಗಿ ಬಿದ್ದಾಪುರ ಕಾಲೋನಿಯ ಹನುಮಾನ ದೇವಸ್ಥಾನ ಹತ್ತಿರದ ಅಮೃತ ಸ್ಪರ್ಷ ಆಸ್ಪತ್ರೆಗೆ ಭೇಟಿ ನೀಡುವರು. ಸ್ಥಳೀಯ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಗೆ ಕಲಬುರಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡಿ ಸಂಸದರು, ಶಾಸಕರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಸಭೆ ನಡೆಸುವರು. ಸಂಜೆ 4 ಗಂಟೆಗೆ ಕಲಬುರಗಿಯಲ್ಲಿ ಸ್ಥಳೀಯ ಮುಖಂಡರೊಂದಿಗೆ ಸಭೆ ನಡೆಸುವರು.

# ಸಾರ್ವಜನಿಕರಿಗೆ ಶೀಘ್ರ, ಉಚಿತ ಮತ್ತು ಸೌಹಾರ್ದಯುತ ನ್ಯಾಯ ವ್ಯವಸ್ಥೆಗೆ ಲೋಕ ಅದಾಲತ್ ಸದುಪಯೋಗಪಡಿಸಿಕೊಳ್ಳಿ: ಜಿಲ್ಲಾ ನ್ಯಾಯಾಧೀಶ ಸಿದ್ದಲಿಂಗ ಪ್ರಭು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಲೋಕ್ ಅದಾಲತ್ ಸಾರ್ವಜನಿಕರಿಗೆ ಶೀಘ್ರ, ಉಚಿತ ಮತ್ತು ಸೌಹಾರ್ದಯುತ ನ್ಯಾಯ ಒದಗಿಸುವ ವ್ಯವಸ್ಥೆಯಾಗಿದ್ದು, ವ್ಯಾಜ್ಯವಿರುವ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ದಲಿಂಗ ಪ್ರಭು ಅವರು ಹೇಳಿದರು.ನಗರದ ಜಿಲ್ಲಾ ನ್ಯಾಯಾಲಯದ ಒಂದನೇ ಮಹಡಿಯ ವಿಡಿಯೋ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಲೋಕ್ ಅದಾಲತ್ ಉದ್ದೇಶಿಸಿ ಅವರು ಮಾತನಾಡಿದರು.ಭಾರತೀಯ ನ್ಯಾಯಾಂಗ ವ್ಯವಸ್ಥೆಯಲ್ಲಿ ಪರ್ಯಾಯ ವ್ಯಾಜ್ಯ ಪರಿಹಾರ ವ್ಯವಸ್ಥೆಯ ಅತ್ಯಂತ ಪ್ರಮುಖ ಹಾಗೂ ಜನಪ್ರಿಯ ವೇದಿಕೆಯಾಗಿ ಹೊರಹೊಮ್ಮಿರುವ "ರಾಷ್ಟ್ರೀಯ ಲೋಕ ಅದಾಲತ್"ದೇಶಾದ್ಯಂತ ನಡೆಯುತ್ತಿದೆ. ಎಲ್ಲರಿಗೂ ನ್ಯಾಯ, ಶೀಘ್ರ ನ್ಯಾಯ ಮತ್ತು ಉಚಿತ ನ್ಯಾಯ ಒದಗಿಸುವ ಉದಾತ್ತ ಧ್ಯೇಯದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಈ ವ್ಯವಸ್ಥೆಯು ಕಕ್ಷಿದಾರರಿಗೆ ಸುದೀರ್ಘ ಕೋರ್ಟ್ ಪ್ರಕ್ರಿಯೆಗಳಿಂದ ಮುಕ್ತಿ ನೀಡುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.ಸಾಮಾನ್ಯ ನ್ಯಾಯಾಲಯಗಳಲ್ಲಿ ವರ್ಷಾನುಗಟ್ಟಲೆ ನಡೆಯುವ ಪ್ರಕರಣಗಳಿಗೆ ಅದಾಲತ್ ನಲ್ಲಿ ಸುದೀರ್ಘ ವಾದ–ಪ್ರತಿವಾದಗಳಿಲ್ಲದೆ, ಉಭಯ ಪಕ್ಷಕಾರರ ಪರಸ್ಪರ ಒಪ್ಪಂದದೊಂದಿಗೆ ಒಂದೇ ದಿನದಲ್ಲಿ ಅತ್ಯಂತ ವೇಗವಾಗಿ ಶಾಶ್ವತ ಪರಿಹಾರ ಸಿಗುತ್ತದೆ ಎಂದರು.

ರಾಜಿಯಾಗಬಲ್ಲ ಕ್ರಿಮಿನಲ್ ಮೊಕದ್ದಮೆಗಳು, ಸಿವಿಲ್ ದಾವೆಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಮೋಟಾರು ವಾಹನ ಅಪಘಾತ ವಿಮೆ ಪ್ರಕರಣಗಳು, ಕೌಟುಂಬಿಕ ಕಲಹಗಳು ಹಾಗೂ ಭೂಸ್ವಾಧೀನ ಪರಿಹಾರ ಪ್ರಕರಣಗಳನ್ನು ಇಲ್ಲಿ ಬಗೆಹರಿಸಿಕೊಳ್ಳಬಹುದು ಎಂದು ತಿಳಿಸಿದರು.ಇಂದಿನ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಒಟ್ಟು 36,188 ಬಾಕಿ ಇರುವ ಪ್ರಕರಣಗಳ ಪೈಕಿ, 8,882 ಪ್ರಕರಣಗಳನ್ನು ಲೋಕ ಅದಾಲತ್‌ಗೆ ಉಲ್ಲೇಖಿಸಲಾಗಿದ್ದು, ಇದರಲ್ಲಿ 4,957 ಪ್ರಕರಣಗಳು ಸೌಹಾರ್ದಯುತ ರಾಜಿಗೆ ಸಂಪೂರ್ಣವಾಗಿ ಸಿದ್ಧಗೊಂಡಿವೆ ಎಂದು ಅವರು ಮಾಹಿತಿ ನೀಡಿದರು.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೆಚ್.ಎ ಮೋಹನ್ ಅವರು ಮಾತನಾಡಿ, ಲೋಕ ಅದಾಲತ್‌ಗೆ ಯಾವುದೇ ನ್ಯಾಯಾಲಯದ ಶುಲ್ಕ ಇರುವುದಿಲ್ಲ. ಈಗಾಗಲೇ



ಪಾವತಿಸಲಾದ ಕೋರ್ಟ್ ಫೀ ಇದ್ದಲ್ಲಿ, ಪ್ರಕರಣ ರಾಜಿಯಾದ ನಂತರ ಸಂಪೂರ್ಣ ಶುಲ್ಕವನ್ನು ಪಕ್ಷಕಾರರಿಗೆ ಮರುಪಾವತಿಸಲಾಗುತ್ತದೆ. ಲೋಕ ಅದಾಲತ್ ನೀಡುವ ತೀರ್ಪು ಸಿವಿಲ್ ನ್ಯಾಯಾಲಯದ ತೀರ್ಪಿಗೆ ಸಮನಾಗಿರುತ್ತದೆ. ಇದರ ವಿರುದ್ಧ ಯಾವುದೇ ಉನ್ನತ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ, ಇದರಿಂದ ಪ್ರಕರಣಕ್ಕೆ ಅಲ್ಲಿಗೇ ಶಾಶ್ವತ ಮುಕ್ತಿ ಸಿಗುತ್ತದೆ ಎಂದು ಹೇಳಿದರು.ಸಮಾಜದಲ್ಲಿ ಸೌಹಾರ್ದತೆ ಮೂಡಿಸಲು ಮತ್ತು ಸಾಮಾನ್ಯ ನ್ಯಾಯಾಲಯಗಳ ಮೇಲಿನ ಪ್ರಕರಣಗಳ ಹೊರೆಯನ್ನು ಗಣನೀಯವಾಗಿ ಕಡಿಮೆ ಮಾಡಲು ಲೋಕ ಅದಾಲತ್ ಅತ್ಯುತ್ತಮ ವೇದಿಕೆಯಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕಾಗಿದೆ ಎಂದರು.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಮಾತನಾಡಿ, ಲೋಕ್ ಅದಾಲತ್ ನಲ್ಲಿ ಯಾರದೇ ಸೋಲು–ಗೆಲುವಿರುವುದಿಲ್ಲ. ಇಬ್ಬರೂ ಒಟ್ಟಿಗೆ ಕುಳಿತು ಸಂಧಾನ ಮಾಡಿಕೊಳ್ಳುವುದರಿಂದ ಇಬ್ಬರಿಗೂ ಜಯ ಸಿಗುತ್ತದೆ. ಇದು ಸಮಾಜ ಮತ್ತು ಕುಟುಂಬಗಳಲ್ಲಿ ಸೌಹಾರ್ದತೆಯನ್ನು ಕಾಪಾಡಲು ನೆರವಾಗುತ್ತದೆ. ಇಲ್ಲಿ ಸಿವಿಲ್ ಪ್ರೊಸೀಜರ್ ಕೋಡ್ ಅಥವಾ ಸಾಕ್ಷ್ಯ ಕಾಯ್ದೆಯಂತಹ ಕಠಿಣ ಕಾನೂನು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕಾಗಿಲ್ಲ. ಪಕ್ಷಕಾರರು ಯಾವುದೇ ಭಯವಿಲ್ಲದೆ ನೇರವಾಗಿ ಸಂಧಾನಕಾರರೊಂದಿಗೆ ಮುಕ್ತವಾಗಿ ಮಾತನಾಡಬಹುದು ಎಂದು ಅವರು ವಿವರಿಸಿದರು.ಈ ವೇಳೆ ಜಿಲ್ಲಾ ನ್ಯಾಯಾಲಯದ ಅಧಿಕಾರಿ– ಸಿಬ್ಬಂದಿ ಇದ್ದರು.

## ಎಸ್‌ಐಆರ್: ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ಮತದಾರರ ಪಟ್ಟಿ ಪರಿಷ್ಕರಣೆಗೆ ಸಾರ್ವಜನಿಕರು, ರಾಜಕೀಯ ಪಕ್ಷಗಳ ಸಹಭಾಗಿತ್ವ ಅಗತ್ಯ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



:ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಸಂಪೂರ್ಣ ಪಾರದರ್ಶಕತೆಯಿಂದ ಕೂಡಿದ್ದು, ಇದರಲ್ಲಿ ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಸಹಭಾಗಿತ್ವವೂ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಕೆ. ನಾಗೇಂದ್ರಪ್ರಸಾದ್ ಅವರು ಹೇಳಿದರು.ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಗುರುವಾರ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸಬೇಕು ಎಂದು ತಿಳಿಸಿದರು.ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಗಣತಿ ನಮೂನೆಗಳ ವಿತರಣೆಯ ಕಾರ್ಯವು ಪ್ರಗತಿಯಲ್ಲಿದ್ದು, ಈಗಾಗಲೇ ಶೇ.97 ಷ್ಟು ಪ್ರಗತಿ ಸಾಧಿಸಲಾಗಿದೆ. ರಾಜಕೀಯ ಪಕ್ಷಗಳು ನೇಮಕ ಮಾಡಿರುವ ಬೂತ್ ಮಟ್ಟದ ಏಜೆಂಟರುಗಳು ನಮಗೆ ಸಂಪೂರ್ಣ ಮಾಹಿತಿ ನೀಡಿ ಸಹಕರಿಸಬೇಕಿದೆ ಎಂದು ಹೇಳಿದರು.

ಗಣತಿ ನಮೂನೆಗಳನ್ನು ಭರ್ತಿ ಮಾಡುವಾಗ ಸಾರ್ವಜನಿಕರಲ್ಲಿ ಉಂಟಾಗುವ ಗೊಂದಲಗಳ ತಪ್ಪಿಸಲು ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಫಾರಂಗಳಲ್ಲಿನ ಮೊದಲ ಭಾಗ ಹಾಗೂ ಎರಡನೇ ಭಾಗಗಳನ್ನು ಭರ್ತಿ ಮಾಡುವಾಗ ಆಗುವ ಸಾಮಾನ್ಯ ತಪ್ಪುಗಳನ್ನು ತಪ್ಪಿಸಲು ಬಿಎಲ್‌ಓ ಮತ್ತು ಬಿಎಲ್ಎಗಳಿಗೆ ವಿಶೇಷ ತರಬೇತಿ ನೀಡಲಾಗಿದೆ. ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ ಹಾಗೂ ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸಲು ಎಲ್ಲಾ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಜಿಲ್ಲಾ ಚುನಾವಣಾಧಿಕಾರಿ ಕಚೇರಿ ಅಧಿಕಾರಿ– ಸಿಬ್ಬಂದಿ ಹಾಗೂ ಜಿಲ್ಲೆಯ ಎಲ್ಲಾ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ಪ್ರಾದೇಶಿಕ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

## ಮಳೆಗಾಗಿ ವಿಶೇಷ ಪೂಜೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಸಮೀಪದ ಆಶಿಹಾಳ ಗ್ರಾಮದಲ್ಲಿ ರೈತರು, ಮಕ್ಕಳು ಅಗಸಿಗುಡ್ಡೆ ಕಲ್ಲಿಗೆ ನೀರು ಸುರಿಯುವ ಮೂಲಕ ಮಳೆಗಾಗಿ ದೇವರಿಗೆ ಶುಕ್ರವಾರ ವಿಶೇಷ ಪೂಜೆ ಸಲ್ಲಿಸಿದರು.

ಹೋಬಳಿ ವ್ಯಾಪ್ತಿಯಲ್ಲಿ ಸಮರ್ಪಕ ಮಳೆಯಾಗದೆ, ಒಂದೂವರೆ ತಿಂಗಳ ಹಿಂದೆ ಬಿತ್ತನೆ ಮಾಡಿದ್ದ ತೊಗರಿ, ಸಜ್ಜೆ ಸೂರ್ಯಕಾಂತಿ, ಎಳ್ಳು ಒಣಗಲಾರಂಭಿವೆ. ಇದರಿಂದ ರೈತರು, ಮಕ್ಕಳು ಮಳೆಗಾಗಿ ದೇವರ ಮೊರೆ ಹೋಗಿ ಪೂಜೆ ಸಲ್ಲಿಸಿದರು. ಇದಕ್ಕೂ ಮುಂಚೆ ಗ್ರಾಮದ ಎಲ್ಲ ದೇವರಿಗೆ ಪೂಜೆ ನೆರವೇರಿಸಿದ ಭಕ್ತರು, ಉತ್ತಮ ಮಳೆ ಸುರಿದು, ಬೆಳೆ ಸಮೃದ್ಧಿಯಾಗಿ ರೈತರ ಬದುಕು ಹಸನಾಗಲಿ ಎಂದು ಪ್ರಾರ್ಥಿಸಿದರು.

## ಪತ್ರಕರ್ತರ ಆರೋಗ್ಯ ಕಾಪಾಡುವುದು ಸಮಾಜದ ಜವಾಬ್ದಾರಿ: ನಾಗರಾಜ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ರಿ) ಬಳ್ಳಾರಿ ಜಿಲ್ಲಾ ಘಟಕವು ಆರೋಗ್ಯ ಇಲಾಖೆ ಹಾಗೂ ಜಿಲ್ಲಾ ಆಸ್ಪತ್ರೆಯ ಸಹಯೋಗದಲ್ಲಿ ಶನಿವಾರ ನಗರದ ಜಿಲ್ಲಾ ಆಸ್ಪತ್ರೆಯ ಡಿ.ಎನ್.ಬಿ. ಹಾಲ್‌ನಲ್ಲಿ ಪತ್ರಕರ್ತರು ಮತ್ತು ಅವರ ಕುಟುಂಬ ಸದಸ್ಯರಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಲಿಡ್ಕರ್ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು, ಸಮಾಜಕ್ಕೆ ನಿಖರ ಮತ್ತು ತ್ವರಿತ ಮಾಹಿತಿ ತಲುಪಿಸುವ ಜವಾಬ್ದಾರಿಯನ್ನು ಹೊತ್ತಿರುವ ಪತ್ರಕರ್ತರು ಹಗಲು–ರಾತ್ರಿ ಎನ್ನದೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಕಾರಣದಿಂದಾಗಿ ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಲು ಅವರಿಗೆ ಸಮಯ ಸಿಗುವುದಿಲ್ಲ. ಆದ್ದರಿಂದ ಪತ್ರಕರ್ತರ ಆರೋಗ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಇಂತಹ ಆರೋಗ್ಯ ಶಿಬಿರಗಳು ಅತ್ಯಂತ ಅಗತ್ಯವಾಗಿವೆ ಎಂದು ತಿಳಿಸಿದರು.

ಪತ್ರಕರ್ತರು ಆರೋಗ್ಯವಂತರಾಗಿದ್ದರೆ ಮಾತ್ರ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಪತ್ರಕರ್ತರು ಹಾಗೂ ಅವರ ಕುಟುಂಬ ಸದಸ್ಯರಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವಂತೆ ಸಂಬಂಧಪಟ್ಟ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಅವರು ಅಭಿಪ್ರಾಯಪಟ್ಟರು. ಕಾರ್ಯನಿರತ ಪತ್ರಕರ್ತರ ಸಂಘದ ಕ್ಷೇಮಾಭಿವೃದ್ಧಿ ನಿಧಿಗೆ ಲಿಟ್ಕರ್ ನಿಗಮ ಅಧ್ಯಕ್ಷ ಮುಂಡರಗಿ ನಾಗರಾಜ್ 51 ಸಾವಿರ ಚೆಕ್ ವಿತರಣೆ ಮಾಡಿದ್ದಾರೆ. ಡಾ–ಕ್ಟರ್ ಬಸಾರೆಡ್ಡಿ ರವರು ಸಹ 11 ಸಾವಿರ ಪತ್ರಕರ್ತರ ಕ್ಷೇಮಾಭಿವೃದ್ಧಿಗೆ ನೀಡಿದ್ದಾರೆ.

ಆರೋಗ್ಯ ಇಲಾಖೆಯ ಅಧಿಕಾರಿಗಳು ಮಾತನಾಡಿ, ಪತ್ರಕರ್ತರ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸುವ ಉದ್ದೇಶದಿಂದ ವಿವಿಧ ರೀತಿಯ ಆರೋಗ್ಯ ತಪಾಸಣೆಗಳನ್ನು ನಡೆಸಲಾಗುತ್ತಿದ್ದು, ಅಗತ್ಯವಿರುವವರಿಗೆ ಸೂಕ್ತ ವೈದ್ಯಕೀಯ ಸಲಹೆ ಮತ್ತು ಚಿಕಿತ್ಸೆಯ ಕುರಿತು ಮಾರ್ಗದರ್ಶನ ನೀಡಲಾಗುತ್ತಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಆರೋಗ್ಯಾಧಿಕಾರಿ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಬಸಾ ರೆಡ್ಡಿ, ವಾರ್ತಾ ಇಲಾಖೆ ಅಧಿಕಾರಿ ಗುರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ಎನ್. ವೀರಭದ್ರಗೌಡ, ಉಪಾಧ್ಯಕ್ಷ ಎನ್. ಗುರುಶಾಂತ, ಕಾರ್ಯದರ್ಶಿ ಜೋಶಿ, ನಿರ್ದೇಶಕ ಕಿನ್ನೂರೇಶ್ವರ, ಸಂಘದ ಪದಾಧಿಕಾರಿಗಳಾದ ಎಂ. ಜಂಬುನಾಥ್, ವೆಂಕೋಬಿ, ಗೋವರ್ಧನ್ ರೆಡ್ಡಿ, ಪ್ರಸಾದ್, ಖಲಂದರ್ ಸೇರಿದಂತೆ ಅನೇಕ ಪತ್ರಕರ್ತರು, ಸಂಘದ ಸದಸ್ಯರು ಹಾಗೂ ಆರೋಗ್ಯ ಇಲಾಖೆಯ ವೈದ್ಯರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.ಶಿಬಿರದಲ್ಲಿ ಪತ್ರಕರ್ತರು ಮತ್ತು ಅವರ ಕುಟುಂಬ ಸದಸ್ಯರು ಉಚಿತ ಆರೋಗ್ಯ ತಪಾಸಣೆಯ ಸೌಲಭ್ಯವನ್ನು ಪಡೆದುಕೊಂಡರು. ಕಾರ್ಯಕ್ರಮವು ಉತ್ತಮ ಸ್ಪಂದನೆ ಪಡೆದು, ಪತ್ರಕರ್ತರ ಆರೋಗ್ಯ ರಕ್ಷಣೆಗೆ ಇಂತಹ ಶಿಬಿರಗಳನ್ನು ನಿಯಮಿತವಾಗಿ ಆಯೋಜಿಸುವ ಅಗತ್ಯವನ್ನು ಮತ್ತೊಮ್ಮೆ ಒತ್ತಿಹೇಳಿತು.

## ಮಳೆಗಾಗಿ ಬ್ಯಾಯಾರದಲ್ಲಿ ಪರ್ಜನ್ಯ ಹೋಮ



ಇಂಡಿ:ತಾಲೂಕಿನ ಬ್ಯಾಯಾರ ಗ್ರಾಮದಲ್ಲಿ ಮಳೆ ಬರಲೆಂದು ಇಂದು ಪ್ರರ್ಜನ್ಯ ಹೋಮ ಮಾಡಿದರು.ಬೆಳಗ್ಗೆ 7 ರಿಂದ 12 ಗಂಟೆಯ ವರೆಗೆ ಹೋಮವನ್ನು ಚಿಕ್ಕ ಮಣೂರದ ಪೂಜ್ಯ ಶ್ರೀ ಸರ್ವೇಶಾಚಾರ್ಯ ಅಕಮಂಚಿ ಶ್ರೀಗಳು ನಡೆಸಿ ಕೊಟ್ಟರು.ಜಿಲ್ಲಾ ಕೃಷಿ ಇಲಾಖೆ ಅಧಿಕಾರಿ ಡಾ. ಆರ್.ಬಿ.ಬೆಳ್ಳಿ ಮಾತನಾಡಿ ಮಳೆಗಾಗಿ ರೈತರು ದೇವರಲ್ಲಿ ಪ್ರಾರ್ಥಿಸಿದ್ದಾರೆ. ಮುಂಗಾರು ಕೈಕೊಟ್ಟ ಹಿನ್ನಲೆಯಲ್ಲಿ ಮಳೆರಾಯನ ಕೃಪೆಗಾಗಿ ರೈತರು ದೇವರಲ್ಲಿ ಮೊರೆ ಹೋಗಿದ್ದಾರೆ.ಉತ್ತಮ ಮಳೆಯಾಗಿ ಬದುಕು ಬಂಗಾರವಾಗಲಿ ಎಂದು ಹೋಮ ಮಾಡಿದ್ದು ಈ ಪೂಜೆ ಪ್ರಕೃತಿಯಲ್ಲಿ ಸಮತೋಲನ ಕಾಯ್ದು ಕೊಳ್ಳಲು ಕೃಷಿ ಚಟುವಟಿಕೆಗಳಿಗೆ ಅನುಕೂವಾಗಲು ಮಾಡಿದ್ದಾರೆ.ಮಳೆಗೆ ಮತ್ತು ಇಂದ್ರನಿಗೆ ಸಂಬಂದಿತ ಮಂತ್ರ ಹೇಳಿದ್ದಾರೆ. ಆದರೂ ರೈತರು ಹೆಚ್ಚು ಗಿಡಗಳನ್ನು ಬೆಳೆಸಬೇಕು ಎಂದರು.

ಪೂಜ್ಯ ಶ್ರೀ ಸರ್ವೇಶಾಚಾರ್ಯ ಅಕಮಂಚಿ ಶ್ರೀಗಳು ಪ್ರಗತಿಪರ ರೈತರಾದ ಎಸ್.ಟಿ,ಪಾಟೀಲ ನಾದ, ಕೃಷ್ಣ ಆದ್ಯ ಮಾತನಾಡಿದರು,

ಹೋಮದಲ್ಲಿ ಗಂಗಾಧರ ತಳವಾರ,ಸಂಜೀವ ಭೈರಶೆಟ್ಟಿ,ಸಂಗಣ್ಣ ಉಪ್ಪಿನ,ವಿಠ್ಠಲ ಕಾಡಿಮಗೇರಿ,ಶರಣಪ್ಪ ಮಜ್ಜಿಗೆ ಮತ್ತಿತರಿದ್ದರು.

## ಕಡಿಮೆ ಅವಧಿಯಲ್ಲಿ ಶೇಕಡಾ 100 ರಷ್ಟು ಗಣತಿ ನಮೂನೆಗಳನ್ನು ವಿತರಿಸಿದ ಬಿಎಲ್‌ಓ ಗಳಿಗೆ ಅಭಿನಂದನೆ



ಹೊಸಪೇಟೆ ಮಲ್ಲಮ್ಮ ನುಡಿ ವಾರ್ತೆ(ಹೊಸಪೇಟೆ)

ಸಂಬಂಧಿಸಿದಂತೆ ಕಡಿಮೆ ಅವಧಿಯಲ್ಲಿ ಶೇಕಡಾ 100 ರಷ್ಟು ಗಣತಿ ನಮೂನೆಗಳನ್ನು ಅರ್ಹ ಮತದಾರರಿಗೆ ವಿತರಣೆ ಮಾಡಿದ ಬಿ.ಎಲ್.ಓ ಗಳಿಗೆ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಪ್ರಶಂಸೆ ಮತ್ತು ಅಭಿನಂದನೆ ಪತ್ರ ನೀಡಿ ಪ್ರಶಂಸೆ ವ್ಯಕ್ತಪಡಿಸಿದರು.

ವಿಶೇಷ ತೀವ್ರ ಮತದಾರ ಪಟ್ಟಿ ಪರಿಷ್ಕರಣೆ 2026 ಕ್ಕೆ ಸಂಬಂಧಿಸಿದಂತೆ 90 ವಿಜಯನಗರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದಲ್ಲಿ ಬೂತ್ ಮಟ್ಟದ ಅಧಿಕಾರಿಯಾಗಿ ಬಿ.ಎಲ್.ಓ ಗಳಿಗೆ ವಹಿಸಲಾಗಿದ್ದ ಗಣತಿ ನಮೂನೆಗಳನ್ನು ಎಲ್ಲಾ ಅರ್ಹ ಮತದಾರರಿಗೆ ವಿತರಿಸುವುದು ಮತ್ತು ಮೊಬೈಲ್ ಆಪ್ ನಲ್ಲಿ ಎಲ್ಲಾ ಗಣತಿ ನಮೂನೆಗಳ ಡಿಜಟಲೀಕರಣ ಕಾರ್ಯವನ್ನು ಕೇವಲ 10 ದಿನಗಳಲ್ಲಿ ಪೂರ್ಣಗೊಳಿಸಿ ಚುನಾವಣಾ ಪ್ರಮುಖ ಕಾರ್ಯದಲ್ಲಿ ಅತ್ಯಂತ ಕಡಿಮೆ ಅವಧಿಯಲ್ಲಿ ಶೇಕಡಾ 100 ರಷ್ಟು ಗಣತಿ ನಮೂನೆಗಳನ್ನು ಅರ್ಹ ಮತದಾರರಿಗೆ ವಿತರಣೆ ಮಾಡಿ ಅಗತ್ಯ ದತ್ತಾಂಶಗಳನ್ನು ಸಂಗ್ರಹಣೆ ಮಾಡಿ ಬಿ.ಎಲ್.ಓ ಆಪ್ ನಲ್ಲಿ ಡಿಜಟಲೀಕರಣ ಮಾಡಿ ಯಶಸ್ವಿಯಾಗಿ ಮುಕ್ತಾಯಗೊಳಿಸಿದ ಪಾಪಿನಾಯಕನಹಳ್ಳಿ ಕಂದಾಯ ಗ್ರಾಮ ಮತಗಟ್ಟೆ ಅಧಿಕಾರಿಗಳ ಮೇಲ್ವಿಚಾರಕ ಗ್ರಾಮ ಆಡಳಿತಾಧಿಕಾರಿ ವಿನೋದ ಕುಂಬಾರ್, ಕುಂಟಗಲ್ಲಿ ಉರ್ದು ಕಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕಿ ಅಶ್ವಿನಿ ಜಿ.ಕೆ. ಪಾಪಿನಾಯಕನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕಿ ಶಿಲ್ಪಕಲಾ, ಸೀತಾರಾಮ ತಾಂಡ ಕಂದಾಯ ಗ್ರಾಮ ಮತಗಟ್ಟೆ ಅಧಿಕಾರಿಗಳ ಮೇಲ್ವಿಚಾರಕ ಗ್ರಾಮ ಆಡಳಿತಾಧಿಕಾರಿ ಗಂಗಾಧರ, ಹೊಸಪೇಟೆ ಮತಗಟ್ಟೆ ಅಧಿಕಾರಿಗಳಿಗೆ ಹಾಗೂ ಮೇಲ್ವಿಚಾರಕರಿಗೆ ಪ್ರಶಂಸಾ ಪತ್ರವನ್ನು ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಈ.ಬಾಲಕೃಷ್ಣ, ಉಪವಿಭಾಗಾಧಿಕಾರಿ ಪಿ.ವಿವೇಕಾನಂದ, ತಹಶೀಲ್ದಾರ್ ಶೃತಿ ಸೇರಿದಂತೆ ಇತರರು ಇದ್ದರು.

## ಕಲಾವಿದರಿಗೆ ಧನ-ಕನಕಕ್ಕಿಂತಲೂ ಹೆಚ್ಚಾಗಿ ಪ್ರೋತ್ಸಾಹ, ಗೌರವದ ಅಗತ್ಯವಿದೆ : ಹಿರಿಯ ಕಲಾವಿದೆ ಹನೀಫಾ ಎಮ್.ಶೇಖ್

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಜು.11: ನಾನು ಸ್ವತಃ ಸಾಧನೆ ಮಾಡಿಲ್ಲ, ಬದಲಾಗಿ ಜನರ ಹೃದಯದಲ್ಲಿ ಸ್ಥಾನ ಪಡೆದಿದ್ದೇನೆ. ಕಲಬುರಗಿ ಜಿಲ್ಲೆಯು ಕಲೆಯ ವಿಷಯದಲ್ಲಿ ಸಾಕಷ್ಟು ಹಿಂದುಳಿದಿದ್ದು, ಇಲ್ಲಿನ ಕಲಾವಿದರಿಗೆ ಧನ–ಕನಕಕ್ಕಿಂತಲೂ ಹೆಚ್ಚಾಗಿ ಪ್ರೋತ್ಸಾಹ ಮತ್ತು ಗೌರವದ ಅಗತ್ಯವಿದೆ, ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಹಾಗೂ ಹಿರಿಯ ಕಲಾವಿದೆ ಹನೀಫಾ ಎಮ್.ಶೇಖ್ ಹೇಳಿದರು.ನಗರದ ರಂಗಾಯಣ ಅಡಿಟೋರಿಯಂನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಲಾಗಿದ್ದ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಡತನದ ದಿನಗಳಲ್ಲಿ ತಮಗೆ ಜಾನಪದ ಕಲೆಯೇ ಉಸಿರಾಯಿತು ಎಂದು ಸ್ಮರಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಮತ್ತು ಸಹ–ಕಲಾವಿದರು ನನ್ನೊಂದಿಗಿರುವಾಗ ನಾನು ಬಡವಳಲ್ಲ, ಶ್ರೀಮಂತೆ ಎಂದ ಅವರು, ಇಲಾಖೆಯ ಬೆಂಬಲವನ್ನು ಶ್ಲಾಘಿಸಿ, ತಮ್ಮದೇ ಸ್ವಂತ ರಚನೆಯ ಭಜನಾ ಗೀತೆಯನ್ನು ಹಾಡಿ ಪ್ರೇಕ್ಷಕರಲ್ಲಿ ಸಂತಸ ತುಂಬಿಸಿದರು. ಕಲಾವಿದರು ತಮ್ಮ ದಾಖಲೆಗಳನ್ನು ಸಕಾಲದಲ್ಲಿ ಸರ್ಕಾರ–ಕ್ಕೆ ಸಲ್ಲಿಸಿ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದರು.ಕನ್ನಡ ಮತ್ತು ಸಾಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಅವರು ಮಾತನಾಡಿ, ಕಲ್ಯಾಣ ಕರ್ನಾಟಕವು ವಚನ, ತತ್ವಪದ ಹಾಗೂ ದಾಸ ಪರಂಪರೆಯ ಮೂಲಕ ಜಗತ್ತಿಗೆ ಮಹಿಳಾ ಧ್ವನಿಯನ್ನು ಪರಿಚಯಿಸಿದ ಸಾಂಸ್ಕೃತಿಕ ತಾಯಿ ನೆಲ. ಸಂಪ್ರದಾಯಸ್ಥ ಕುಟುಂಬದಿಂದ ಬಂದು ತತ್ವಪದಗಳ ಮೂಲಕ ಸಾಂಸ್ಕೃತಿಕ ಚರಿತ್ರೆ ಸೃಷ್ಟಿಸಿದ ಹನೀಫಾ ಎಮ್.ಶೇಖ್ ಅವರ ಬದುಕು ಇಂದಿನ ಪೀಳಿಗೆಗೆ ಪ್ರೇರಣೆಯಾಗಿದೆ ಎಂದರು. ರಂಗಾಯಣ ಆಡಳಿತಾಧಿಕಾರಿ ಸಿದ್ರಾಮ ಸಿಂಧೆ ಅವರು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಕಡಿಕೋಲ ಮಡಿವಾಳಪ್ಪನವರ ತತ್ವಪದಗಳನ್ನು ಗಾಯನ ಮತ್ತು ಸಂಗೀತದ ಮೂಲಕ ಇಂದಿನ ಪೀಳಿಗೆಗೂ ತಲುಪಿಸಿ, ನಾಡಿನ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಇವರ ಕೊಡುಗೆ ಅಪಾರವಾಗಿದೆ ಎಂದರು.ನಶಿಸಿಹೋಗುತ್ತಿರುವ ಸಾಂಪ್ರದಾಯಿಕ ಕಲೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಇಂತಹ ಹಿರಿಯ ತತ್ವೋಪದೇಶಕಾರರನ್ನು ಗುರುತಿಸಿ ವೇದಿಕೆ ಕಲ್ಪಿಸಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಅಭಿನಂದನೆ ಸಲ್ಲಿಸಲಿಸಿದರು.

## ಜವಾಹರ ನವೋದಯ ಪ್ರವೇಶ ಪರೀಕ್ಷೆಗೆ: ಅರ್ಜಿ ಆಹ್ವಾನ

ವಿಜಯಪುರ,ಜು.11: ಆಲಮಟ್ಟಿಯ ಜವಾಹರ ನವೋದಯ ವಿದ್ಯಾಲಯದಲ್ಲಿ 2027–28ನೇ ಶೈಕ್ಷಣಿಕ ಸಾಲಿನ 6ನೇ ತರಗತಿಗೆ ಪ್ರವೇಶ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಜವಾಹರ ನವೋದಯ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವೇಶ ಪರೀಕ್ಷೆಯು ನವೆಂಬರ್ 28 ರಂದು ನಡೆಯಲಿದ್ದು. ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. https:/navodaya.gov.in ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಲಮಟ್ಟಿಯ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರನ್ನು ಸಂಪರ್ಕಿಸಬಹುದಾಗಿದೆ ಎಂದು ಜವಾಹರ ನವೋದಯ ವಿದ್ಯಾಲಯ ಪ್ರಾಚಾರ್ಯರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಲಾ ಸಂಸತ್ ಚುನಾವಣೆ ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ಪಾಠ



**ಬಾಗಲಕೋಟೆ:** ನಗರದ ಬಿವಿವಿ ಸಂಘದ ಬಸವೇಶ್ವರ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಹೈಸ್ಕೂಲ್ ವಿಭಾಗದಲ್ಲಿ 2026–27 ನೇ ಶೈಕ್ಷಣಿಕ ವರ್ಷದ ಶಾಲಾ ಸಂಸತ್ ಚುನಾವಣೆ ಶನಿವಾರ ಶಿಸ್ತುಬದ್ಧವಾಗಿ ನಡೆಯಿತು.

ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಅರಿವು, ಮತದಾನದ ಮಹತ್ವ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವ ಉದ್ದೇಶದಿಂದ ಚುನಾವಣೆಯನ್ನು ಆಯೋಜಿಸಲಾಗಿತ್ತು.

ಚುನಾವಣೆಯಲ್ಲಿ ವಿವಿಧ ಹುದ್ದೆಗಳಿಗೆ 12 ಅಭ್ಯರ್ಥಿಗಳು ಸ್ಪರ್ಧಿಸಿದ್ದು, ಅಭ್ಯರ್ಥಿಗಳು ತಮ್ಮ ಚುನಾವಣಾ ಭರವಸೆಗಳು ಹಾಗೂ ಕಾರ್ಯಯೋಜನೆಗಳನ್ನು ವಿದ್ಯಾರ್ಥಿಗಳ ಮುಂದೆ ಮಂಡಿಸಿದರು. ನಂತರ ರಹಸ್ಯ ಮತದಾನದ ಮೂಲಕ ಮತದಾನ ಪ್ರಕ್ರಿಯೆ ನಡೆಸಲಾಯಿತು. ರಾಷ್ಟ್ರೀಯ ಚುನಾವಣೆಯ ಮಾದರಿಯಲ್ಲೇ ಮತದಾನ ಹಾಗೂ ಮತ ಎಣಿಕೆ ಪ್ರಕ್ರಿಯೆ ನಡೆಸಿ, ಫಲಿತಾಂಶವನ್ನು ಘೋಷಿಸಲಾಯಿತು.

ಶಾಲೆಯ 1025 ವಿದ್ಯಾರ್ಥಿಗಳ ಪೈಕಿ ವರ್ಗವಾರು ಆಯ್ಕೆಯಾದ 64 ಮತದಾರರು ತಮ್ಮ ಮತ ಚಲಾಯಿಸಿ ಪ್ರತಿನಿಧಿಗಳನ್ನು ಆಯ್ಕೆ ಮಾಡಿದರು. ಈ ಮೂಲಕ ವಿದ್ಯಾರ್ಥಿಗಳಿಗೆ ಚುನಾವಣಾ ಪ್ರಕ್ರಿಯೆ, ಮತದಾನದ ಜವಾಬ್ದಾರಿ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಬಗ್ಗೆ ಪ್ರಾಯೋಗಿಕ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಉಪ ಪ್ರಾಚಾರ್ಯ ಎಸ್.ಕೆ. ರಾಥೋಡ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಮತದಾನದ ಮಹತ್ವ, ಉತ್ತಮ ನಾಯಕತ್ವದ ಅಗತ್ಯ ಹಾಗೂ ಜವಾಬ್ದಾರಿಯುತ ನಾಗರಿಕರಾಗಿ ಬೆಳೆಯುವ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.

ಶಾಲಾ ಸಂಸತ್ ಸಂಯೋಜಕ ಎಂ.ವೈ. ಕೂಗನವರ ನೇತೃತ್ವದಲ್ಲಿ ಚುನಾವಣೆ ಯಶಸ್ವಿಯಾಗಿ ನಡೆಯಿತು. ಆರ್.ವಿ. ಮುದಿಯಪ್ಪನವರ, ಆರ್.ಎಸ್.ಕ್ಯಾತನ್ನವರ, ಎಸ್.ಬಿ.ಗಲಗಲಿ, ಎಸ್.ಎಸ್.ಬದಾಮಿ, ಎಸ್.ಬಿ.ಮಡಿವಾಳರ, ಆರ್.ಎಂ.ಬೆಣ್ಣೂರ, ಎಚ್.ಎ.ಪಾಟೀಲ, ಪಿ.ಆರ್.ಬಿಲ್ಲಾರ, ಆರ್.ಜಿ.ಕುಲಕರ್ಣಿ ಸೇರಿದಂತೆ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಗ್ರಾಮ ಆಡಳಿತಾಧಿಕಾರಿ ನೇಮಕಾತಿ: ಕ. ಕರ್ನಾಟಕ ವೃಂದಕ್ಕೆ ಸ್ಪರ್ಧಾತ್ಮಕ ಪರೀಕ್ಷೆ

**ಬೆಂಗಳೂರು:** ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ವಿವಿಧ ಜಿಲ್ಲೆಗಳಲ್ಲಿನ ಗ್ರೂಪ್–ಸಿ ವೃಂದದ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಧಿಸೂಚನೆ ಹೊರಡಿಸಿದೆ. ಕಲ್ಯಾಣ–ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಧಿಸೂಚನೆಯ ಪ್ರಕಾರ, ಕಲಬುರಗಿ ಜಿಲ್ಲೆಯಲ್ಲಿ 40 ಹುದ್ದೆಗಳು, ಬೀದರ್‌ನಲ್ಲಿ 17 ಹುದ್ದೆಗಳು, ಮತ್ತು ರಾಯಚೂರಿನಲ್ಲಿ 10 ಹುದ್ದೆಗಳು ಖಾಲಿ ಇದ್ದು, ಒಟ್ಟು 67 ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಭರ್ತಿ ಮಾಡಲಾಗುತ್ತದೆ.

ಅಭ್ಯರ್ಥಿಗಳು ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 81 ಸೇವನೆ 2017ರ ಪ್ರಕಾರ, ಸಿ.ಬಿ.ಎಸ್.ಇ, ಐ.ಸಿ.ಎಸ್.ಸಿ, ಇತರೆ ರಾಜ್ಯ ಮಂಡಳಿಗಳ ಕ್ಲಾಸ್ 12 ಪರೀಕ್ಷೆಗಳು, ನ್ಯಾಷನಲ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್) ನಡೆಸುವ ಹೆಚ್.ಎಸ್.ಸಿ ಕೋರ್ಸ್‌ಗಳು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸಲಾಗಿದೆ. ಜೊತೆಗೆ ಜೆ.ಓ.ಸಿ ವೃತ್ತಿ ಶಿಕ್ಷಣ ಕೋರ್ಸ್‌ಗಳು ಕೂಡ ಪಿ.ಯು.ಸಿಗೆ ಸಮಾನವೆಂದು ಪರಿಗಣಿಸಲಾಗಿದೆ.

ಅರ್ಜಿ ಸಲ್ಲಿಕೆ ಪ್ರಕ್ರಿಯೆ ಜುಲೈ 11ರಿಂದ ಆರಂಭವಾಗಿ ಜುಲೈ 30ರವರೆಗೆ ನಡೆಯಲಿದ್ದು, ಶುಲ್ಕ ಪಾವತಿಗೆ ಕೊನೆಯ ದಿನಾಂಕ ಜುಲೈ 31 ಎಂದು ನಿಗದಿಯಾಗಿದೆ. ಸ್ಪರ್ಧಾತ್ಮಕ ಪರೀಕ್ಷೆ ಅಕ್ಟೋಬರ್ 25, 2026ರಂದು ಎರಡು ಹಂತಗಳಲ್ಲಿ ನಡೆಯಲಿದೆ. ಬೆಳಿಗ್ಗೆ 10.30ರಿಂದ 12.30ರವರೆಗೆ ಮತ್ತು ಮಧ್ಯಾಹ್ನ 2.30ರಿಂದ 4.30ರವರೆಗೆ.

ಅಭ್ಯರ್ಥಿಗಳ ಕನಿಷ್ಠ ವಯಸ್ಸು 18 ವರ್ಷ ಮತ್ತು ಗರಿಷ್ಠ ವಯಸ್ಸು 35 ವರ್ಷವಾಗಿರಬೇಕು. ಮೀಸಲಾತಿ ವರ್ಗದ ಅಭ್ಯರ್ಥಿಗಳಿಗೆ ಸರ್ಕಾರದ ನಿಯಮಾನುಸಾರ ವಯೋಮಿತಿ ಸಡಿಲಿಕೆ ನೀಡಲಾಗುತ್ತದೆ.

ಪರೀಕ್ಷಾ ಶುಲ್ಕ ಸಾಮಾನ್ಯ ವರ್ಗದವರಿಗೆ ₹750, ಮೀಸಲಾತಿ ವರ್ಗದವರಿಗೆ ₹500 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ₹250 ಎಂದು ನಿಗದಿಯಾಗಿದೆ. ಪರೀಕ್ಷೆ ಎರಡು ಪತ್ರಿಕೆಗಳಲ್ಲಿ ನಡೆಯಲಿದೆ. ಪತ್ರಿಕೆ 1ರಲ್ಲಿ ಸಾಮಾನ್ಯ ಜ್ಞಾನ, ಕರ್ನಾಟಕದ ಇತಿಹಾಸ, ಭೂಗೋಳ, ಆಡಳಿತ ವ್ಯವಸ್ಥೆ, ಸಂವಿಧಾನ ಮತ್ತು ಗ್ರಾಮೀಣ ಅಭಿವೃದ್ಧಿ ವಿಷಯಗಳು ಇರಲಿವೆ. ಪತ್ರಿಕೆ 2 ಕನ್ನಡ ಮತ್ತು ಇಂಗ್ಲಿಷ್ ಭಾಷಾ ಪೇಪರ್ ಆಗಿರಲಿದೆ. ಪ್ರತಿ ಪತ್ರಿಕೆಗೆ 100 ಅಂಕಗಳು, 2 ಗಂಟೆಗಳ ಅವಧಿ. ತಪ್ಪು ಉತ್ತರಕ್ಕೆ 0.25 ಅಂಕ ಕಡಿತವಾಗಲಿದೆ.

ಅಭ್ಯರ್ಥಿಗಳಿಗೆ ಸರ್ಕಾರದ ಮೀಸಲಾತಿ ನೀತಿಯಂತೆ ವರ್ಗವಾರು ಮೀಸಲಾತಿ ಅನ್ವಯವಾಗುತ್ತದೆ. Cat-1, 2A, 2B, 3A, 3B, SC, ST, ಮಹಿಳಾ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು, ಕನ್ನಡ ಮಾಧ್ಯಮ ವಿದ್ಯಾರ್ಥಿಗಳು, ಟ್ರಾನ್ಸ್‌ಜೆಂಡರ್ ಅಭ್ಯರ್ಥಿಗಳು ಹಾಗೂ ಕಲ್ಯಾಣ ಕರ್ನಾಟಕ ವೃಂದದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗಲಿದೆ. ಅಂಗವಿಕಲ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕ ಹಾಗೂ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುತ್ತದೆ. ಅರ್ಜಿ ಸಲ್ಲಿಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್ ಮೂಲಕ ಮಾತ್ರ ಸಾಧ್ಯ. ಅರ್ಜಿ ಸಲ್ಲಿಸುವಾಗ ಪಿ.ಯು.ಸಿ ಪ್ರಮಾಣಪತ್ರ, ಜನ್ಮದಿನಾಂಕದ ದಾಖಲೆ, ಮೀಸಲಾತಿ ಪ್ರಮಾಣಪತ್ರ ಹಾಗೂ ಗುರುತಿನ ಚೀಟಿ ಸಲ್ಲಿಸಬೇಕಾಗುತ್ತದೆ.

ಪರೀಕ್ಷಾ ಕೇಂದ್ರಗಳು ಕಲಬುರಗಿ, ಬೀದರ್ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಇರಲಿದ್ದು, ಅಭ್ಯರ್ಥಿಗಳು ತಮ್ಮ ಆಯ್ಕೆಯ ಕೇಂದ್ರವನ್ನು ಅರ್ಜಿಯಲ್ಲಿ ಸೂಚಿಸಬಹುದು. ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳಲ್ಲಿ ನೇಮಕಾತಿ ನೀಡಲಾಗುತ್ತದೆ. ಈ ನೇಮಕಾತಿ ಕ್ರಮದಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಯುವಕರಿಗೆ ಸರ್ಕಾರಿ ಸೇವೆಯಲ್ಲಿ ಅವಕಾಶ ದೊರೆಯಲಿದ್ದು, ಗ್ರಾಮೀಣ ಆಡಳಿತ ವ್ಯವಸ್ಥೆಯಲ್ಲಿ ಹೊಸ ಶಕ್ತಿಯು ಸೇರ್ಪಡೆಯಾಗಲಿದೆ.

# ಬೃಹತ್ ಡ್ರಗ್ ಜಾಲ ಪತ್ತೆ: 10 ಲಕ್ಷ ನಗದು ಬಹುಮಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



"ಯಾವುದೇ ಪೊಲೀಸ್ ಅಧಿಕಾರಿಗಳು ಡೀಲ್ ಗಳು ಹಾಗೂ ಅಪರಾಧಗಳಲ್ಲಿ ಭಾಗಿಯಾಗಬಾರದು. ಇಂತಹ ವಿಚಾರದಲ್ಲಿ ಭಾಗಿಯಾದರೆ ನಿರ್ದಾಕ್ಷಣ್ಯ ಕ್ರಮ ಕೈಗೊಳ್ಳಲಾಗುವುದು. ಇದು ನನ್ನ ಮನವಿ ಎಂದಾದರೂ ಭಾವಿಸಿ, ಸೂಚನೆ ಎಂದಾದರೂ ಭಾವಿಸಿ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದ ಆವರಣದಲ್ಲಿ ಶನಿವಾರ ನಡೆದ ರಾಜ್ಯದ ಜಿಲ್ಲಾ ಘಟಕಗಳಿಗೆ 32 ಅತ್ಯಾಧುನಿಕ ಮೊಬೈಲ್ ಫೊರೆನ್ಸಿಕ್ ವ್ಯಾನ್ ಗಳು ಹಾಗೂ 75 ಬೊಲೆರೋ ವಾಹನಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

**ಡ್ರಗ್ ಜಾಲ ಪತ್ತೆ ಮಾಡಿದ ಪೊಲೀಸರ ತಂಡಕ್ಕೆ 10 ಲಕ್ಷ ನಗದು ಬಹುಮಾನ:** "ಇದು ನಮ್ಮ ಪೊಲೀಸ್ ಇಲಾಖೆಗೆ ಹೊಸ ಶಕ್ತಿ ತುಂಬಲಾಗುತ್ತಿದೆ. ಗಡಿಯಲ್ಲಿ ಸೈನಿಕ, ಗಡಿಯೊಳಗೆ ಆರಕ್ಷಕ. ಈ ಇಬ್ಬರಿಂದ ನಮ್ಮ ರಾಜ್ಯ ಹಾಗೂ ದೇಶ ನೆಮ್ಮದಿಯಾಗಿ ಬದುಕಲು ಸಾಧ್ಯವಾಗುತ್ತಿದೆ. ನಿಮಗೆ ಸರ್ಕಾರದ ಪರವಾಗಿ ಅಭಿನಂದನೆಗಳು. ಸಾಧನೆ ಸಾಮರ್ಥ್ಯಕ್ಕಿಂತ ನಿಮ್ಮ ಗುರಿ ನಿರ್ಧಾರ ಮಾಡಿದಾಗ ಜಯ ನಿಮ್ಮದಾಗಲಿದೆ" ಎಂದರು.

"ನಮ್ಮ ಪೊಲೀಸರು ಒಂದು ವರ್ಷದಲ್ಲಿ 375 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಪೊಲೀಸ್ ಇಲಾಖೆ ಅಧಿಕಾರಿಗಳು 1500 ಡ್ರಗ್ ಪೆಡ್ಲರ್ ಗಳನ್ನು ಬಂಧಿಸಿದ್ದು, ಇದು ದೊಡ್ಡ ದಾಖಲೆ. ಇಡೀ ದೇಶ ಕರ್ನಾಟಕವನ್ನು ಗಮನಿಸುತ್ತಿದೆ. ಡ್ರಗ್ಸ್ ಜಾಲವನ್ನು ಬೇಧಿಸಿದ ತಂಡಕ್ಕೆ ಸರ್ಕಾರ 10 ಲಕ್ಷದ ನಗದು ಬಹುಮಾನ ನೀಡಲು ತೀರ್ಮಾನಿಸಿದೆ. ಎಲ್ಲಾ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಪ್ರತಿಯೊಬ್ಬ ನಾಗರಿಕನೂ ಇಲಾಖೆ ಮೇಲೆ ಗೌರವ ಇಟ್ಟುಕೊಳ್ಳುವಂತೆ ಕೆಲಸ ಮಾಡಬೇಕು. ನಿಮ್ಮ ಯಶಸ್ಸೇ ಸರ್ಕಾರದ ಯಶಸ್ಸು" ಎಂದು ತಿಳಿಸಿದರು.

"ಇತ್ತೀಚೆಗೆ ಕೇರಳ ಗೃಹಸಚಿವರಾದ ರಮೇಶ್ ಚೆನ್ನಿತ್ತಾಲ ಅವರು ನನ್ನನ್ನ ಭೇಟಿ ಮಾಡಿ ಕರ್ನಾಟಕ ಗಡಿ ದಾಟಿ ಯಾವುದೇ ಮಾದಕ ವಸ್ತು ಕೇರಳ ಗಡಿ ಮೂಲಕ ಹೋಗಬಾರದು ಎಂಬ ವಿಚಾರವಾಗಿ ಕೆಲವು ಮಾಹಿತಿ ಹಾಗೂ ಮನವಿ ನೀಡಿದ್ದಾರೆ. ನಮ್ಮ ರಾಜ್ಯದಲ್ಲಿ ಮಾದಕ ವಸ್ತು ಬರದಂತೆ ತಡೆಯಲಾಗುವುದು ಎಂದು ಅವರಿಗೆ ಆಶ್ವಾಸನೆ ನೀಡಿದ್ದೇನೆ" ಎಂದು ತಿಳಿಸಿದರು.

"ನಮ್ಮ ಪೊಲೀಸ್ ಇಲಾಖೆಗೆ ದೇಶದಲ್ಲೇ ದಕ್ಷ ಇಲಾಖೆ ಎಂದು ಹೆಸರು ಪಡೆದಿದೆ. ಪೊಲೀಸ್ ಸಿಬ್ಬಂದಿಗಳ ಪರಿಶ್ರಮ, ನಿಷ್ಠೆ, ಕಾರ್ಯಕ್ಷಮತೆಯಿಂದ ಈ ಹೆಸರು ಬಂದಿದೆ. ಹಗಲು ರಾತ್ರಿ ನಿಮ್ಮ ಸೇವೆಗೆ ಸರ್ಕಾರ ನಿಮ್ಮ ಪರವಾಗಿ ನಿಲ್ಲಲಿದೆ. ಕೆಲವು ಸಂದರ್ಭದಲ್ಲಿ ಅನಾಹುತಗಳು ಆಗುತ್ತವೆ. ಅಂತಹ ಪರಿಸ್ಥಿತಿಯಲ್ಲೂ ನಾನು ಹಾಗೂ ನಮ್ಮ ಸರ್ಕಾರ ನಿಮ್ಮ ಆತ್ಮಸ್ಥೈರ್ಯ ಕುಸಿಯದಂತೆ ನೋಡಿಕೊಳ್ಳಲಾಗಿದೆ. ಕಾನೂನು ಕಾಯುತ್ತೀರಿ, ಸಮಾಜದ ಹಿತ ಕಾಪಾಡುತ್ತೀರಿ. ಅಪರಾಧಗಳಲ್ಲಿ ವಿವಿಧ ರೂಪಗಳಿವೆ. ತಂತ್ರಜ್ಞಾನ, ಎಐ ಬಂದ ಬಳಿಕ ಅಪರಾಧ ಪತ್ತೆಹಚ್ಚಲು ಅನೇಕ ಕ್ರಮ ಕೈಗೊಳ್ಳಲಾಗಿದೆ. ಗೂಂಡಾಗಿರಿ ತಡೆಗಟ್ಟಲು, ಎಲ್ಲಾ ಠಾಣೆಗಳಲ್ಲಿ ಪಡೆ ರಚಿಸಲು ನಿರ್ದೇಶನ ನೀಡಿದ್ದೇನೆ" ಎಂದರು.

**ದೇವಾಲಯಗಳ ಹುಂಡಿ ರಕ್ಷಣೆಗೆ ತೀರ್ಮಾನ:** "ರಾಮಮಂದಿರದಲ್ಲಿ ಯಾವ ರೀತಿ ಕಳ್ಳತನವಾಗಿದೆ ಎಂದು ಗಮನಿಸಿದ್ದೀರಿ. ನಮ್ಮ ರಾಜ್ಯದಲ್ಲಿ ಮುಂಜಾಗ್ರತೆಯಿಂದ ಮುಜರಾಯಿ ಇಲಾಖೆಯ ಎಲ್ಲಾ ದೇವಾಲಯಗಳಲ್ಲಿ ಸ್ಥಳೀಯ ಮುಖಂಡರು, ಪೊಲೀಸ್ ಅಧಿಕಾರಿಗಳು ಸೇರಿ ಹುಂಡಿ ತೆಗೆಯುವುದರಿಂದ, ಹಣ ಎಣಿಕೆ ಮಾಡುವುದು ಸೇರಿ ಅವುಗಳನ್ನು ಬ್ಯಾಂಕಿಗೆ ಸಲ್ಲಿಸುವವರೆಗೂ ಎಲ್ಲವನ್ನು ವಿಡಿಯೋ ದಾಖಲಾತಿ ಮಾಡಬೇಕು ಎಂದು ಮಾರ್ಗದರ್ಶನ ನೀಡಿದ್ದೇನೆ. ಇದರ ಬಗ್ಗೆ ಬೆಳಗಾವಿಯಲ್ಲಿ ಘೋಷಣೆ ಮಾಡಲಾಗಿದೆ. ಸಧ್ಯದಲ್ಲೇ ಆದೇಶ ಹೊರಡಿಸಲಾಗುವುದು. ನಮ್ಮ ರಾಜ್ಯದಲ್ಲಿ ಇಂತಹ ಘಟನೆ ನಡೆಯದಂತೆ ನೋಡಿಕೊಳ್ಳಬೇಕಾಗಿರುವುದು ಮುಖ್ಯ. ಯಾವುದೇ ಧರ್ಮದ ದೇವಾಲಯವಿದ್ದರೂ ಸರ್ಕಾರದ ವ್ಯಾಪ್ತಿಯಲ್ಲಿದ್ದರೆ ಅವುಗಳ ರಕ್ಷಣೆ ನಮ್ಮ ಕರ್ತವ್ಯವಾಗಲಿದೆ. ಅಪರಾಧವಾದ ಬಳಿಕ ಹುಡುಕುವುದಕ್ಕಿಂತ ಅಪರಾಧ ನಡೆಯದಂತೆ ಎಚ್ಚರಿಕೆ ವಹಿಸಬೇಕು. ನಮ್ಮ ತೀರ್ಮಾನ ನೋಡಿ, ಖಾಸಗಿ ದೇವಾಲಯ ಹಾಗೂ ಮಠ ಮಾನ್ಯಗಳು ಎಚ್ಚರಿಕೆ ವಹಿಸಬೇಕಾಗುತ್ತದೆ" ಎಂದು ತಿಳಿಸಿದರು.

**ಯಾರೊಬ್ಬರೂ ಲಂಚ ಕೊಟ್ಟು ಪೊಲೀಸ್ ಇಲಾಖೆ ಸೇರುವಂತಿಲ್ಲ:** "ಪ್ರಿಯಾಂಕ್ ಖರ್ಗೆ ಅವರು ಈ ಇಲಾಖೆ ಬಗ್ಗೆ ಬಹಳ ಆಸಕ್ತಿ ಹೊಂದಿದ್ದರು. ಕಳೆದ ಸರ್ಕಾರದ ಅವಧಿಯಲ್ಲಿ ಹಗರಣವನ್ನು ತಮ್ಮದೇ ಆದ ರೀತಿ ತನಿಖೆ ಮಾಡಿ ಸರ್ಕಾರ ಹಾಗೂ ಜನರ ಗಮನ ಸೆಳೆದಿದ್ದರು. ನೇಮಕಾತಿಯಲ್ಲಿ ಪಾರದರ್ಶಕತೆ ಇರಬೇಕು, ಯಾರೊಬ್ಬರೂ ಲಂಚ ಕೊಟ್ಟು ಕೆಲಸಕ್ಕೆ ಸೇರಬಾರದು. ಅರ್ಹತೆಯೇ ಹುದ್ದೆಯ ನೇಮಕಾತಿಗೆ ಮುಖ್ಯ ಮಾನದಂಡ ಎಂಬ ಅಡಿಪಾಯ ಹಾಕಿದ್ದಾರೆ. ಸರ್ಕಾರ ನಿಮ್ಮ ಜೊತೆ ಇರುತ್ತದೆ. ನೀವು ನಿಮ್ಮ ಕರ್ತವ್ಯನ್ನು ಸರಿಯಾಗಿ ನಿಭಾಯಿಸಿ" ಎಂದು ಕಿವಿಮಾತು ಹೇಳಿದರು.

# ಮಾನವ ಸಂಪನ್ಮೂಲದ ಸದ್ಬಳಕೆಯಾಗಲಿ: ನರಗುಂದ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ




ಜನಸಂಖ್ಯೆ ಹೆಚ್ಚಳ ಹಲವು ಸಮಸ್ಯೆ ಮತ್ತು ಸವಾಲುಗಳಿಗೆ ದಾರಿ ಮಾಡಿಕೊಡುತ್ತದೆ. ಈ ಬಗ್ಗೆ ಸಮಾಜದಲ್ಲಿ ಅರಿವು ಮೂಡಿಸುವ ಕಾರ್ಯವನ್ನು ಯುವಕರು ಮಾಡಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್.ಎಸ್.ಎಸ್ ಘಟಕಗಳು ಮತ್ತು ಅರ್ಥಶಾಸ್ತ್ರ ವಿಭಾಗ ಶನಿವಾರ ಆಯೋಜಿಸಿದ್ದ ವಿಶ್ವ ಜನಸಂಖ್ಯಾ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಾನವನ ಸಾಮಾಜಿಕ ಜೀವನ, ಪರಿಸರ, ವಸತಿ, ಆರೋಗ್ಯ, ಶಿಕ್ಷಣ, ಉದ್ಯೋಗ ಮುಂತಾದವುಗಳ ಮೇಲೆ ಇದು ಪರಿಣಾಮ ಬೀರುವದರಿಂದ ಇದರ ನಿಯಂತ್ರಣ ಅವಶ್ಯವಾಗಿದೆ. ಜನಸಂಖ್ಯೆ ದೇಶಕ್ಕೆ ಸಂಪನ್ಮೂಲವಾಗಬೇಕು. ಲಭ್ಯವಿರುವ ಮಾನವ ಸಂಪನ್ಮೂಲವನ್ನು ಪರಿಣಾಮಕಾರಿಯಾಗಿ ಬಳಸಿಕೊಂಡಲ್ಲಿ ಪ್ರಗತಿಯನ್ನು ಸಾಧಿಸಬಹುದಾಗಿದೆ ಎಂದು ಹೇಳಿದರು.

ಜನಸಂಖ್ಯೆ ಹೆಚ್ಚಳದಿಂದಾಗುವ ಸವಾಲುಗಳನ್ನು ಎದುರಿಸಿ ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸಬೇಕಾಗಿದೆ. ಹೆಚ್ಚು ಜನಸಂಖ್ಯೆ ಎಲ್ಲ ಸಮಸ್ಯೆಗಳ ಮೂಲವಾಗಿದೆ. ಸಾಂಘಿಕ ಪ್ರಯತ್ನದಿಂದ ಇದನ್ನು ನಿಯಂತ್ರಿಸಿ ಆರ್ಥಿಕ ಅಭಿವೃದ್ಧಿಯನ್ನು ಹೊಂದಬಹುದು ಎಂದರು. ವಿದ್ಯಾರ್ಥಿನಿ ಸಾರಿಯಾ ಜಲಗೇರಿ ಮಾತನಾಡಿದರು. ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ನಡೆಸಿದ ಪ್ರಬಂಧ ಸ್ಪರ್ಧೆಯಲ್ಲಿ ಅಕ್ಷತಾ ಮುದಿಗೌಡರ ಪ್ರಥಮ, ದೇವಮ್ಮ ಯಡಹಳ್ಳಿ ದ್ವಿತೀಯ ಹಾಗೂ ಸಂಜನಾ ಲಾಗಲೋಟಿ ತೃತೀಯ ಬಹುಮಾನ ಪಡೆದುಕೊಂಡರು.

ಅಮೂಲ್ಯಾ ಡೊಳ್ಳಿ ಪ್ರಾರ್ಥಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್.ವಾಯ್.ಬೊಮ್ಮಣ್ಣವರ ಸ್ವಾಗತಿಸಿದರು. ಉಪನ್ಯಾಸಕಿ ಎ.ಎ.ಗಂಗಲ್ ನಿರೂಪಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್.ಎಂ.ಹಡಪದ ವಂದಿಸಿದರು. ಡಾ.ಎಸ್.ಎಸ್.ಹಂಗರಗಿ ಇದ್ದರು.

# ಸಮುದಾಯ ಭವನ ಕಾಮಗಾರಿಗೆ ಶಾಸಕ ಮೇಟಿ ಭೂಮಿ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಶಾಸಕ ಉಮೇಶ ಮೇಟಿ ಶನಿವಾರ ಬಾಗಲಕೋಟೆ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಸಮುದಾಯ ಭವನಗಳ ನಿರ್ಮಾಣದ 65 ಲಕ್ಷ ರೂ.ಗಳ ವೆಚ್ಚದ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ತಳಗಿಹಾಳ ಗ್ರಾಮದಲ್ಲಿ ಅಮೋಘಸಿದ್ದೇಶ್ವರ ಸಮುದಾಯ ಭವನ, ಸಿರಗುಂಪಿ ಗ್ರಾಮದಲ್ಲಿ ಬೀರಲಿಂಗೇಶ್ವರ ಸಮುದಾಯ ಭವನ, ಬೆನ್ನೂರು ಗ್ರಾಮದಲ್ಲಿ ಲಕ್ಕಮ್ಮದೇವಿ ಹಾಗೂ ವಾಲ್ಮೀಕಿ ಸಮುದಾಯ ಭವನ ಮತ್ತು ನೀಲಾನಗರ ತಾಂಡಾದಲ್ಲಿ ಬಂಜಾರ ಸಮಾಜದ ಸಮುದಾಯ ಭವನಗಳ ನಿರ್ಮಾಣ ಕಾಮಗಾರಿಗಳಿಗೆ ಅವರು ಪೂಜೆ ನೆರವೇರಿಸಿ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಸಮುದಾಯ ಭವನಗಳು ಗ್ರಾಮೀಣ ಜನರಿಗೆ ಮದುವೆ ಮುಂಜುವೆ, ಸಾಮಾಜಿಕ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲು ಅನುಕೂಲತೆ ಕಲ್ಪಿಸುತ್ತವೆ. ಜವಾಬ್ದಾರಿಯಿಂದ ಬಳಸಿಕೊಂಡು ಉಪಯೋಗ ಮಾಡಿಕೊಳ್ಳಬೇಕು ಎಂದರು.

ಕ್ಷೇತ್ರದಲ್ಲಿ ಅನೇಕ ಕಡೆಗಳಲ್ಲಿ ಸಮುದಾಯ ಭವನಗಳ ನಿರ್ಮಾಣದ ಬೇಡಿಕೆಯಿದ್ದು, ಆದ್ಯತೆಯ ಮೇಲೆ ಹಂತ ಹಂತವಾಗಿ ಜನರ ಬೇಡಿಕೆ ಈಡೇರಿಸಲಾಗುವುದು ಎಂದು ಉಮೇಶ ಮೇಟಿ ತಿಳಿಸಿದರು.

ಈ ಸಂದರ್ಭದಲ್ಲಿ ಬಸವಂತಪ್ಪ ಮೇಟಿ, ಎಸ್.ಎನ್.ರಾಂಪುರ, ವೈ. ವೈ. ತಿಮ್ಮಾಪುರ, ರಾಚಪ್ಪ ಪಟ್ಟಣದ, ಈರಯ್ಯ ಹಿರೇಮಠ, ಮುತ್ತನಗೌಡ ಪಾಟೀಲ, ರೇವಣಸಿದ್ದಪ್ಪ ಗಾಡದ, ಮಹದೇವ ಹುಂಡೇಕಾರ, ಮಳಿಯಪ್ಪ ಬಾರಿಗಿಡದ, ಸಿದ್ದಪ್ಪ ವಾಲಿಕಾರ, ಎಚ್.ಆರ್. ಮಳ್ಳಿ, ಮುತ್ತಪ್ಪ ಚಿಂಗಾರಿ ಸೇರಿ ಕಾಂಗ್ರೆಸ್ ಮುಖಂಡರು, ನಿರ್ಮಿತಿ ಕೇಂದ್ರದ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಇಂಡಸ್ಟ್ರಿಯಲ್ ಮಾಫಿಯಾದಿಂದ ನೆಲ, ಜಲ ಹಾಳಗುತ್ತಿದೆ: ಜಗದೀಶ




• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಸರ್ಕಾರವಾಗಲಿ, ಡಿ.ಸಿ, ತಹಶೀಲ್ದಾರ್ ಮುಂತಾದ ಅಧಿಕಾರಿಗಳಾಗಲಿ ಜನರ ಹಿತಕ್ಕಾಗಿ ಕೆಲಸ ಮಾಡಬೇಕು. ಅದು ಬಿಟ್ಟು ಯಾವುದೇ ಕಾರ್ಖಾನೆ ಮಾಫಿಯಾದ ಪರವಾಗಿ ಕೆಲಸ ಮಾಡಬಾರದು ಎಂದು ಬೆಂಗಳೂರು ನಿವಾಸಿ ಹೋರಾಟಗಾರ, ಅಡ್ವೊಕೇಟ್ ಕೆ.ಎನ್.ಜಗದೀಶ್ ಬಲ್ಡೋಟ ವಿರೋಧಿ ಧರಣಿ ವೇದಿಕೆಯಲ್ಲಿ ಮಾತನಾಡಿದರು.

ನಗರಸಭೆ ಆವರಣದ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯಿಂದ ನಡೆಯುತ್ತಿರುವ ಹೋರಾಟಕ್ಕೆ ಜಗದೀಶ್ ಬೆಂಬಲಿಸಿದರು.

ಅವರು ಮಾತನಾಡುತ್ತಾ 'ಕಳೆದ 253 ದಿನಗಳಿಂದ ಕಾರ್ಖಾನೆಗಳ ಮಾಲಿನ್ಯದ ವಿರುದ್ಧ ನಡೆಸುತ್ತಿರುವ ಈ ಹೋರಾಟದ ಬೇಡಿಕೆ ನಮ್ಮ ಪರಿಸರ ನಮ್ಮ ಹಕ್ಕು, ಉಸಿರಾಡಲು ಒಳ್ಳೆ ಗಾಳಿ ಬೇಕು ಎನ್ನುವುದು ಆಗಿದೆ. ಇದನ್ನೂ ಸಹಿತ ಹೋರಾಡಿ ಪಡೆದುಕೊಳ್ಳಬೇಕೇನು ಎಂದು ಪ್ರಶ್ನೆ ಮಾಡಿದರು. ಕಳೆದ 30 ವರ್ಷಗಳಿಂದ ಇಲ್ಲಿ ಸ್ಟೀಲ್ ಸಿಮೆಂಟ್, ಫರ್ಟಿಲೈಜರ್, ವಿದ್ಯುತ್ ತಯಾರಿಸುವ ಕಾರ್ಖಾನೆಗಳನ್ನು ಸ್ಥಾಪಿಸಿದ್ದರಿಂದ ಇಲ್ಲಿನ ಜನ ಆರೋಗ್ಯ, ಕೃಷಿ ಎಲ್ಲವನ್ನು ಕಳೆದುಕೊಂಡಿದ್ದಾರೆ. ಈಗ ಇದರ ಪರಿಣಾಮದಿಂದ ಕಿದ್ವಾಯಿ ಆಸ್ಪತ್ರೆಯಲ್ಲಿ ಕೊಪ್ಪಳದ ಕ್ಯಾನ್ಸರ್ ರೋಗಿಗಳು ಅಧಿಕವಾಗಿ ದಾಖಲಾಗುತ್ತಿದ್ದಾರೆ. ಅಲ್ಲಿ ನಾನು ಹೋಗಿ ನೋಡಲಾಗಿ ಬೆಡ್ ಇಲ್ಲವೆಂದು ಚಿಕಿತ್ಸೆ ಸಿಗದೆ ವಾಪಸ್ಸು ಬರುತ್ತಿದ್ದಾರೆ. ನಾನು ಇದನ್ನು ಕಣ್ಣಾರೆ ನೋಡಿ ಮನಸ್ಸು ತಡೆಯಲಾಗದೆ ಯಾರೂ ಕರೆಯದಿದ್ದರೂ ಬಂದಿದ್ದೇನೆ.

ಹಿರಿಯ ಜೀವಗಳು ಈ ಹೋರಾಟ ಮುನ್ನಡೆಸುತ್ತಿರುವುದು ಕರುಳ ಸಂಕಟವಾಗುತ್ತಿದೆ.

ಇಲ್ಲಿನ ಜಿಲ್ಲಾಧಿಕಾರಿಗಳು ನನ್ನ ಮೇಲೆ ಬೇಕಾದರೆ ಕೇಸ್ ದಾಖಲಿಸಿ ಎಂದು ಹೇಳುತ್ತಿರುವುದು ಸಂವಿಧಾನದತ್ತ ಹುದ್ದೆಯ ಮೇಲೆ ಕುಳಿತುಕೊಳ್ಳಲು ಅನರ್ಹರಾಗಿದ್ದಾರೆ. ಜನರಿಗೆ ಅವರು ಕೆಲಸ ಮಾಡಬೇಕಾಗಿದೆ. ಆದರೆ ಯಾವುದೋ ಎಂ.ಎಲ್.ಎ, ಮಂತ್ರಿಗಳ, ಸರ್ಕಾರದ ಕಾನೂನುಬಾಹಿರ ಪ್ರಭಾವಗಳಿಗೆ ಒಳಗಾಗಿ ಅವರು ಕೆಲಸ ಮಾಡಿದರೆ ಜಿಲ್ಲೆಯ ಜನ ಏನು ಮಾಡಬೇಕು.

ನಾವು ಸ್ವಾತಂತ್ರ್ಯ ಭಾರತ ಅಥವಾ ಅತಂತ್ರ ದೇಶದಲ್ಲಿ ಇದ್ದೇವೆಯೋ ಇದಕ್ಕೆ ಜಿಲ್ಲಾಧಿಕಾರಿ ಉತ್ತರಿಸಬೇಕು. ಜನರ ಆರೋಗ್ಯ, ಜೀವಕ್ಕೆ ಕುತ್ತು ತಂದು ಇಲ್ಲಿ ಏನು ಮಾಡಬೇಕಾಗಿಲ್ಲ. ಇಂಡಸ್ಟ್ರಿಯಲ್ ಮಾಫಿಯಾದಿಂದ ನೆಲ, ಜಲ ಹಾಳು ಮಾಡಿ ಜನರನ್ನು ಎಲ್ಲಿಗೆ ಕಳಿಸುತ್ತೀರಿ. ಕರ್ನಾಟಕದಲ್ಲಿ ಇಂತಹ ಗಂಭೀರ ಸಮಸ್ಯೆಗಳು ಎದುರಾದಾಗ ರಾಜ್ಯದ ಹೋರಾಟಗಾರರು, ನಾಡಿನ ಜನರು ಗಮನಿಸುತ್ತಿದ್ದೇವೆ. ಈ ಹೋರಾಟದ ಬಗ್ಗೆ ಸರಕಾರ ನಿಷ್ಕಾಳಜಿ ಮಾಡಿದರೆ ಮುಂದಿನ ತೀರ್ಮಾನದಲ್ಲಿ ನಾವು ಜನರೊಂದಿಗೆ ಇರುತ್ತೇವೆ. ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಂತದಲ್ಲಿ ನಾನು ಪತ್ರ ಬರೆದು ವಿವರ ಕೇಳುತ್ತೇನೆ ಎಂದರು.

ಧರಣಿಯಲ್ಲಿ ಪ್ರಕಾಶಕ ಡಿ.ಎಂ.ಬಡಿಗೇರ, ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ, ನಿವೃತ್ತ ಪ್ರಾಚಾರ್ಯ ಬಿ.ಜಿ. ಕರಿಗಾರ, ಮಹಿಳಾ ನಾಯಕಿ ಕಾವ್ಯಾ ಗಡಾದ, ಗಂಗಮ್ಮ ಶಂಭುಲಿಂಗಪ್ಪ ಹರಗೇರಿ, ನಿವೃತ್ತ ಅಂಚೆ ಅಧಿಕಾರಿ ರವಿ ಕಾಂತನವರ, ರಾಜಶೇಖರ್ ಏಳುಭಾವಿ, ಕೆ.ಆರ್.ಎಸ್ ಪಕ್ಷದ ಪ್ರವೀಣಕುಮಾರ ಗುನ್ನಳ್ಳಿ, ಮಲ್ಲಪ್ಪ ಮಾದಿನೂರು, ಮಹಾದೇವಪ್ಪ ಮಾವಿನಮಡು, ವೆಂಕಣ್ಣಾಚಾರ ಕಟ್ಟಿ, ಶಿವಪ್ಪ ಹಲಗೇರಿ, ಶಿವಪ್ಪ ಜಲ್ಲಿ, ಮಖ್ಬುಲ್ ರಾಯಚೂರು, ಗವಿಸಿದ್ದಪ್ಪ ಹಲಗಿ, ಗವಿಸಿದ್ದಪ್ಪ ಮಾಲಿಪಾಟೀಲ್, ಭರಮರಾಜ ಮೇಟಿ, ರಾಜಾ ಖಾನ್, ವಿಶ್ವನಾಥ, ವಿಷ್ಣು ಮುಂತಾದವರು ಇದ್ದರು.

